ಸಂಪುಟ: 13 Volume | ಸಂಚಿಕೆ: 313 Issue | ಪುಟಗಳು 08 Pages | ಸೋಮವಾರ 02 ಫೆಬ್ರವರಿ 2026 | ₹6 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಇರುವೆಗಳು ಸಂಗ್ರಹಿಸಿದ ಕಾಳು, ಜೇನುನೊಣಗಳು ಕೂಡಿಟ್ಟ ಜೇನುತುಪ್ಪ, ಜಿಪುಣನ ಸಂಪತ್ತು ಇವೆಲ್ಲಾ ಸಂಪೂರ್ಣ ನಾಶವಾಗುವವು.

–ಸುಭಾಷಿತ

# ನಿರ್ಮಲ ಕರ್ತವ್ಯ ಮಂತ್ರ

## ಕೇಂದ್ರ ಸಚಿವೆಯಿಂದ 2026-27ನೇ ಸಾಲಿನ ಬಜೆಟ್ ಮಂಡನೆ | ದೇಶೀಯತೆಗೆ, ಖಾದಿ, ಆಯುವೇದಕ್ಕೆ ಒತ್ತು

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಕೇಂದ್ರ ಹಣಕಾಸುವ ಸಚಿವ ನಿರ್ಮಲಾ ಸೀತಾರಾಮನ್ ಅವರು ಅವರು ಭಾನುವಾರ 2026–27ನೇ ಸಾಲಿನ ಬಜೆಟ್ ಮಂಡಿಸಿದ್ದು, ಮಂಡಿಸಿದ ಕೇಂದ್ರ ಬಜೆಟ್‌ಗೆ ಪರ–ವಿರೋಧ ವ್ಯಕ್ತವಾಗಿದೆ. ಕತವ್ಯ ಮಂತ್ರ ಜೊತೆಗೆ ಹೂಡಿಕೆ, ಉದ್ಯೋಗ, ಉತ್ಪಾದನೆಗೆ ಒತ್ತು ನೀಡಿರುವುದು ವಿಶೇಷವಾಗಿದೆ.

**ಉದ್ಯೋಗಸೃಷ್ಟಿಗೆ ಒತ್ತು:** ಕೇಂದ್ರ ಹಣಕಾಸುವ ಸಚಿವ ನಿರ್ಮಲಾ ಸೀತಾರಾಮನ್ ಆರ್ಥಿಕ ಬೆಳವಣಿಗೆಯನ್ನು ಉಳಿಸಿಕೊಳ್ಳುವುದು, ಹೂಡಿಕೆ ಹೆಚ್ಚಿಸುವುದು, ವಿತ್ತೀಯ ಶಿಸ್ತನ್ನು ಕಾಯ್ದುಕೊಳ್ಳುವುದು, ಉದ್ಯೋಗ ಸೃಷ್ಟಿಸುವುದಕ್ಕೆ ಹೆಚ್ಚು ಒತ್ತು ನೀಡಿದ್ದಾರೆ. ಮಧ್ಯಂತರ ಬಜೆಟ್ ಸೇರಿದಂತೆ ಒಂಬತ್ತನೇ ಬಾರಿಗೆ ಬಜೆಟ್ ಮಂಡಿಸುವ ಮೂಲಕ ಹೊಸ ದಾಖಲೆ ನಿರ್ಮಿಸಿದ ನಿರ್ಮಲಾ ಅವರು, ಕಳೆದ ನಾಲ್ಕು ವರ್ಷಗಳಂತೆ, ಈ ವರ್ಷವೂ ಕಾಗದರಹಿತ ಬಜೆಟ್ ಅನ್ನು ಮಂಡಿಸಿದ್ದಾರೆ.

**ಕರ್ತವ್ಯ ಭವನದ ಬಜೆಟ್:** ಇಂದು ಲೋಕಸಭೆಯಲ್ಲಿ 9ನೇ ಬಾರಿ ಬಜೆಟ್ ಮಂಡಿಸಿದ ನಿರ್ಮಲಾ ಸೀತಾರಾಮನ್ ಅವರು, ಕರ್ತವ್ಯ ಭವನದಲ್ಲಿ ಸಿದ್ಧಪಡಿಸಲಾದ ಮೊದಲ ಬಜೆಟ್ ಇದಾಗಿರುವುದರಿಂದ, ನಾವು ಮೂರು ಕರ್ತವ್ಯಗಳಿಂದ ಪ್ರೇರಿತರಾಗಿದ್ದೇವೆ. ಸರ್ಕಾರವು ತನ್ನ ಬೆಳವಣಿಗೆಯ ಕಾರ್ಯತಂತ್ರದ ಮೂಲದಲ್ಲಿ, ಈ ಹಣಕಾಸು ವರ್ಷಕ್ಕೆ ಒಟ್ಟಾರೆ ಸಾರ್ವಜನಿಕ ಹೂಡಿಕೆಯನ್ನು ರೂ. 12.2 ಲಕ್ಷ ಕೋಟಿಗೆ ಹೆಚ್ಚಿಸಿತು. ಮೂಲಸೌಕರ್ಯ, ಸಂಪರ್ಕ ಮತ್ತು ದೀರ್ಘಕಾಲೀನ ಉತ್ಪಾದಕತೆಗೆ ಒತ್ತು ನೀಡಿದೆ ಎಂದಿದ್ದಾರೆ.



### ಮಧ್ಯಮ ಮತ್ತು ಸಣ್ಣ ಉದ್ಯಮಿಗಳಿಗೆ ನೆರವು

- ಭವಿಷ್ಯದ ಚಾಂಪಿಯನ್ನಗಳಿಗಾಗಿ 10 ಸಾವಿರ ಕೋಟಿ ರೂಪಾಯಿ ಅನುದಾನ
- ಟಯರ್ 2 ಹಾಗೂ 3 ನಗರಗಳ ಅಭಿವೃದ್ಧಿಗೆ ಸರ್ಕಾರ ಕ್ರಮ
- ಮಧ್ಯಮ ಮತ್ತು ಸಣ್ಣ ಉದ್ಯಮಿಗಳಿಗೆ ಸಾಲದ ನೆರವು.
- ಖಾದಿ ಮತ್ತು ಕರಕುಶಲ ವಸ್ತುಗಳಿಗಾಗಿ ಹೊಸ ಯೋಜನೆ ಘೋಷಣೆ
- ತರಬೇತಿ, ಕೌಶಲ್ಯ ಮತ್ತು ಉತ್ಪಾದನೆಯ ಗುಣಮಟ್ಟ ಸುಧಾರಣೆ
- ಜಾಗತಿಕ ಮಾರುಕಟ್ಟೆ ಮತ್ತು ಬ್ರ್ಯಾಂಡಿಂಗ್ಗೆ ಕೇಂದ್ರ ನೆರವು.

### ಚಿನ್ನ, ಬೆಳ್ಳಿ ಬೆಲೆ ದಿಢೀರ್ ಕುಸಿತ

ಕೇಂದ್ರ ಬಜೆಟ್ 2026ರ ಮಂಡನೆಗೆ ಕ್ಷಣಗಣನೆ ಶುರುವಾಗಿದ್ದು, ಈ ನಡುವೆ ಚಿನ್ನ ಮತ್ತು ಬೆಳ್ಳಿ ಬೆಲೆಯು ಭಾರೀ ಇಳಿಕೆಯಾಗಿದೆ.ಫೆಬ್ರವರಿ 1, 2026 ರಂದು, ದೆಹಲಿಯಲ್ಲಿ 24 ಕ್ಯಾರೆಟ್ ಚಿನ್ನ ಪ್ರತಿ 10 ಗ್ರಾಂ.ಗೆ ರೂ.1,62,240 ಮತ್ತು ಬೆಳ್ಳಿ ಪ್ರತಿ ಕೆಜಿಗೆ ರೂ.2,78,000 ದಾಖಲಾಗಿದೆ. ಕಳೆದ 2 ದಿನಗಳಿಂದ ಚಿನ್ನ ಮತ್ತು ಬೆಳ್ಳಿ ಬೆಲೆಗಳು ತೀವ್ರ ಕುಸಿತ ಕಂಡಿವೆ. ಜ.ನವರಿ 30 ರಂದು ರೂ.1,80,000 ಕ್ಕಿಂತ ಹೆಚ್ಚು ಇದ್ದ ಚಿನ್ನ ರೂ.1,55,000 ಕ್ಕೆ ಇಳಿದಿದೆ. ಇನ್ನು ಬೆಳ್ಳಿ ಕೆಜಿಗೆ ರೂ.50,000 ಕ್ಕೆ ಇಳಿದಿದೆ. ಪ್ರಸ್ತುತ ಬೆಂಗಳೂರಿನಲ್ಲಿ 1 ಗ್ರಾಂ 24ಖ ಚಿನ್ನದ ಬೆಲೆ ರೂ.16,058 ಇದೆ. 22ಖ ಚಿನ್ನ 1 ಗ್ರಾಂ ರೂ.14,720 ಇದೆ. ಮತ್ತು 1 ಗ್ರಾಂ 18ಖ ಚಿನ್ನದ ದರ ರೂ.12,044 ಇದೆ.

### ಯಾವುದು ಅಗ್ಗ..?

ಈ ಬಾರಿಯ ಬಜೆಟ್ ನಲ್ಲಿ ಈ ಕೆಳಗಿನ ಉಪಕರಣಗಳು ಅಗ್ಗವಾಗಲಿವೆ. ಕ್ರೀಡಾ ಉಪಕರಣಗಳು,ಮೈಕ್ರೋವೇವ್ ಓವನ್,ಸೌರ ಫಲಕ,ಇವಿ ಬ್ಯಾಟರಿಗಳು,ಸ್ಮಾರ್ಟ್‌ಫೋನ್, ಮದ್ಯ,ಬೀಡಿ,ಸಿಗರೇಟ್,ಔಷಧಿ,ಚರ್ಮ ಉತ್ಪನ್ನ,ಮೈಕ್ರೋವೇವ್,ವಿಮಾನ ಬಿಡಿಭಾ, ಬಯೋ ಗ್ಯಾಸ್, ಸೆಣಬು, ಸೋಲಾರ್ ಬಿಡಿಭಾಗ,ಬ್ಯಾಟರಿ,ಪಾದರಕ್ಷೆ,ವಿದೇಶಿ ಯಾತ್ರೆ, ಬೀಡಿ,ಆಟೋಇಮ್ಯೂನ್ ಔಷಧಿಗಳು,ಕ್ಯಾನ್ಸರ್ ಮತ್ತು ಮಧುಮೇಹ ಔಷಧಿ.

### ಯಾವುದು ದುಬಾರಿ

ಆಲ್ಕೋಹಾಲ್,ತಂಬಾಕು,ಆಮದು ಮಾಡಿಕೊಳ್ಳುವಯಂತ್ರೋಪಕರಣ, ಕಲ್ಲಿದ್ದಲು,ವಿದೇಶದಿಂದಆಮದಾಗುವ ಪ್ಲಾಸ್ಟಿಕ್ ವಸ್ತು,ನಿರ್ದಿಷ್ಟಟೆಲಿಕಾಂ ಉಪಕರಣ, ಚರ ಆಸ್ತಿಗಳನ್ನು ಬಹಿರಂಗಪಡಿಸದಿರುವುದು, ಷೇರು ಆಯ್ಕೆಗಳು ಮತ್ತು ಭವಿಷ್ಯದ ವ್ಯಾಪಾರ, ಗುಜರಿ ವಸ್ತು ಮುಂತಾದವು.

### ಬೆಂಗಳೂರಿಗೆ ಎರಡು ಹೈಸ್ಪೀಡ್ ರೈಲು

ಕಾರಿಡಾರ್ಗಳು ಸೇರಿದಂತೆ ದೇಶಾದ್ಯಂತ ಒಟ್ಟು ಏಳು ಯೋಜನೆಗಳನ್ನು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ. ಕೇಂದ್ರ ಸರ್ಕಾರ ಮುಂದಿನ ಏಳು ಮಹತ್ವದ ಹೈಸ್ಪೀಡ್ ರೈಲು ಕಾರಿಡಾರ್ಗಳನ್ನು ಘೋಷಣೆ ಮಾಡಿದ್ದು, ಅದರಲ್ಲಿ ಬೆಂಗಳೂರನ್ನು ಸಂಪರ್ಕಿಸುವ ಎರಡು ಯೋಜನೆ ಘೋಷಣೆಯಾಗಿದೆ. ಪ್ರಸ್ತಾವಿತ ಹೈಸ್ಪೀಡ್ ರೈಲು ಕಾರಿಡಾರ್ಗಳು ಈ ಕೆಳಗಿನಂತಿವೆ: ಮುಂಬೈ–ಪುಣೆ, ಹೈದರಾಬಾದ್–ಬೆಂಗಳೂರು, ದೆಹಲಿ–ವಾರಣಾಸಿ, ವಾರಣಾಸಿ–ಸಿಲಿಗುರಿ, ಪುಣೆ–ಹೈದರಾಬಾದ್, ಹೈದರಾಬಾದ್–ಚೆನ್ನೈ, ಚೆನ್ನೈ–ಬೆಂಗಳೂರು.



### ದೇಶೀಯ ಉತ್ಪಾದನೆಗೆ ಕೇಂದ್ರ ಸರ್ಕಾರ ಟಾನಿಕ್

ದೇಶೀಯ ಉತ್ಪಾದನೆಯನ್ನು ಬಲಪಡಿಸಲು ನಿರ್ಮಾಲಾ ಸೀತಾರಾಮಾನ್ ಅವರು ಸೆಮಿಕಂಡಕ್ಟರ್ ಮಿಷನ್ 2.0 ಅನ್ನು ಘೋಷಿಸಿದರು ಮತ್ತು ಎಲೆಕ್ಟ್ರಾನಿಕ್ಸ್ ಉತ್ಪಾದನೆಗೆ ವಿಸ್ತೃತ ಬೆಂಬಲ ನೀಡಿದ್ದಾರೆ. ಎಲೆಕ್ಟ್ರಾನಿಕ್ಸ್ ಉತ್ಪಾದನೆಯ ಮೇಲಿನ ವೆಚ್ಚವನ್ನು 40,000 ಕೋಟಿ ರೂ.ಗಳಿಗೆ ಹೆಚ್ಚಿಸುವ ಪ್ರಸ್ತಾಪ ಮಾಡಿದ್ದಾರೆ.ಜವಳಿ, ರಾಸಾಯನಿಕಗಳು ಮತ್ತು ರಫ್ತು–ಆಧಾರಿತ ಕೈಗಾರಿಕೆಗಳಂತಹ ಕಾರ್ಮಿಕ–ತೀವ್ರ ವಲಯಗಳಿಗೆ ಉದ್ದೇಶಿತ ಪ್ರೋತ್ಸಾಹದ ಜೊತೆಗೆ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಬೆಂಬಲ ನೀಡಲು ಪ್ರಸ್ತಾವಿತ ರೂ.10,000 ಕೋಟಿ ಖಒಇ ಬೆಳವಣಿಗೆಯ ನಿಧಿಯೊಂದಿಗೆ ಉದ್ಯೋಗ ಸೃಷ್ಟಿ ಪ್ರಮುಖ ಆದ್ಯತೆಯಾಗಿದೆ ಎಂದಿದ್ದಾರೆ.

### 40,000 ಕೋಟಿ ರೂ.ಗಳಿಗೆ ಹೆಚ್ಚಳ

ಕೇಂದ್ರ ಹಣಕಾಸುವ ಸಚಿವ ನಿರ್ಮಲಾ ಸೀತಾರಾಮನ್ ಅವರು ಭಾನುವಾರ 2026–27ನೇ ಸಾಲಿನ ಬಜೆಟ್ ಮಂಡಿಸುತ್ತಿದ್ದು, ಎಲೆಕ್ಟ್ರಾನಿಕ್ಸ್ ಉತ್ಪಾದನೆಯ ಮೇಲಿನ ವೆಚ್ಚವನ್ನು 40,000 ಕೋಟಿ ರೂ.ಗಳಿಗೆ ಹೆಚ್ಚಿಸುವ ಪ್ರಸ್ತಾಪ ಮಾಡಿದ್ದಾರೆ. ಇಂದು ಲೋಕಸಭೆಯಲ್ಲಿ 9ನೇ ಬಾರಿ ಬಜೆಟ್ ಮಂಡಿಸದ ನಿರ್ಮಲಾ ಸೀತಾರಾಮನ್ ಅವರು, ಕಾಪಿಟಲ್ ಸರಕುಗಳ ಉತ್ಪಾದನೆಗೆ ಉತ್ತೇಜನ ನೀಡಲು ಎರಡು ಸ್ಥಳಗಳಲ್ಲಿ ಹೈಟೆಕ್ ಟೂಲ್ ರೂಮ್ ಗಳನ್ನು ಸ್ಥಾಪಿಸಲಾಗುವುದು ಎಂದು ಹೇಳಿದ್ದಾರೆ.

### ದೇಶೀಯತೆಗೆ, ಖಾದಿಗೆ ಪ್ರಾಶಸ್ತ್ಯ

ಖಾದಿ ಕೈಮಗ್ಗವನ್ನು ಬಲಪಡಿಸಲು ಮಹಾತ್ಮ ಗಾಂಧಿ ಗ್ರಾಮ ಸ್ವರಾಜ್ ಉಪಕ್ರಮವನ್ನು ಸಹ ಅವರು ಪ್ರಸ್ತಾಪಿಸಿದ್ದಾರೆ. ದೇಶೀಯ ಉತ್ಪಾದನೆಯನ್ನು ಬಲಪಡಿಸಲು ನಿರ್ಮಾಣ ಮತ್ತು ಮೂಲಸೌಕರ್ಯ ಉಪಕರಣಗಳ ವರ್ಧನೆಗೆ ಒಂದು ಯೋಜನೆಯನ್ನು ಪರಿಚಯಿಸಲಾಗುವುದು ಎಂದು ಅವರು ಹೇಳಿದರು.

ಜಾಗತಿಕವಾಗಿ ಸ್ಪರ್ಧಾತ್ಮಕ ಪರಿಸರ ವ್ಯವಸ್ಥೆಯನ್ನು ಸೃಷ್ಟಿಸಲು ಕಂಟೇನರ್ ತಯಾರಿಕೆಗೆ ಒಂದು ಯೋಜನೆ, ಮತ್ತು ದೇಶೀಯ ಉತ್ಪಾದನೆಯನ್ನು ಹೆಚ್ಚಿಸಲು, ಆಮದು ಅವಲಂಬನೆಯನ್ನು ಕಡಿಮೆ ಮಾಡಲು 3 ಮೀಸಲಾದ ರಾಸಾಯನಿಕ ಉದ್ಯಾನವನಗಳನ್ನು ಸ್ಥಾಪಿಸುವುದು ಅವರ ಇತರ ಪ್ರಸ್ತಾಪಗಳಲ್ಲಿ ಸೇರಿವೆ.

### ಕೇಂದ್ರ ಸಚಿವೆ ನಿರ್ಮಲ ಹೊಸ ದಾಖಲೆ

ನವದೆಹಲಿ: ಕೇಂದ್ರ ಹಣಕಾಸುವ ಸಚಿವ ನಿರ್ಮಲಾ ಸೀತಾರಾಮನ್ ಬಜೆಟ್ ಮಂಡಿಸಿದ್ದು, ಆರ್ಥಿಕ ಬೆಳವಣಿಗೆಯನ್ನು ಉಳಿಸಿಕೊಳ್ಳುವುದು, ಹೂಡಿಕೆಯನ್ನು ಹೆಚ್ಚಿಸುವುದು ಮತ್ತು ವಿತ್ತೀಯ ಶಿಸ್ತನ್ನು ಕಾಯ್ದುಕೊಳ್ಳುವುದು ಹಾಗೂ ಉದ್ಯೋಗ ಸೃಷ್ಟಿಸುವುದಕ್ಕೆ ಹೆಚ್ಚು ಒತ್ತು ನೀಡಿದ್ದಾರೆ. ಮಧ್ಯಂತರ ಬಜೆಟ್ ಸೇರಿದಂತೆ 9ನೇ ಬಾರಿಗೆ ಬಜೆಟ್ ಮಂಡಿಸುವ ಮೂಲಕ ಹೊಸ ದಾಖಲೆ ನಿರ್ಮಿಸಿದ ನಿರ್ಮಲಾ ಅವರು, ಕಳೆದ ನಾಲ್ಕು ವರ್ಷಗಳಂತೆ, ಈ ವರ್ಷವೂ ಕಾಗದರಹಿತ ಬಜೆಟ್ ಮಂಡಿಸಿದ್ದಾರೆ.

### ಆಯುರ್ವೇದ, ಪುರಾತನ ವೈದ್ಯ ಪದ್ಧತಿ, ಟೂರಿಸಂಗೆ ಒತ್ತು

ಭಾರತದ ಪುರಾತನ ವೈದ್ಯ ಪದ್ಧತಿ ಆಯುರ್ವೇದ, ಯೋಗ ಅಭಿವೃದ್ಧಿಗೆ ಯೋಜನೆ ಘೋಷಿಸಿದ ನಿರ್ಮಲಾ, ಮೆಡಿಕಲ್ ಟೂರಿಸಮ್ ಅಭಿವೃದ್ಧಇಗೆ ಐದು ಮೆಡಿಕಲ್ ರೀಜಿನಲ್ ಹಬ್ಸ್ ನಿರ್ಮಿಸುವುದಾಗಿ ಘೋಷಿಸಿದ್ದಾರೆ. ಇದರಿಂದ ವೈದ್ಯರು, ಪ್ಯಾರಾ ಮೆಡಿಕಲು ಪದವೀಧರರು ಹಾಗೂ ಹಲವರಿಗೆ ಉದ್ಯೋಗ ಸಿಗಲಿದೆ. ದೇಶದ ಮೂರು ಕಡೆ ಆಯುರ್ವೇದ ಸಂಸ್ಥೆಗಳನ್ನು ನಿರ್ಮಿಸಲು ನಿರ್ಧಾರ. ಖಾಸಗಿ ವಲಯದ ಜೊತೆ ಕೈ ಜೋಡಿಸಿ, ಮೆಡಿಕಲ್ ಹಬ್ ಅಭಿವೃದ್ಧಿಗೆ ಒತ್ತು.

### 53.5 ಲಕ್ಷ ಕೋಟಿ ರೂ. ಬಜೆಟ್

2026–27ನೇ ಸಾಲಿಗೆ 53.5 ಲಕ್ಷ ಕೋಟಿ ರೂ.ಗಳ ಬಜೆಟ್ ಮಂಡನೆ ಮಾಡಿರುವ ನಿರ್ಮಲಾ ಸೀತಾರಾಮನ್ ಅವರು ವಿತ್ತೀಯ ಕೊರತೆಯನ್ನು ಕಳೆದ ವರ್ಷಕ್ಕಿಂತಲೂ ಶೇ.0.1ರಷ್ಟು ನಿಯಂತ್ರಣದಲ್ಲಿ ಇಡುವುದಾಗಿ ತಿಳಿಸಿದ್ದಾರೆ. ಪ್ರಸ್ತಕ ಆರ್ಥಿಕ ವರ್ಷದಲ್ಲಿ ವಿತ್ತೀಯ ಕೊರತೆ ಶೇ.4.4ರಷ್ಟಾಗುವ ಅಂದಾಜಿದೆ. ರಾಜ್ಯಗಳಿಗೆ 1.4 ಲಕ್ಷ ಕೋಟಿ ತೆರಿಗೆ ವಿಕೇಂದ್ರೀಕರಣ ಘೋಷಿಸಿರುವ ನಿರ್ಮಲಾ ಸೀತಾರಾಮನ್ ಸುಮಾರು 28.7 ಲಕ್ಷ ಕೋಟಿ ರೂ.ಗಳ ತೆರಿಗೆ ಸ್ವೀಕೃತಿಯನ್ನು ಅಂದಾಜಿಸಿದ್ದಾರೆ.

### ರಾಜ್ಯಕ್ಕೆ ಕೇಂದ್ರ ಮತ್ತೆ ಅನ್ಯಾಯ



ನಮ್ಮ ರಾಜ್ಯಕ್ಕೆ ಈ ಕೇಂದ್ರ ಬಜೆಟ್ ನಲ್ಲಿ ಹೆಚ್ಚಿನ ಪ್ರಾಮುಖ್ಯತೆ ನೀಡಬಹುದು ಎಂಬ ನಿರೀಕ್ಷೆಗಳು ಹುಸಿಯಾಗಿವೆ. ನಮ್ಮ ರಾಜ್ಯಕ್ಕೆ ಮಲತಾಯಿ ದೋರಣೆ ಮುಂದುವರೆದಿದೆ. ನೆರೆ ರಾಜ್ಯಗಳಿಗೆ ಹೋಲಿಸಿದರೆ. ರಾಜ್ಯಕ್ಕೆ ಅನ್ಯಾಯ ಮಾಡಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.

## ಬಜೆಟ್ ಬಗ್ಗೆ ಗಣ್ಯರ ಪರ ವಿರೋಧ ವಾದ

### ರಾಜ್ಯಕ್ಕೆ ಪ್ರಯೋಜನವಿಲ್ಲ



ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸಂಸತ್ತಿನಲ್ಲಿ ಮಂಡಿಸಿದ ಕೇಂದ್ರ ಬಜೆಟ್ನಿಂದ ರಾಜ್ಯಕ್ಕೆ ಪ್ರಯೋಜನವಿಲ್ಲ ಎಂದು ಡಿ.ಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಕೇಂದ್ರ ಬಜೆಟ್ನಿಂದ ನಮ್ಮ ರಾಜ್ಯಕ್ಕೆ ಯಾವುದೇ ಪ್ರಯೋಜನವಿಲ್ಲ. ಅವರು ಈಗ ಮಹಾತ್ಮ ಗಾಂಧಿಯವರ ಹೆಸರನ್ನು ಒಂದು ಕಾರ್ಯಕ್ರಮಕ್ಕೆ ಇಟ್ಟಿದ್ದಾರೆ ಎಂದಿದ್ದಾರೆ.

### ಬೆನ್ನೆಲುಬು ಮುರಿತ

ರಾಯಚೂರು: ಕೇಂದ್ರ ಸರ್ಕಾರ ಮಂಡಿಸಿರುವ 2026?27ರ ಕೇಂದ್ರ ಬಜೆಟ್ ರೈತ ವಿರೋಧಿ ಬಜೆಟ್ ಆಗಿದ್ದು, ದೇಶದ ಬೆನ್ನೆಲುಬಾದ ಅನ್ನದಾತರ ಬೆನ್ನೆಲುಬನ್ನ ಮುರಿದು ಸಂಕಷ್ಟಕ್ಕೆ ತಳ್ಳುವಂತಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಜಿಲ್ಲಾ ಕಾರ್ಯಾಧ್ಯಕ್ಷರಾದ ಮುಜಾಹಿದ್ ಮರ್ಚೆಡ್ ಖಂಡಿಸಿದ್ದಾರೆ.

### ವಿಕಸಿತ ಭಾರತಕ್ಕೆ ಪೂರಕ

ಶಿವಮೊಗ್ಗ: ಪ್ರಧಾನಮಂತ್ರಿಗಳ ವಿಕಸಿತ ಭಾರತದ ಸಂಕಲ್ಪಕ್ಕೆ ಪೂರಕವಾಗಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಮ್ಮ ಬಜೆಟ್ ಮಂಡಿಸಿದ್ದಾರೆ. 3 ಕರ್ತವ್ಯಶಕ್ತಿಗಳ ಆಧಾರದ ಮೇಲೆ ಮಂಡಿಸಿರುವ ಬಜೆಟ್ ಇದಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ವಿಶ್ಲೇಷಿಸಿದ್ದಾರೆ.



### ಟೀಕೆಗೆ ಉತ್ತರ ಕೊಟ್ಟ ಬಜೆಟ್

ಕೇಂದ್ರದ ಹಣಕಾಸು ಖಾತೆ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿರುವ 2026–27ನೇ ಸಾಲಿನ ಆಯವ್ಯಯದ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರ ಮಾಡುತ್ತಿರುವ ಟೀಕೆಗಳಿಗೆ ಉತ್ತರ ಕೊಡಲಾಗಿದೆ ಎಂದು ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ.



### ರಾಜ್ಯಕ್ಕೆ ಹೆಚ್ಚು ಉಪಯೋಗವಿಲ್ಲ

ಬೆಂಗಳೂರು–ಹೈದರಾಬಾದ್ ಮತ್ತು ಬೆಂಗಳೂರು–ಚೆನ್ನೈ ನಡುವೆ ಹೈಸ್ಪೀಡ್ ರೈಲು ಕಾರಿಡಾರ್ ಅಭಿವೃದ್ಧಿ ಘೋಷಣೆ ಮಾಡಿರುವುದು ಸ್ವಾಗತಾರ್ಹ. ಇದರಿಂದ ರಾಜ್ಯಕ್ಕೆ ಹೆಚ್ಚು ಪ್ರಯೋಜನವೇನೂ ಇಲ್ಲ ಎಂದು ಸಚಿವ ಎಂ ಬಿ ಪಾಟೀಲ ಪ್ರತಿಕ್ರಿಯಿಸಿದ್ದಾರೆ.



### ಸಲಹೆ ಪಡೆದಿದ್ದಾರೆ..!

ಗೌರವಾನ್ವಿತ ಹಣಕಾಸು ಸಚಿವರಿಗೆ ಸಲ್ಲಿಸಿದ್ದ ಜ್ಞಾಪಕ ಪತ್ರದಲ್ಲಿ ತಾನು ನೀಡಿದ್ದ ಕೆಲವು ಸಲಹೆಗಳನ್ನು ಬಜೆಟ್ ಒಳಗೊಂಡಿಲ್ಲವೆಂದು ಕಾಸಿಯಾ ವಿಷದ ವ್ಯಕ್ತಪಡಿಸಿದೆ. ಅವುಗಳನ್ನು ಅಂಗೀಕರಿಸಿದ್ದಲ್ಲಿ ವಿಶೇಷವಾಗಿ ಉತ್ಪಾದನಾ ವಲಯಕ್ಕೆ ಹೆಚ್ಚಿನ ಪ್ರೋತ್ಸಾಹ ದೊರಕುತ್ತಿತ್ತು ಎಂದಿದ್ದಾರೆ ಕಾಸಿಯಾ ಅಧ್ಯಕ್ಷ ಬಿ.ಆರ್. ಗಣೇಶ್ ರಾವ್.



### ವಿಕಸಿತ ಭಾರತ ಪರಿಕಲ್ಪನೆ

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿರುವ ಬಜೆಟ್‌ನಲ್ಲಿ ದೇಶದ ಆರ್ಥಿಕ ಅಭಿವೃದ್ಧಿಯ ದೂರದೃಷ್ಟಿತ್ವ, ವಿಕಸಿತ ಭಾರತದ ಕಲ್ಪನೆ ಮತ್ತಷ್ಟು ಅರಳಿದೆ ಎಂದು ಮಹಾಗಾಂವ ಬಿಜೆಪಿ ಮುಖಂಡ ಮಲ್ಲಿಜಾರ್ಜುನ ಮರತೂರಕರ್ ಕೇಂದ್ರದ ಬಜೆಟ್ ಗೆ ಶ್ಲಾಘಿಸಿದ್ದಾರೆ.



# ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಶೀಘ್ರ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ತಾಲೂಕಿನ ಮೋಳಕೇರಾ ಗ್ರಾಮದಲ್ಲಿ ಶನಿವಾರ (ಜ.31) ರಂದು ಬೆಳಗ್ಗೆ ನಡೆದ ಅನುಮಾನಾಸ್ಪದ ವಸ್ತು ಸ್ಫೋಟದ ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಈ ಹಿನ್ನೆಲೆಯಲ್ಲಿ ಉನ್ನತ ಮಟ್ಟದ ತನಿಖೆ ನಡೆಸಲಾಗುತ್ತಿದೆ ಎಂದು ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಮೋಳಕೇರಾ ಗ್ರಾಮದಲ್ಲಿ ನಡೆದ ನಿಗೂಢ ಸ್ಫೋಟದ ಸ್ಥಳವನ್ನು ಭಾವನುವಾರ ವೀಕ್ಷಿಸಿ, ಅಧಿಕಾರಿಗಳಿಂದ ಘಟನೆಯ ವಿವರವಾದ ಮಾಹಿತಿ ಪಡೆದ ಬಳಿಕ ಮಾತನಾಡಿದ ಅವರು, ಮೇಲ್ನೋಟಕ್ಕೆ ಮನೆಯ ಮುಂಭಾಗದಲ್ಲಿ ರಾಸಾಯನಿಕ ಮಿಶ್ರಿತ ವಸ್ತುಗಳನ್ನು ಶೇಖರಣೆ ಮಾಡಿರುವುದರಿಂದ ಈ ಸ್ಫೋಟ ಸಂಭವಿಸಿರುವ ಸಾಧ್ಯತೆ ಇರುವುದಾಗಿ ಶಂಕಿಸಲಾಗಿದೆ ಎಂದಿದ್ದಾರೆ. ಪೌರಾಡಳಿತ ಸಚಿವ ರಹೀಂ ಖಾನ್, ಹುಮನಾಬಾದ್ ಶಾಸಕ ಸಿದ್ದಲಿಂಗಪ್ಪ ಪಾಟೀಲ್, ಮಾಜಿ ಸಚಿವ ರಾಜಶೇಖರ್ ಪಾಟೀಲ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಡಾ.ಗಿರೀಶ ಬದೋಲೆ, ಅಜುಂ ತಬ್‌ಸುಮ್, ಡಾ.ಗೋವಿಂದ, ಸೇರಿದಂತೆ ಅಧಿಕಾರಿಗಳು ಇದ್ದರು.



ಇದು ಬಹಳ ಗಂಭೀರ ಘಟನೆ. ಈ ಘಟನೆ ಕುರಿತು ಸಮಗ್ರ ತನಿಖೆಗೆ ಒತ್ತು ಕೊಡಲಾಗಿದೆ. ಯಾರು ಕೆಮಿಕಲ್ ತಂದಿದ್ದಾರೆ, ಅವರ ವಿರುದ್ಧ ಎಫ್‌ಐಆರ್ ಸಹ ಆಗಿದೆ. ಸಂಪೂರ್ಣ ತನಿಖಾ ವರದಿ ಬಂದ ಕೂಡಲೇ ವರದಿ ಆಧಾರದ ಮೇಲೆ ಅಗತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು. ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆಗೆ ಮೊದಲ ಆದ್ಯತೆ ಕೊಡಲಾಗವುದು. –ಪ್ರದೀಪ ಗುಂಟಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ



### ಮೋಳಕೇರಾದಲ್ಲಿ ಸ್ಫೋಟಗೊಂಡ ಸ್ಥಳಕ್ಕೆ ಈಶ್ವರ ಖಂಡ್ರೆ ಭೇಟಿ

ಈಗಾಗಲೇ ಘಟನೆಯ ಬಗ್ಗೆ ಜಿಲ್ಲಾಡಳಿತ ವತಿಯಿಂದ ಕಾನೂನು ಕ್ರಮಕ್ಕೆ ಎಲ್ಲಾ ಬಗೆಯ ವ್ಯವಸ್ಥೆ ಮಾಡಲಾಗಿದೆ. ಇಂತಹ ಘಟನೆ ನಡೆ–ಯದಂತೆ ಮುನ್ನೆಚ್ಚರಿಕೆಗೆ ಆದೇಶ ನೀಡಲಾಗಿದೆ. ಅಪರಾಧಿಗಳು ಯಾರೇ ಆಗಿರಲಿ, ಅವರ ಹೆಡೆಮುರಿ ಕಟ್ಟಲಾಗುವುದು. ಜಿಲ್ಲೆಯ ಜನತೆ ನೆಮ್ಮದಿಯಿಂದ ಇರಬೇಕು. ಅದು ನಮ್ಮ ಬಯಕೆ

–ಶಿಲ್ಪಾ ಶರ್ಮಾ, ಜಿಲ್ಲಾಧಿಕಾರಿ.

### ಚಿಕಿತ್ಸಾ ವೆಚ್ಚ ಭರಿಸಲಿದೆ ಸರ್ಕಾರ

ಮೋಳಕೇರಾ ಗ್ರಾಮದಲ್ಲಿ ಮೋಳಿಗೆ ಮಾರಯ್ಯ ದೇವಸ್ಥಾನ ರಸ್ತೆಯಲ್ಲಿ ಸಂಭವಿಸಿದ ಅನುಮಾನಾಸ್ಪದ ವಸ್ತು ಸ್ಫೋಟದಿಂದ ಶಾಲೆಗೆ ತೆರಳುತ್ತಿದ್ದ ಮಕ್ಕಳೂ ಸೇರಿದಂತೆ 6 ಜನರು ಗಂಭೀರವಾಗಿ ಗಾಯಗೊಂಡಿರುವುದು ಅತ್ಯಂತ ದುಃಖಕರ ಸಂಗತಿ. ಗಾಯಾಳುಗಳನ್ನು ಈಗಾಗಲೇ ಭೇಟಿ ನೀಡಿ ಯೋಗಕ್ಷೇಮ ವಿಚಾರಿಸಿದ್ದೇನೆ. ಗಾಯಾಳುಗಳ ಸಂಪೂರ್ಣ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸುತ್ತದೆ ಎಂದು ಕುಟುಂಬದ ಸದಸ್ಯರಿಗೆ ಸಚಿವ ಆಸ್ವಾಸನೆ ನೀಡಿದ್ದಾರೆ.

### ಸೌಲಭ್ಯ ಒದಗಿಸುವ ಭರವಸೆ

ಮೊಳಕೇರಾ ಗ್ರಾಮದ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಫೋಟದಲ್ಲಿ ಗಂಭೀರವಾಗಿ ಗಾಯವಾದ ಜನರಿಗೆ ಸರಕಾರದ ಸೌಲಭ್ಯ ಒಗಿಸಿಕೊಡು ಪ್ರಯತ್ನ ಮಾಡುತ್ತೇನೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಭರವಸೆ ನೀಡಿದ್ದಾರೆ. ಅನೇಕ ಬಾರಿ ಆಗಿರುವ ಸ್ಫೋಟಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ಪ್ರಕರಣದ ಹಿಂದಿನ ಕಾರಣ ಪತ್ತೆ ಹಚ್ಚುವ ಮೂಲಕ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಯಿಸಿದ್ದಾರೆ.

## ಕೇಂದ್ರ ಸರ್ಕಾರ ಈ ಬಾರಿಯೂ ರಾಜ್ಯ ಸರ್ಕಾರಗಳಿಗೆ ಅನ್ಯಾಯ ಮಾಡಿದೆ: ಡಿ.ಕೆ ಶಿವಕುಮಾರ್

# ಎನ್.ಎಸ್.ಎಸ್. ಸೇವಾ ಮನೋಭಾವನೆಯನ್ನು ಮೂಡಿಸುತದೆ

## ಎಸ್.ಎನ್. ಶಿವಣಕರ



• ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:

ಎನ್.ಎಸ್.ಎಸ್.ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ ಮತ್ತು ಸೇವಾ ಮನೋಭಾವನೆಯನ್ನು ಮೂಡಿಸುತ್ತದೆ ಎಂದು ನಿವೃತ ಪ್ರಾಚಾರ್ಯ ಎಸ್.ಎನ್.ಶಿವಣಕರ ಹೇಳಿದರು.

ಪಟ್ಟಣದ ಶಾಂತಿವರ್ಧಪ ಪಿಯು ಕಾಲೇಜಿನಲ್ಲಿ ಶನಿವಾರ ರಾಷ್ಟ್ರೀಯ ಸೇವಾ ಯೋಜನೆ ವತಿಯಿಂದ 2025-26ನೇ ಸಾಲಿನ ವಿಶೇಷ ಶಿಬಿರದ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿ, ಎನ್‌ಎಸ್‌ಎಸ್ ಶಿಬಿರಗಳು ವಿದ್ಯಾರ್ಥಿಗಳ ಜೀವನದಲ್ಲಿ ನೈಜ ಜೀವನದ ಪಾಠ ಕಲಿಸುತ್ತದೆ. ವಿದ್ಯಾರ್ಥಿಗಳು ಇಂತಹ ಶಿಬಿರದ ಪ್ರಯೋಜನವನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

ಹಿರಿಯ ಪತ್ರಕರ್ತ ಡಾ.ಎಸ್.ಎಸ್. ಮೈನಾಳೆ ಮಾತನಾಡಿ, ಜೀವನ ಕೌಶಲ, ಕಠಿಣ ಪರಿಸ್ಥಿತಿಗಳನ್ನು ಎದುರಿಸುವುದು ಮತ್ತು ನಿರ್ಧಾರ ತೆಗೆದುಕೊಳ್ಳುವ ಸಾಮರ್ಥ್ಯ ಹೆಚ್ಚುತ್ತದೆ, ಎನ್ ಎಸ್ ಎಸ್ ಕೇವಲ ಒಂದು ಚಟುವಟಿಕೆಯಲ್ಲ, ಅದು ವಿದ್ಯಾರ್ಥಿಗಳನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸುವ ಒಂದು ಸುಂದರ ಪಯಣ ಎಂದು ಹೇಳಿದರು.

ಪರಮೇಶ ರಾಂಪುರೆ ಮಾತನಾಡಿ, ದೇಶ ಭಕ್ತಿ, ಸಾಮಾಜಿಕ ಬದ್ಧತೆ, ಹಾಗೂ ಹೊಸ ಜಗತ್ತನ್ನು ಎನ್.ಎಸ್.ಎಸ್ ಶಿಬಿರ ತಿಳಿಸಿ ಕೊಡುತ್ತದೆ ಎಂದು ಹೇಳಿದರು. ಮುಂಬರುವ ದಿನಗಳಲ್ಲಿ ಕಾಲೇಜಿನಲ್ಲಿ ಎನ್.ಸಿ.ಸಿ ಶಿಬಿರ ಪ್ರಾರಂಭಿಸಿ ಎಂದು ಸಲಹೆ ನೀಡಿದರು.

ಶಿವಾಜಿ.ಆರ್.ಹೆಚ್ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಾಹಿತಿ ಸಂಗಮೇಶ ಮುರ್ಕೆ, ಮನೋಜ ಹಿರೇಮಠ, ಸೇವಾ ನಿವೃತ ಮುಖ್ಯಶಿಕ್ಷಕ ಭಾವುರಾವ ಹೆಡೆ, ಪ್ರವೀಣ ಹೊಂಡಾಳೆ, ಮಹಾದೇವ ಬಿರಾದಾರ, ಸಿ.ಎಂ. ಗಳಗೆ, ಸುಭಾಷ ರಾಠೋಡ್, ವೆಂಕಟ ಮೋರೆ, ಬಸವಾಂಬಿಕಾ ಚಿಮ್ಮಾ, ಕಾದಂಬಿನಿ ಮೇತ್ರೆ ವಿದ್ಯಾರ್ಥಿಗಳು ಇದ್ದರು. ಯೋಜನಾಧಿಕಾರಿ ವಿಜಯಕುಮಾರ ವಾರದ ಸ್ವಾಗತಿಸಿದರು. ಕುಮಾರಿ ಶ್ವೇತಾ-ನೆಹಾ ಸಂಗಡಿಗರು ಪ್ರಾರ್ಥನೆಗೀತೆ ಹಾಡಿದರು. ಕುಮಾರಿ ರುಕಸಾನಾ-ಪ್ರಜಾ ಸಂಗಡಿಗರು ಸ್ವಾಗತಗೀತೆ ಹಾಡಿದರು.

ಶರಣಗೌಡ ಪಾಟೀಲ ನಿರೂಪಿಸಿದರು. ಕಾಳಿದಾಸ ಔದ್ದೆ ವಂದಿಸಿದರು.

## ಕಲಾವಿದ ದೇವನಾಗೇಶ್ ನಿಧನ

# ಚಿತ್ರರಂಗ, ರಂಗಸಿರಿ ಬಳಗ ಸಂತಾಪ



ಬೆಂಗಳೂರು:

ನಾಟಕ&ಚಿತ್ರ ಕಲಾವಿದ ದೇವನಾಗೇಶ್ (62)ಅವರು ಬೆಂಗಳೂರಿನಲ್ಲಿ ನಿಧನರಾದರು.

ಅವರು ಕಲಾವಿದೆಯಾಗಿದ್ದ ಪತ್ನಿ ರತ್ನನಾಗೇಶ್, ಒಬ್ಬ ಪುತ್ರನನ್ನು ಮತ್ತು ಬಂಧು ಬಳಗವನ್ನು ಅಗಲಿದ್ದಾರೆ.

ದೇವನಾಗೇಶ್ ಅಂತ್ಯಕ್ರಿಯೆ ಅವರ ಹುಟ್ಟೂರಾದ ಚನ್ನರಾಯಪಟ್ಟಣ ತಾಲೂಕು ನುಗ್ಗೇಹಳ್ಳಿ ಹೋಬಳಿ ಕಲ್ಕೆರೆ ಬಳಿ ದೇವಿಹಳ್ಳಿಯಲ್ಲಿ ಇಂದು ಸಂಜೆ ನಡೆಯಲಿದೆ.

**ಸಂತಾಪ:**

ದೇವನಾಗೇಶ್ ನಿಧನಕ್ಕೆ ಚಿತ್ರರಂಗ ಮತ್ತು ಹಾಸನದ ರಂಗಸಿರಿ ಬಳಗ ತೀವ್ರಸಂತಾಪ ವ್ಯಕ್ತಪಡಿಸಿದೆ. ನಾಗೇಶ್ ಪ್ರತಿಭಾವಂತ ಕಲಾವಿದರಾಗಿದ್ದರು.

ಬೆಂಗಳೂರಿನಿಂದ ತಮ್ಮ ನಾಟಕ ತಂಡವನ್ನು ಕರೆತಂದು ತಗಡೂರಿನಲ್ಲಿ ನಾಟಕ ಮಾಡಿಸಿದ್ದನ್ನು ಮರೆಯುವಂತಿಲ್ಲ ಎಂದು ಹಳೆ ನೆನಪು ಮೆಲುಕು ಹಾಕಿ, ಶೋಕಿಸಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು, ನಾಗೇಶ್ ಆತ್ಮಕ್ಕೆ ಶಾಂತಿ ಸಿಗಲಿ. ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿಯನ್ನು ದೇವರು ಕರುಣಿಸಲೆಂದು ಪ್ರಾರ್ಥಿಸಿದ್ದಾರೆ.



ಭಾಲ್ಕಿಯ ಪ್ರವಾಸಿ ಮಂದಿರದಲ್ಲಿ ಹುಲಸೂರ ತಾಲೂಕಿನ ಬೇಲೂರ ಗ್ರಾಮದ ಉರಿಲಿಂಗಪೆದ್ದಿ ಮಠದಲ್ಲಿ ಫೆ.07 ಮತ್ತು 08 ರಂದು ನಡೆಯುವ ಶರಣ ಉರಿಲಿಂಗ ಪೆದ್ದಿ ಮತ್ತು ಶರಣೆ ಕಾಳವೆ ಉತ್ಸವ ಹಾಗೂ ಲಿಂ.ಶಿವಲಿಂಗೇಶ್ವರ ಶಿವಯೋಗಿಗಳ 57ನೇ ಪುಣ್ಯಸ್ಮರಣೆ ಅಂಗವಾಗಿ ಪ್ರಥಮ ಪ್ರಕಾಶಕರ ಸಮ್ಮೇಳನದ ವಾಲ್‌ಪೋಸ್ಟರ್ ಮತ್ತು ಆಮಂತ್ರಣ ಪತ್ರಿಕೆಗಳನ್ನು ಭಾಲ್ಕಿ ತಾಲೂಕು ಪ್ರಚಾರ ಸಮಿತಿ ಅಧ್ಯಕ್ಷ ಯುವ ಮುಖಂಡ ಪ್ರಶಾಂತ ಕೋಟಗೆರಾ ಬಿಡುಗಡೆಗೊಳಿಸಿದರು.ಈ ಸಂದರ್ಭದಲ್ಲಿ ಪ್ರಮುಖರಾದ ರಾಜಕುಮಾರ ಮೋರೆ,ರಾಹೂಲ ಕೆ.ಚಿಂಚೋಳಿ,ಪ್ರದೀಪ ಮೊರೆ,ಕಿಶನ ಸೂರ್ಯವಂಶಿ,ಅರ್ಜುನ ಕಾಳೆ,ವಿಲಾಸ ಅರ್ಜುನ ಸೇರಿದಂತೆ ಅನೇಕರಿದ್ದರು.

# ವಿಜೃಂಭಣೆ ಯಿಂದ ನಡೆದ ಕರ್ನಾಟಕದ ಶ್ರೀಶೈಲ ಖ್ಯಾತಿಯ ಮಸ್ಕಿ ಮಲ್ಲಿಕಾರ್ಜುನ ರಥೋತ್ಸವ

• ಮಲ್ಲಮ್ಮ ನುಡಿ ವಾರ್ತೆ,ಮಸ್ಕಿ:

ಎರಡನೇ ಶ್ರೀಶೈಲ ಎಂದೇ ಪ್ರಸಿದ್ಧಿ ಪಡೆದಿರುವ ಈ ಭಾಗದ ಧಾರ್ಮಿಕ ಕೇಂದ್ರಗಳಲ್ಲಿ ಒಂದಾದ ಐತಿಹಾಸಿಕ ಮಲ್ಲಿಕಾರ್ಜುನ ಸ್ವಾಮಿಯ ಉತ್ಸವ ಮೂರ್ತಿ ಹೊತ್ತ ಪಲ್ಲಕ್ಕಿಯನ್ನು ರಥದ ಸುತ್ತ 5 ಬಾರಿ ಪ್ರದಕ್ಷಿಣೆ ಹಾಕಿಸಿದ ನಂತರ ಪಲ್ಲಕ್ಕಿಯಲ್ಲಿನ ಉತ್ಸವ ಮೂರ್ತಿಯನ್ನು ಭಕ್ತರ ಜಯಘೋಷಗಳ ನಡುವೆ ಮೇಲೆ ಪ್ರತಿಷ್ಠಾಪಿಸಲಾಯಿತು.



ರಥೋತ್ಸವವು ರವಿವಾರ ಭಕ್ತರ ಜಯ ಘೋಷಗಳೊಂದಿಗೆ ವಿಜೃಂಭಣೆಯಿಂದ ನಡೆಯಿತು. ಬೆಳಿಗ್ಗೆ ದೇವಸ್ಥಾನದಲ್ಲಿ ಮಲ್ಲಿಕಾರ್ಜುನ ಲಿಂಗಕ್ಕೆ ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನಡೆದವು. ನಂತರ ರಥೋತ್ಸವದ ಕಳಸ ಪ್ರತಿಷ್ಠಾಪನೆ ನಡೆಯಿತು.

ಅನೇಕ ಭಕ್ತರು ದೀಡ್ ನಮಸ್ಕಾರ, ರಥಕ್ಕೆ ದೀಪದ ಎಣ್ಣೆ ಹಾಕುವ ಮೂಲಕ ತಮ್ಮ ಹರಕೆ ಸಲ್ಲಿಸಿದರು.

ಸಂಜೆ 5 ಗಂಟೆಗೆ ಮಲ್ಲಿಕಾರ್ಜುನನ ಮಸ್ಕಿಯ ಗಚ್ಚಿನ ಹಿರೇಮಠದ ವರರುದ್ರಮುನಿ ಶಿವಾಚಾರ್ಯರ ಮಹಾ ಸ್ವಾಮಿಗಳು,ಶಾಸಕ ಬಸವನಗೌಡ ತುರುವಿಹಾಳ,ವಿವಿಧ ಮಠದ ಪೂಜ್ಯರು ಧ್ವಜಾರೋಹಣ ಮಾಡುವ ಮೂಲಕ ರಥಕ್ಕೆ ಧಾರ್ಮಿಕ ವಿಧಿ-ವಿಧಾನಗಳಂತೆ ಪೂಜೆ ಸಲ್ಲಿಸಿ ರಥೋತ್ಸವಕ್ಕೆ ವಿಧ್ಯುಕ್ತವಾಗಿ ಚಾಲನೆ ನೀಡಿದರು.ಭಕ್ತರು ಉತ್ತುತ್ತಿ ಬಾಳೆ ಹಣ್ಣು ಎಸೆದು ಭಕ್ತಿ ಸಮರ್ಪಿಸಿದರು.ಭೋವಿ (ವಡ್ಡರ್) ಸಮಾಜದ ಅನೇಕ ಯುವಕರು ದಿನ ಉಪವಾಸ ಹಾಗೂ ಮಡಿವಂತಿಕೆಯಿಂದ ತೇರಿನ ಕೆಳಗೆ ಇದ್ದು ರಥಕ್ಕೆ ಸೂನ್ನೆ ಹಾಕುವ ಮೂಲಕ ರಥೋತ್ಸವದ ಯಶಸ್ವಿಗೆ ಕಾರಣರಾದರು

ಈ ವೇಳೆ,ಊರಿನ ಪ್ರಮುಖ ಮುಖಂಡರಾದ ಮಹಾದೇವಪ್ಪಗೌಡ ಪೊಲೀಸ್ ಪಾಟೀಲ್,ವೀರನಗೌಡ ಕಾರಲಕುಂಟಿ,ಪ್ರತಾಪ್ ಗೌಡ ಪಾಟೀಲ್, ಪುರಸಭೆ ಅಧ್ಯಕ್ಷ ಸುರೇಶ ಹರಸೂರು,ಉಪಾಧ್ಯಕ್ಷರಾದ ಗೀತಾ ಶಿವರಾಜ,ಪುರಸಭೆ ಸದಸ್ಯರು,ಮಲ್ಲಿಕಾರ್ಜುನ ಪಾಟೀಲ್ ಯದ್ದಲದಿನ್ನಿ,ರವಿಗೌಡ ಪೊಲೀಸ್ ಪಾಟೀಲ್, ಪ್ರಸನ್ನ ಪಾಟೀಲ್,

ಊರಿನ ಪ್ರಮುಖ ಮುಖಂಡರ

ಮಲ್ಲಿಕಾರ್ಜುನ ದೇವಸ್ಥಾನದ ಪ್ರಧಾನ ಅರ್ಚಕರಾದ ಸಿದ್ದಯ್ಯ ಹೆಸರೂರು ಹಿರೇಮಠ, ವಿಶ್ವನಾಥ ಸೊಪ್ಪಿಮಠ,ಸೇರಿದಂತೆ ಊರಿನ ಪ್ರಮುಖ ಮುಖಂಡರು ಹಾಗೂ ಭಕ್ತರು ಇದ್ದರೂ.

# ಮಾಚಿದೇವರ ತತ್ವ, ಆದರ್ಶಗಳನ್ನು ಪಾಲಿಸಿ

## ಡಾ. ಪ್ರವೀಣಕುಮಾರ

• ಮಲ್ಲಮ್ಮ ನುಡಿ ವಾರ್ತೆ,ಚಿಟಗುಪ್ಪ:



ಮಡಿವಾಳ ಮಾಚಿದೇವರಂತಹ ಮಹಾನ್ ಪುರುಷರ ತತ್ವ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹಿರಿಯ ವೈದ್ಯಾಧಿಕಾರಿ ಡಾ. ಪ್ರವೀಣಕುಮಾರ ಹೇಳಿದರು. ಪಟ್ಟಣದ ಸರ್ಕಾರಿ ಸಮುದಾಯ ಆಸ್ಪತ್ರೆಯಲ್ಲಿ ಮಡಿವಾಳ ಮಚಿದೇವರ ಜಯಂತಿ ಅಂಗವಾಗಿ ಮಡಿವಾಳ ಮಚಿದೇವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಮಡಿವಾಳ ಮಾಚಿದೇವರು ಕಾಯಕ, ನಿಷ್ಠೆಗೆ ಹೆಚ್ಚಿನ ಮಹತ್ವ ನೀಡಿದ್ದು, ಅವರ ಸಂದೇಶಗಳನ್ನು ನಮ್ಮ ದೈನಂದಿನ ಕಾರ್ಯದಲ್ಲಿ ಹಾಗೂ ಕರ್ತವ್ಯದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ಡಾ. ಪ್ರೀತಿ ವಾಲಿ, ಸಿಬ್ಬಂದಿಗಳಾದ ದೇವೇಂದ್ರ ನಾಗನಕೇರಾ, ಪ್ರಭು ಮುದ್ನಾಳಕರ್, ಸವಿತಾ, ವಿನೋದ್ ರೆಡ್ಡಿ, ಅರುಣಕುಮಾರ್, ಮಡಿವಾಳ ಸಮಾಜದ ಅಧ್ಯಕ್ಷ ಬಸವರಾಜ ಮಡಿವಾಳ, ರಾಜಕುಮಾರ್ ಮಡಿವಾಳ, ದತ್ತಾತ್ರೇಯ ಮಡಿವಾಳ, ಚಂದ್ರಕಾಂತ, ಸತೀಶ, ನಾಗೇಶ್ ಮಡಿವಾಳ, ರಾಮ್ ಥೋರೇ, ಮಾರುತಿ ಮಡಿವಾಳ, ಸೇರಿದಂತೆ ಸಮಾಜದ ಮುಖಂಡರು ಹಾಗೂ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ವೀರ ಗಣಾಚಾರಿ ಮಡಿವಾಳ ಮಾಚಿದೇವರ ಜಯಂತಿ ಆಚರಣೆ





• ಮಲ್ಲಮ್ಮ ನುಡಿ ವಾರ್ತೆ ,ಬೀದರ :

ಗ್ರಾಮ ಪಂಚಾಯತ್ ಸಂಗೋಳಗಿಯಲ್ಲಿ ವೀರ ಗಣಾಚಾರಿ ಮಡಿವಾಳ ಮಾಚಿದೇವರ ಜಯಂತಿಯನ್ನು ಸಮಾಜದ ಮುಖಂಡರು ಸೇರಿ ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಪೂಜೆ ಹಾಗೂ ಪುಷ್ಪಾರ್ಚನೆ ನೆರವೇರಿಸಿ ಗೌರವ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಚಂದ್ರಶೇಖರ್ ಚನ್ನಶೆಟ್ಟಿ,ಅಶೋಕ್ ಪಾಟೀಲ್,ಬಾಬುರಾವ್ ಪಾಟೀಲ್,ಸಂತೋಷ್ ಭೋಸ್ಲೆ, ಓಂನಾಥ್ ಬಿರಾದಾರ , ಅಶೋಕ್ ಗುತ್ತಿ ,ಸಮಾಜದ ಮುಖಂಡರಾದ ಭೀಮಣ್ಣಾ ಮಡಿವಾಳ, ಈಶ್ವರ ಸ್ಥಳೀಯ ಆಣದೂರೆ,ತುಕಾರಾಮ ಭೈರಿ, ಶ್ರೀನಿವಾಸ ಸೋನಿ, ರಮೇಶ ತಾಂಡ, ಅನೇಕ ಗ್ರಾಮಸ್ಥರು,ಮುಖಂಡರು ಭಾಗವಹಿಸಿದರು,

# ಇಂದು ಜ್ಞಾನದಾತೆ ಸಾವಿತ್ರಿಬಾಯಿ ಫುಲೆ ರವರ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ,ಚಿಟಗುಪ್ಪ:

ಹೆಣ್ಣು ಮಕ್ಕಳಿಗೆ ಶಿಕ್ಷಣವನ್ನು ನಿರಾಕರಿಸಿದ್ದ ಸಂದರ್ಭದಲ್ಲಿ ಶೋಷಿತರಿಗೆ ಅಕ್ಷರದ ಬೆಳಕು ನೀಡಿದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆಯವರ ಜಿಲ್ಲಾಮಟ್ಟದ ಜಯಂತಿ ಮಹೋತ್ಸವನ್ನು ಇಂದು ಬೆಳಿಗ್ಗೆ 8:30 ಘಂಟೆಗೆ ಸಾವಿತ್ರಿಬಾಯಿ ಫುಲೇ ಭಾವಚಿತ್ರದ ಭವ್ಯ ಮೆರವಣಿಗೆಗೆ ಹುಮನಾಬಾದ ಸಮುದಾಯ ಸಂಘಟನಾ ಅಧಿಕಾರಿ ಮೀನಾಕುಮಾರಿ ಬೋರಾಳಕರ್ ಚಾಲನೆ ನೀಡಲಿದ್ದಾರೆ. ಮೆರವಣಿಗೆ ಸರ್ಕಾರಿ ಕನ್ಯಾ ಪ್ರೌಢ ಶಾಲೆಯಿಂದ ಪ್ರಾರಂಭಗೊಂಡು ಶಿವಾಜಿ ವೃತ್ತ, ಬಸವರಾಜ ವೃತ್ತ, ಗಾಂಧಿ ವೃತ್ತ, ಮಾರ್ಗವಾಗಿ ಜೈ ಭವಾನಿ ಕಲ್ಯಾಣ ಮಂಟಪದ ವರೆಗೆ ಜರುಗಲಿದೆ. ನಂತರ 10:30 ಗಂಟೆಗೆ ವೇದಿಕೆ ಕಾರ್ಯಕ್ರಮ ಜರುಗಲಿದೆ ಎಂದು ಸಾವಿತ್ರಿಬಾಯಿ ಫುಲೇ ಶಿಕ್ಷಕಿಯರ ಸಂಘದ ತಾಲೂಕಾಧ್ಯಕ್ಷೆ ಪ್ರೇಮಿಳಾ ರೆಡ್ಡಿ ತಿಳಿಸಿದ್ದಾರೆ. ಚಾಂಗಲೇರಾ ಮತ್ತು ಚಿಟಗುಪ್ಪ ಹಿರೇಮಠದ ಗುರುಲಿಂಗ ಶಿವಾಚಾರ್ಯರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಹುಮನಾಬಾದ ಹಿರೇಮಠ ಸಂಸ್ಥಾನದ ರೇಣುಕಾ ಗಂಗಾಧರ ಶಿವಾಚಾರ್ಯರು ದಿವ್ಯ ನೇತೃತ್ವ ವಹಿಸಲಿದ್ದಾರೆ. ಶಾಸಕ ಡಾ. ಸಿದ್ದು ಪಾಟೀಲ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಡಾ. ಸಾರಿಕಾ ಎಸ್.ಗಂಗಾ ಅವರ ಮಾತು-ಮಾತಿನ ರೂಪಗಳ ಪುಸ್ತಕ ಬಿಡುಗಡೆ ಮಾಡಲಿದ್ದಾರೆ. ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ್ ಪಾಟೀಲ್ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.



**ರಕ್ತದಾನ ಶಿಬಿರ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 50 ಸಾಧಕರಿಗೆ ಜಿಲ್ಲಾ ಮಟ್ಟದ ಪ್ರಶಸ್ತಿ ಪ್ರದಾನ, ಪುಸ್ತಕ ಬಿಡುಗಡೆ, ದಿನದರ್ಶಿಕೆ ಲೋಕಾರ್ಪಣೆ ಹಾಗೂ ಶೈಕ್ಷಣಿಕ ಸಮ್ಮೇಳನ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.**

ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಸಾವಿತ್ರಿಬಾಯಿ ಫುಲೇ ರವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಿದ್ದಾರೆ. ಯುವ ಸಾಹಿತಿ ಕೆ.ವೀರಾರೆಡ್ಡಿ ವಿಶೇಷ ಉಪನ್ಯಾಸ ನೀಡಲಿದ್ದಾರೆ. ಸಾವಿತ್ರಿಬಾಯಿ ಫುಲೇ ಸಂಘದ ಜಿಲ್ಲಾಧ್ಯಕ್ಷೆ ಸಾರಿಕಾ ಎಸ್. ಗಂಗಾ ಅಧ್ಯಕ್ಷತೆ ವಹಿಸಲಿದ್ದಾರೆ. ಡಾ. ಶಾಂತಾಬಾಯಿ ಬಿರಾದಾರ್, ತಹಶೀಲ್ದಾರ್ ಮಂಜುನಾಥ್ ಪಂಚಾಳ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಗೊಂದು ವಸತಿ ನಿಲಯ

ಜಿಲ್ಲೆಗೊಂದು ವಿದ್ಯಾರ್ಥಿನಿಯರಿಗೆ ವಸತಿ ನಿಲಯ,15 ಸಾವಿರ ಸೆಕೆಂಡರಿ ಶಾಲೆಗಳ ಸ್ಥಾಪನೆ,ಮಾಡುವುದು ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ.




ದೇಶದಲ್ಲಿ 3ಆಯುರ್ವೇದ ಕೇಂದ್ರಗಳು ಸ್ಥಾಪನೆ, ಮತ್ತು ಆರೋಗ್ಯ ಕ್ಷೇತ್ರಕ್ಕೆ 10ಸಾವಿರ ಕೋಟಿ ನೀಡುವುದರ ಮೂಲಕ ದೇಶಿ. ಮತ್ತು ಜನರ ಆರೋಗ್ಯದ ಕಡೆ ಹೆಚ್ಚಿನ ಒತ್ತು ಕೊಟ್ಟಿದ್ದಾರೆ.

ಡೈರಿ ಮತ್ತು ಪೌಲ್ಟ್ರಿಗೆ ಆದ್ಯತೆ ನೀಡುವುದರ ಮೂಲಕ ಸಹಕಾರ ಕ್ಷತ್ರದ ಬೆಳವಣಿಗೆಗೆ ಅನುಕೂಲ ವಾಗಲಿದೆ.ಈ ಆಯಾ ವ್ಯಾಯವು ಪ್ರಚಾರದ ಬಡ್ಜೆಟ್ ಅಲ್ಲ ಪ್ರಗತಿಪರ ಬಡ್ಜೆಟ್ ಆಗಿದೆ.

**ಗುರುನಾಥ ಜಾಂತಿಕರ್**
**ಅಧ್ಯಕ್ಷರು,ಬೀದರ ಜಿಲ್ಲಾ**
**ಸೌಹಾರ್ದ ಸಹಕಾರಿ ಒಕ್ಕೂಟ ಬೀದರ**



ಕಮಲನಗರ:ಮಲ್ಲಮ್ಮ ನುಡಿ ದಿನ ಪತ್ರಿಕೆ ಹೊರ ತಂದ ಕ್ಯಾಲೆಂಡರರನ್ನು ಕಮಲನಗರ ಪೊಲೀಸ್ ಠಾಣೆ ಪೊಲೀಸ್ ಸಬ್ ಇನಿಸ್ಪೆಕ್ಟರ್ (ಪಿ. ಎಸ್. ಐ) ಶ್ರೀಮತಿ ಆಶಾ ರಾಠೋಡ ಮೇಡಂ ಅವರಿಗೆ ಕ್ಯಾಲೆಂಡರ್ ನೀಡಿ ಹೊಸ ವರ್ಷ 2026ರ ಶುಭ ಕೋರಲಾಯಿತು. ಈ ಸಂದರ್ಭದಲ್ಲಿ ಕಮಲನಗರ ತಾಲೂಕ ವರದಿಗಾರ ಪರಮೇಶ ರಾಂಪುರೆ ಅವರು ಇದ್ದರು.

# ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮಂಜೂರಾತಿ ಪತ್ರ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:

ತಾಲೂಕಿನ ಮದನೂರ ಗ್ರಾಮ ಪಂಚಾಯಿತಿಯಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷೆ ಪೂಜಾ ಗುಂಡಪ್ಪಾ ಬೇಲ್ಲೆ ಅವರ ಹಸ್ತದಿಂದ ಮಂಜೂರಾತಿಯ ತಿಳುವಳಿಕೆ ಪತ್ರ ವಿತರಣೆ ಮಾಡಲಾಯಿತು. ಸದರಿ ಕಾರ್ಯಕ್ರಮದಲ್ಲಿ 2024-25ನೇ ಸಾಲಿನ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮದನೂರ ಮತ್ತು ಖತಗಾಂವ ಗ್ರಾಮಕ್ಕೆ 239 ಮನೆಗಳು ಅನುಮೋದನೆಗೊಂಡಿದ್ದು ಅರ್ಹ 187 ಫಲಾನುಭವಿಗಳಿಗೆ ಮಂಜೂರಾತಿ ಆದೇಶ ಮಂಜೂರಾತಿ ಪತ್ರವನ್ನು ವಿತರಿಸಲಾಯಿತು.

ಈ ವೇಳೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪೂಜಾ ಗುಂಡಪ್ಪಾ ಬೇಲ್ಲೆ ಮಾತನಾಡಿ,ಗ್ರಾಮದ ಪಂಚಾಯಿತಿ ವ್ಯಾಪ್ತಿಯ ಮದನೂರ ಮತ್ತು ಖತಗಾಂವ ಗ್ರಾಮಗಳು "ಗುಡಿಸಲು ಮುಕ್ತ ಗ್ರಾಮ" ಮಾಡುವ ಗುರಿ ಹೊಂದಲಾಗಿದೆ ಮತ್ತು ಪಾರದರ್ಶಕ ವ್ಯವಸ್ಥೆ ಮೂಲಕ ಫಲಾನುಭವಿಗಳ ಆಯ್ಕೆ ನಡೆದಿದ್ದು ಅಲ್ಲದೆ ಸೂಕ್ತ ಸಮಯದಲ್ಲಿ ಮನೆ ನಿರ್ಮಾಣ ಕಾಮಗಾರಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅವರಿಗೆ ಸೂಚಿಸಿದರು.

ಬೀದರ್ ಸಂಸದ ಸಾಗರ್ ಈಶ್ವರ ಖಂಡ್ರೆ ಅವರ ಕಛೇರಿಯ ಸಿಬ್ಬಂದಿ ವರ್ಗದವರು ಭಾಗವಹಿಸಿ ಫಲಾನುಭವಿಗಳಿಗೆ ಮನೆ ಮಂಜೂರಾತಿಯ ತಿಳುವಳಿಕೆ ಪತ್ರ ವಿವರಿಸಿದರು.ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಮತ್ತು ಮಾಜಿ ಅಧ್ಯಕ್ಷ ಹರಬಾಜಿ ಶಿಂಧೆ, ಸದಸ್ಯರಾದ ಇಸ್ಮಾಯಿಲ್ ಸೈಯದ್, ಶೋಭಾ ವಿಶ್ವನಾಥ್, ರಾಜಕುಮಾರ್ ಧರಣೆ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಂಗಾಚಾರಿ ನರೋಜ ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.ಗೋರಕ್ ನಾಥ್ ಸಾವಳೆ ನಿರೂಪಿಸಿದರು.

**CHANGE OF NAME**

I, **MANGLURE TANUJA RAMKUMAR**
(Old Name)
R/O 19-5-64,
Near RRK College,
Raghavendra Colony, Noubad,
Bidar -585401 Karnataka State......
Have changed my name as
**TANUJA** (New Name)
Vide affidavit Dated: 31-01-2026
Sworn before Notary & Advocate
**Sikenpure Maruti** at Bidar.

# ಮಡಿವಾಳ ಮಾಚಿದೇವರ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:

12ನೇ ಶತಮಾನದ ಶ್ರೇಷ್ಠ ವಚನಕಾರ, ವೀರ ಗಣಾಚಾರಿ ಮತ್ತು ವಚನ ಸಾಹಿತ್ಯದ ಸಂರಕ್ಷಕರೆಂದೇ ಖ್ಯಾತರಾದ ಶ್ರೀ ಮಡಿವಾಳ ಮಾಚಿದೇವರ ಜಯಂತಿಯನ್ನು ಭಾನುವಾರ ಪಟ್ಟಣದ ಪೊಲೀಸ ಠಾಣೆಯಲ್ಲಿ ಆಚರಣೆ ಮಾಡಲಾಯಿತು.

ಪಿ.ಎಸ್.ಐ ಆಶಾ ರಾಠೋಡ ಅವರು ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು, ಮಾಚಿದೇವರಿಗೆ ಕೇವಲ ಬಟ್ಟೆ ಮಡಿ ಮಾಡುವ ಕಾಯಕ ಮಾತ್ರ ತಿಳಿದಿರಲಿಲ್ಲ, ಸಮಾಜದ ಮನಸ್ಸಿಗೆ ಅಂಟಿದ ಅಜ್ಞಾನದ ಮೈಲಿಗೆಯನ್ನು ತೊಳೆಯುವ ಜ್ಞಾನವೂ ಅವರಲ್ಲಿತ್ತು. 'ಅರಸುತನ ಮೇಲಲ್ಲ, ಅಗಸತನ ಕೀಳಲ್ಲ' ಎಂಬ ಅವರ ಸಂದೇಶ ಇಂದಿನ ಸಮ ಸಮಾಜದ ನಿರ್ಮಾಣಕ್ಕೆ ದಾರಿದೀಪವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪೊಲೀಸ ಸಿಬ್ಬಂದಿಗಳಾದ,ಸುನಿಲ ಸರ್, ಲೋಕೇಶ ತೆಲಂಗ್, ಸಂತೋಷ ಪವಾರ, ರಾಜಕುಮಾರ ಸೋನಾರೆ,ರೋಹಿದಾಸ ರಾಠೋಡ್, ಇಮ್ರಾನ್, ಅಂಕುಶ ಭೂರೆ ಸೇರಿದಂತೆ ಇನ್ನಿತರ ಇದ್ದರು.

# ನಾಳೆಯಿಂದ ನಗರಕ್ಕೆ ಶುದ್ಧ ಕುಡಿಯುವ ನೀರು ಪೂರೈಕೆ ಮಹಾಪೌರರಾದ ಪೂಜ್ಯ ವರ್ಷಾ ರಾಜೀವ ಜಾನೆ



• **ಮಲ್ಲಮ್ಮ ನುಡಿ ವಾರ್ತೆ,ಕಲಬುರಗಿ:**

ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಜಲಮೂಲ ನದಿಯಾದ ಭೀಮಾ ನದಿಯಿಂದ ನಿಂತ ನೀರು ಕಲುಷಿತವಾಗಿ ಬರುತ್ತಿರುವ ಕಾರಣ ಸರಡಗಿಯ ಜಾ–ವೆಲ್ ಪಂ–ಹೌಸ್ ಸ್ಥಗಿತಗೊಳಿಸಲಾಗಿದೆ. ಈಗಾಗಲೇ ರಿಪೇರಿ ಮಾಡಲಾಗಿದ್ದು, ನಾಳೆ ನಗರ ನೀರು ಸರಬರಾಜು ಮಾಡಲಾಗುತ್ತದೆ ಎಂದು ಮಹಾನಗರ ಪಾಲಿಕೆ ಮಹಾಪೌರ ವರ್ಷಾ ರಾಜೀವ ಜಾನೆ ಅವರು ಹೇಳಿದರು.

ನಗರದಲ್ಲಿ ಶನಿವಾರದಂದು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿಯ ಪೂಜ್ಯ ಮಹಾಪೌರರ ಸದನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ವಾರದಿಂದ ಮಶಿನರಿ ಕೆಟ್ಟಿರುವುದರಿಂದ ಶುದ್ದ ಕುಡಿಯುವ ನೀರು ಪೂರೈಸಲು ಆಗಿರುವುದಿಲ್ಲ ಎಂದು ತಿಳಿಸಿದರು.

ನಗರಹಲವುಭಾಗದಲ್ಲಿಪೈಪ್‌ಲೈನ್ ಕೆಟ್ಟಿರುತ್ತವೆ ಪೈಪ್‌ಲೈನಗಳ ದುರಸ್ತಿ ಈಗಾಗಲೇ ರೂ 8 ಕೋಟಿ ಖರ್ಚು ಆಗಲಿದ್ದು, ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆಜಿ ಅವರೊಂದಿಗೆ ಈಗಾಗಲೇ ಮಾತನಾಡಿದ್ದೇನೆ ಅವರು ಸಹಕರಿಸಲು ತಿಳಿಸಿದ್ದಾರೆ ಎಂದರು. ಶುದ್ಧ ಕುಡಿಯುವ ನೀರು ಪೂರೈಸಲು ಅನುದಾನ ನೀಡಿದ್ದಾರೆ ಕೆಲಸ ಕಾರ್ಯಗಳನ್ನು ಪ್ರಾರಂಭಿಸಲಾಗುವುದು ಎಂದು ಅವರು ಹೇಳಿದರು.

ಮಶಿನರಿ ತೊಂದರೆಯಿಂದ ಕಳೆದ ಒಂದು ವಾರದಿಂದ ನಗರದಲ್ಲಿ ಸರಿಯಾಗಿ ನೀರು ಪೂರೈಸಲು ಸಾಧ್ಯವಾಗುತ್ತಿಲ್ಲ, 90 ರಷ್ಟು ಮಶಿನರಿ ದುರಸ್ಥಿ ಮಾಡಲಾಗಿದೆ ಇಂದಿನಿಂದ ಸರಿಯಾಗಿ ನೀರು ಸರಬರಾಜು ಮಾಡಲು ಸಿದ್ಧರಾಗಿದ್ದೇವೆ ಎಂದರು.

ದುಷ್ಕರ್ಮಿಗಳಿಂದ ನಾಗನಳ್ಳಿ ಕ್ರಾಸ ಸಮೀಪ ಟ್ಯಾಂಕರ್ ಗಳಿಂದ ಇಂಫ್ಲೊಎಂಟ್ ಕೆಮಿಕಲ್ ಹಾಕಿದ್ದು ಸುತ್ತ–ಮುತ್ತಲಿನ ಜನರಿಗೆ ತೊಂದರೆ ಆಗುವುದು ಎಂದು ತಿಳಿದು ಅವರ ಮೇಲೆ ಕ್ರಮಕೈಗೊಳ್ಳುವಂತೆ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪೊಲೀಸ ಇಲಾಖೆಗೆ ದೂರು ನೀಡಲಾಗಿದೆ ಎಂದರು.

ಮಹಾನಗರ ಪಾಲಿಕೆಯ ಆಯುಕ್ತ ಅವಿನಾಶ ಶಿಂಧೆ ಅವರು ಮಾತನಾಡಿ, ನಗರಕ್ಕೆ ನೀರು ಸರಬರಾಜು ಮಾಡುವ ಜಲಮೂಲ ನದಿಯಾದ ಭೀಮಾ ನದಿಯಿಂದ ನಿಂತ ನೀರು ಕಲುಷಿತವಾಗಿ ಬರುತ್ತಿರುವ ಕಾರಣ ಸರಡಗಿಯ ಜಾಕ್‌ವೆಲ್ ಪಂಪ್‌ಹೌಸ್ ಸ್ಥಗಿತಗೊಳಿಸಲಾಗಿದ್ದು, ಜಾಕ್‌ವೆಲ್ ಪಂಪ್‌ಹೌಸ್ ದುರಸ್ಥಿ ಮಾಡಲಾಗಿದೆ ಇಂದಿನಿಂದ ನೀರು ಸರಬರಾಜು ಮಾಡಲಾಗುತ್ತದೆ ಎಂದರು.ಒಂದು ವಾರದಿಂದ ನೀರು ಪೂರೈಸಲು ಸಾಧ್ಯವಾಗದ ಕಾರಣ ನಗರದಲ್ಲಿ ನೀರಿನ ಸಮಸ್ಯೆ ಇದ್ದಲ್ಲಿ ಟ್ಯಾಂಕರ್ ಮುಖಾಂತರ ನೀರು ಪೂರೈಸಿದೇವೆ ಎಂದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಅಮೃತ ಯೋಜನೇ ಅಡಿಯಲ್ಲಿ ಒಟ್ಟು 2 ಕೋಟಿ ಹಣ ಬಿಡುಗಡೆ ಮಾಡಲಾಗಿದ್ದು. ಇದರಲ್ಲಿ ಕೊಳವೆಬಾವಿ ಕೊರೆಯಿಸಬಹುದು, ಬೋರ್‌ವೆಲ್‌ಗಳ ದುರಸ್ಥಿ ಮಾಡಬಹುದು. ಪೈಪಲೈನ ಮುಖಾಂತರ ನೀರು ಸರಾಗವಾಗಿ ಹೋಗುವಂತೆ ಮಾಡುವುದು, ಇದಲ್ಲದೇ ನಗರದಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಬಹುದು ಎಂದು ಹೇಳಿದರು.

ಬೇಸಿಗೆ ಸಮಯದಲ್ಲಿ 5 ಕೋಟಿ ಅನುದಾನದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗಾಗಿ ಸಮರ್ಪಕವಾಗಿ ಸದ್ಬಳಕೆ ಮಾಡಿಕೊಳ್ಳಲು ಇಡಲಾಗಿದೆ. ಬೇಸಿಗೆ ಸಮಯದಲ್ಲಿ ನೀರು ಸರಬರಾಜು ಮಾಡಲು ಸಮಸ್ಯೆ ಆಗುತ್ತೆ ಎಂದು ಮಹಾರಾಷ್ಟ್ರದ ಉಜ್ಜಯಿನಿ ಜಲಾಶಯದಿಂದ ಭೀಮಾನದಿಗೆ ಮೂರು ಹಂತದಲ್ಲಿ 1.7 ಟಿ.ಎಂ.ಸಿ ನೀರು ಬಿಡುವಂತೆ ಪತ್ರ ಬರೆಯಲಾಗುವುದು ಎಂದು ಹೇಳಿದರು.

## 5 ತಿಂಗಳಿಂದ ಸಂಬಳವಿಲ್ಲ ನಾಲ್ಕನೇ ದಿನಕ್ಕೆ ಅಡುಗೆ ಸಹಾಯಕರ ಅಹೋರಾತ್ರಿ ಧರಣಿ ತೀವ್ರ




• **ಮಲ್ಲಮ್ಮ ನುಡಿ ವಾರ್ತೆ,ಕಲಬುರಗಿ:**

ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ಕಳೆದ 20 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅಡುಗೆ ಸಹಾಯಕರು, ಐದು ತಿಂಗಳಿಂದ ವೇತನ ಪಾವತಿಯಾಗದಿರುವುದನ್ನು ಖಂಡಿಸಿ ನಡೆದ ಧರಣಿ ಸತ್ಯಾಗ್ರಹ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ.

ನಗರದ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಮುಂದೆ ದಿನಗೂಲಿ ನೌಕರರ ಸಂಘದ ನೇತೃತ್ವದಲ್ಲಿ ಹೋರಾಟ ನಡೆಯುತ್ತಿದ್ದು, ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಬೇಸತ್ತ ನೌಕರರು ಪ್ರತಿಭಟನಾ ಸ್ಥಳದಲ್ಲೇ ಅಡುಗೆ ಸಿದ್ಧಪಡಿಸಿ ಊಟ ಮಾಡುವ ಮೂಲಕ ವಿಶಿಷ್ಟವಾಗಿ ಆಕ್ರೋಶ ವ್ಯಕ್ತಪಡಿಸಿದರು.

ನಾಲ್ಕನೇ ದಿನಕ್ಕೆ ಹೋರಾಟ ಪ್ರತಿಭಟನೆ ಆರಂಭವಾಗಿ ಮೂರು ದಿನ ಕಳೆದರೂ ಯಾವೊಬ್ಬ ಅಧಿಕಾರಿಯೂ ಸ್ಥಳಕ್ಕೆ ಬಂದು ಅಹವಾಲು ಕೇಳದಿರುವುದು ನೌಕರರ ಆಕ್ರೋಶಕ್ಕೆ ಕಾರಣವಾಗಿದೆ. ಐದು ತಿಂಗಳಿಂದ ಸಂಬಳವಿಲ್ಲದೆ ಸಾಲದ ಸುಳಿಗೆ ಸಿಲುಕಿದ್ದೇವೆ. ಬಾಡಿಗೆ ಕಟ್ಟಲು, ಮಕ್ಕಳ ಶಿಕ್ಷಣಕ್ಕೆ ಹಣವಿಲ್ಲದೆ ಕುಟುಂಬ ನಿರ್ವಹಣೆ ದುಸ್ತರವಾಗಿದೆ ಎಂದು ಪ್ರತಿಭಟನಾಕಾರರು ಕಣ್ಣೀರು ಹಾಕಿದರು.

ದಶಕಗಳಿಂದ ದುಡಿಯುತ್ತಿರುವ ಕಾರ್ಮಿಕರಿಗೆ ಕನಿಷ್ಠ ವೇತನ ಹಾಗೂ ಬಾಕಿ ಸಂಬಳವನ್ನು ತಕ್ಷಣ ಬಿಡುಗಡೆ ಮಾಡಬೇಕು. ನ್ಯಾಯಯುತ ಬೇಡಿಕೆಗಳು ಈಡೇರುವವರೆಗೂ ಹೋರಾಟ ಹಿಂಪಡೆಯುವುದಿಲ್ಲ ಎಂದು ಸಂಘದ ಮುಖಂಡರು ಎಚ್ಚರಿಸಿದ್ದಾರೆ.

ಸಮಾಜ ಕಲ್ಯಾಣ ಇಲಾಖೆಯ ಈ ವಿಳಂಬ ನೀತಿಯ ವಿರುದ್ಧ ನೌಕರರು ಸತತ ಘೋಷಣೆಗಳನ್ನು ಕೂಗಿ ಆಕ್ರೋಶ ಹೊರಹಾಕಿದರು.

## ಮಠೋದ್ಧಾರದ ಶಿಲ್ಪಿ ಹಾರಕೂಡ ಶ್ರೀ ಕರಬಸಯ್ಯ ಸ್ವಾಮಿ – ಉಪ್ಪಿನ ಬೆಟಗೇರಿ ಶ್ರೀ.



• **ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ:**

ತಾನು ಉಪವಾಸ ಇದ್ದರೂ ಚಿಂತೆಯಿಲ್ಲ ಹಾರಕೂಡ ಶ್ರೀಮಠ ಬೆಳೆಯಬೇಕು, ಬೆಳಗಬೇಕು ಎಂದು ಇಡೀ ತಮ್ಮ ಜೀವನವನ್ನೇ ಸವೆಸಿದ ಮಠೋದ್ಧಾರದ ಶಿಲ್ಪಿ ಶ್ರೀ ಕರಬಸಯ್ಯ ಸ್ವಾಮಿ ಹಿರೇಮಠ ರವರು ಎಂದು ಉಪ್ಪಿನ ಬೆಟಗೇರಿಯ ಕುಮಾರ ವಿರೂಪಾಕ್ಷ ಸ್ವಾಮಿಗಳು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ವೇದಮೂರ್ತಿ ಲಿಂಗೈಕ್ಯ ಕರಬಸಯ್ಯ ಸ್ವಾಮಿ ಹಿರೇಮಠರವರ ಪುಣ್ಯಸ್ಮರಣೋತ್ಸವ ಸಮಾರಂಭದ ಅಂಗವಾಗಿ ಆಯೋಜಿಸಿದ ಕಲ್ಯಾಣ ಕರ್ನಾಟಕ ಸಂಗೀತ ದಿನಾಚರಣೆ–ಯ ದಶಮಾನೋತ್ಸವ ಹಾಗೂ ಕಲ್ಯಾಣ ಕರ್ನಾಟಕ ಸಂಗೀತ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದ ದಿವ್ಯ ನೇತೃತ್ವ ವಹಿಸಿ ಮಾತನಾಡಿದ ಅವರು ಬಾಲ್ಯಾವಸ್ಥೆಯಲ್ಲಿರುವ ಪೂಜ್ಯ ಚನ್ನವೀರ ಶಿವಾಚಾರ್ಯರನ್ನು ಹೆಗಲ ಮೇಲೆ ಹೊತ್ತಿಕೊಂಡು ಹಳ್ಳಿಹಳ್ಳಿಗೆ ಓಡಾಡಿ ಭಕ್ತರಿಂದ ಸಂಗ್ರಹಿಸಿದ ದೇಣಿಗೆಯಲ್ಲಿ ನಿತ್ಯ ದಾಸೋಹ ನಡೆಸಿಕೊಂಡು ಮಠವನ್ನು ಇವತ್ತಿನ ಮಟ್ಟಕ್ಕೆ ಎತ್ತರಿಸಿದ ಮಹಾನ್ ತ್ಯಾಗ ಜೀವಿ ಕರಬಸಯ್ಯನವರು.

ದೊಡ್ಡ ಸಂಗೀತ ಕಲಾವಿದರಾದ ಕರಬಸಯ್ಯನವರು ತಮ್ಮ ಇಡಿ ಜೀವನವನ್ನೇ ನಾದಮಯ ಗೊಳಿಸಿಕೊಂಡವರು.

ಇಂತಹ ಅಪರೂಪದ ನಾದ ತಪಸ್ವಿ ಕರಬಸಯ್ಯನವರ ಹೆಸರಿನಲ್ಲಿ ಪೂಜ್ಯ ಡಾ. ಚೆನ್ನವೀರ ಶಿವಾಚಾರ್ಯರು ಪ್ರತಿ ವರ್ಷ ನಡೆಸಿಕೊಂಡು ಬರುತ್ತಿರುವ ಕಲ್ಯಾಣ ಕರ್ನಾಟಕ ಸಂಗೀತ ದಿನಾಚರಣೆ ಹಾಗೂ ಕಲ್ಯಾಣ ಕರ್ನಾಟಕ ಸಂಗೀತ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ, ಪ್ರತಿಯೊಬ್ಬರೂ ತಂದೆ–ತಾಯಿಗಳಿಗೆ ಅರ್ಥಪೂರ್ಣ ಗೌರವ ಕೊಡಬೇಕು ಎನ್ನುವ ವಾಸ್ತವ ಸಂದೇಶಕ್ಕೆ ಜೀವಂತ ನಿದರ್ಶನವಾಗಿದೆ ಎಂದು ನುಡಿದರು.

ಡಾ.ಚನ್ನವೀರ ಶಿವಾಚಾರ್ಯರು ನಾಡು ಕಂಡ ಅಪರೂಪದ ಶಿವಾಚಾರ್ಯರು, ಅವರ ಜೀವಿತಕಾಲದಲ್ಲಿ ಬದುಕಿರುವ ನಾವುಗಳೇ ಧನ್ಯರು ಎಂದು ಭಾವ ತುಂಬಿ ನುಡಿದರು.

ಸಮಾರಂಭದ ಪಾವನ ಸನ್ನಿಧಾನವನ್ನು ಹಾರಕೂಡದ ಪೂಜ್ಯ ಶ್ರೀ ಷ. ಬ್ರ. ಡಾ. ಚನ್ನವೀರ ಶಿವಾಚಾರ್ಯರು ವಹಿಸಿದ್ದರು. ಆನಂದರಾವ ಭೀಮಶಾ ಝಳಕೆ, ಶಂಕರರಾವ ಮಾಣಿಕೆ, ಪಂಚಾಕ್ಷರಿ ಹಿರೇಮಠ, ಗುರುರಾಜ ಬಿ. ಹಿರೇಮಠ, ಯೋಗಿರಾಜ ಬಿ. ಹಿರೇಮಠ, ಸುಮಂಗಲಾ ವಿರುಪಾಕ್ಷಯ್ಯ ಕಿಣಗಿ, ಸುಧಾರಾಣಿ ಮಡಿವಾಳಯ್ಯ ಕುಪಗೀರಮಠ, ವಿಜಯಲಕ್ಷ್ಮೀ ಬಸಯ್ಯ ಆರ್. ಮಠ, ಊರ್ವಶಿ ಡಾ॥ಚಂದ್ರಮೌಳೇಶ್ವರ ಹಿರೇಮಠ, ಅಲ್ಲಮಪ್ರಭು ಮಲ್ಲಿನಾಥ ಹಿರೇಮಠ, ಡಾ॥ಸುಭದ್ರಾ ಮಲ್ಲಿನಾಥ ಹಿರೇಮಠ, ಗುರುಪಾದಯ್ಯ ಶಿವಶಂಕ್ರಯ್ಯ ಕುಂಬಾರಮಠ, ಚನ್ನವೀರಯ್ಯ ಶಿವಶಂಕ್ರಯ್ಯ ಕುಂಬಾರಮಠ ನರೋಣಾ, ರಾಜಕುಮಾರ ಬಸವರಾಜ ಹಂಜಿಗೆ, ಪ್ರಭುರಾಜ ಕಂಬಳಿಮಠ, ರವಿಕಾಂತ ಗದಗಯ್ಯ ಚಿಟ್ಟೆ, ಚನ್ನವೀರ ಗದಗಯ್ಯ ಚಿಟ್ಟೆ, ಶ್ರೀಶೈಲ ಗದಗಯ್ಯ ಚಿಟ್ಟೆ ಭಾಗವಹಿಸಿದ್ದರು.ಡಾ. ಶಿವಶಂಕರ ಕೋಟನೂರ ಪ್ರಾರ್ಥನಾ ಗೀತೆ ಹಾಡಿದರು. ನವಲಿಂಗ ಪಾಟೀಲ ಸ್ವಾಗತಿಸಿ, ನಿರೂಪಿಸಿದರು. ಶಾರದಾ ಪೊಲೀಸ್ ಪಾಟೀಲ ಆಲೂರ ಹಾಗೂ ರತೀಕಾ ಶಿವಕುಮಾರ ಚಿತಾಪೂರ ಭರತನಾಟ್ಯ ಪ್ರದರ್ಶನ ಮಾಡಿದರು. ಶ್ರೀ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ಖ್ಯಾತ ಚಲನಚಿತ್ರ ಹಿನ್ನೆಲೆ ಗಾಯಕರಾದ ರವೀಂದ್ರ ಸೊರಗಾಂವಿ ಬೆಂಗಳೂರು, ಡಾ. ಸಿದ್ದರಾಮಯ್ಯ ಸ್ವಾಮಿ ಗೋರಟಾ, ಕುಮಾರಿ ರಾಜಶ್ರೀ ದಿಲೀಪಕುಮಾರ ಸ್ವಾಮಿ ರಾಜೇಶ್ವರ ಮತ್ತು ಶ್ರೀ ಕಾರ್ತಿಕ ಸ್ವಾಮಿ ಯಲ್ಲದಗುಂಡಿ, ವಿದ್ಯಾಶ್ರೀ ದಯಾನಂದ ಹಿರೇಮಠ,ಶ್ರೀ ರಾಜಕುಮಾರ ಧೂಳಪ್ಪ ಮುಡಬಿ ಬೆಂಗಳೂರು ಸೇರಿದಂತೆ ನಾಡಿನ 40 ಜನ ಕಲಾವಿದರು ರಾತ್ರಿವಿಡಿ ಸಂಗೀತ ಸೇವೆ ಸಲ್ಲಿಸಿದರು.

ವಿಠಲ ಹೂಗಾರ ಸಂಗೀತ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

## ಕೇಂದ್ರ ಬಜೆಟ್ ಜನರ ಬಜೆಟ್ ಅಲ್ಲ ಕಾರ್ಪೊರೇಟ್ ಲೂಟಿ ಘೋಷಣಾಪತ್ರ! ಕರ್ನಾಟಕಕ್ಕೆ ಶೂನ್ಯ: ಎಂ ಗಂಗಾಧರ್



• **ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು:**

ಇಂದು ಸಂಸತ್ತಿನಲ್ಲಿ ಮಂಡಿಸಲಾದ ಕೇಂದ್ರ ಬಜೆಟ್ 2026–27 ಯಾವುದೇ ಸಂಶಯವಿಲ್ಲದೆ ಭಾರತದ ದುಡಿಯುವ ಬಹುಸಂಖ್ಯಾತ ಜನರ ಮೇಲೆ ಘೋಷಿಸಲಾದ ಆರ್ಥಿಕ ಯುದ್ಧವಾಗಿದೆ. ಇದು ಬಡವರ, ಕಾರ್ಮಿಕರ, ರೈತರ, ದಲಿತ–ಆದಿವಾಸಿಗಳ,ಮಹಿಳೆಯರ ಹಾಗೂ ಯುವಜನರ ಬಜೆಟ್ ಅಲ್ಲ; ಇದು ಅದಾನಿ–ಅಂಬಾನಿ ಕಾರ್ಪೊರೇಟ್ ಲೂಟಿ ವ್ಯವಸ್ಥೆಯ ಬಜೆಟ್. "ವಿಕಸಿತ ಭಾರತ" ಎಂಬ ಘೋಷಣೆಯ ಹಿಂದೆ ಮರೆಮಾಡಿರುವುದು ವಿಕಸಿತ ಕಾರ್ಪೊರೇಟ್ ಭಾರತ. ಹಸಿದ ಜನ, ನಿರುದ್ಯೋಗಿ ಯುವಕರು, ಸಾಲದಲ್ಲಿ ಮುಳುಗಿದ ರೈತರು, ಶೋಷಿತ ಕಾರ್ಮಿಕರು ಈ ಸರ್ಕಾರದ ಆದ್ಯತೆಯಲ್ಲೇ ಇಲ್ಲ ಎಂಬುದು ಈ ಬಜೆಟ್ ಮತ್ತೊಮ್ಮೆ ಸಾಬೀತು ಮಾಡಿದೆ. ಈ ಬಜೆಟ್ ನಲ್ಲಿ ಕರ್ನಾಟಕಕ್ಕೆ ಒಂದು ರೈಲು ಬಿಟ್ಟರೆ ಉಳಿದಿದ್ದೆಲ್ಲ ರೀಲು. ರಾಯಚೂರುಗೆ ಎಮ್ಸ್ ಬಗ್ಗೆ ಮಾತೆ ಇಲ್ಲ!!

ಕಾರ್ಮಿಕ ವರ್ಗದ ಮೇಲೆ ನೇರ ದಾಳಿ ಈ ಬಜೆಟ್‌ನಲ್ಲಿ ಕಾರ್ಮಿಕರ ಬದುಕಿಗೆ ಒಂದು ಸಾಲು ಸಹ ಇಲ್ಲ. ಕನಿಷ್ಠ ಕೂಲಿ, ಶಾಶ್ವತ ಉದ್ಯೋಗ, ಸಾಮಾಜಿಕ ಭದ್ರತೆ, ಪಿಂಚಣಿ, ESI–Pಈ ವಿಸ್ತರಣೆ –ಯಾವುದಕ್ಕೂ ಜಾಗವಿಲ್ಲ. ಗುತ್ತಿಗೆ ಕಾರ್ಮಿಕ ಪದ್ಧತಿ, ಅಸಂಘಟಿತ ವಲಯದ ಶೋಷಣೆ, 4 ಕಾರ್ಮಿಕ ಸಂಹಿತೆಗಳ ಮೂಲಕ ಹಕ್ಕುಗಳ ಕಸಿದುಕೊಳ್ಳುವ ಪ್ರಕ್ರಿಯೆ ಮುಂದುವರೆದಿದೆ.

ಕಾರ್ಪೊರೇಟ್‌ಗಳಿಗೆ ತೆರಿಗೆ ರಿಯಾಯಿತಿ ಕಾರ್ಮಿಕರಿಗೆ ಭರವಸೆ ಶೂನ್ಯ. ಇದು ವರ್ಗಪಕ್ಷಪಾತದ ನಗ್ನ ಉದಾಹರಣೆ. ರೈತರ ಮೇಲೆ ನಂಬಿಕೆಘಾತ ಕೃಷಿ ಸಂಕಟ ತೀವ್ರವಾಗಿರುವಾಗಲೂ ಕಾನೂನಾತ್ಮಕ ಒಖಕ, ಸಂಪೂರ್ಣ ಸಾಲಮನ್ನಾ, ಬೆಳೆ ಬೆಲೆ ಭದ್ರತೆ ಬಗ್ಗೆ ಈ ಬಜೆಟ್ ಸಂಪೂರ್ಣ ಮೌನ. ರೈತರ ಆದಾಯ ದ್ವಿಗುಣಗೊಳಿಸುವ ಮಾತುಗಳು ಕೇವಲ ಚುನಾವಣೆ ಘೋಷಣೆಗಳೆಂದು ಮತ್ತೊಮ್ಮೆ ಬಹಿರಂಗವಾಗಿದೆ. ಹೆಸರು ಬದಲಾದ ಗಿಃ ರಾಮ್‌ಜಿ MGNREGAಗೆ ಹಣ ಕಡಿತ ಮಾಡಿ ಗ್ರಾಮೀಣ ಬಡವರ ಬದುಕಿನ ಮೇಲೆ ದಾಳಿ ನಡೆಸಲಾಗಿದೆ. ದಲಿತ–ಆದಿವಾಸಿಗಳ ಮೇಲಿನ ಸಂವಿಧಾನ ವಿರೋಧಿ ದಾಳಿ SCSP–TSP ಅನುದಾನಗಳನ್ನು ಕಡಿತಗೊಳಿಸಿ, ದಲಿತ–ಆದಿವಾಸಿಗಳ ಶಿಕ್ಷಣ, ಉದ್ಯೋಗ, ವಸತಿ, ಭೂ ಹಕ್ಕುಗಳನ್ನು ವ್ಯವಸ್ಥಿತವಾಗಿ ನಿರಾಕರಿಸಲಾಗಿದೆ. ಸಾಮಾಜಿಕ ನ್ಯಾಯದ ಹೆಸರಿನಲ್ಲಿ ಈ ಸರ್ಕಾರ ಮಾಡುತ್ತಿರುವುದು ಸಂವಿಧಾನಕ್ಕೆ–ಕಟ್ಟುವ ದ್ರೋಹ. ದಲಿತರ ಮೇಲಿನ ದಮನ, ಆದಿವಾಸಿಗಳ ಭೂ ಲೂಟಿ ಈ ಬಜೆಟ್‌ನ ಮೌನದೊಳಗೆ ಅಡಗಿದೆ.

ಮಹಿಳೆಯರು ಮತ್ತು ಯುವಜನರಿಗೆ ಸಂಪೂರ್ಣ ನಿರ್ಲಕ್ಷ್ಯ ಮಹಿಳೆಯರ ಉದ್ಯೋಗ, ಸುರಕ್ಷತೆ, ಪೋಷಣಾ ಆಹಾರ, ಅಂಗನವಾಡಿ–ಆಶಾ ಕಾರ್ಯಕರ್ತೆಯರ ಗೌರವಯುತ ವೇತನ – ಎಲ್ಲವೂ ನಿರ್ಲಕ್ಷ್ಯ.

ದೇಶದ ಯುವಜನ ನಿರುದ್ಯೋಗದಿಂದ ಕಂಗೆಟ್ಟಿರುವಾಗ, ಶಾಶ್ವತ ಉದ್ಯೋಗ ಸೃಷ್ಟಿಸುವ ಯಾವುದೇ ದೃಢ ನೀತಿ ಇಲ್ಲ. ಯುವಜನರಿಗೆ ಈ ಬಜೆಟ್ ನೀಡಿರುವುದು ನಿರಾಶೆ ಮತ್ತು ಅನಿಶ್ಚಿತ ಭವಿಷ್ಯ ಮಾತ್ರ.

**ಶಿಕ್ಷಣ–ಆರೋಗ್ಯ: ಮಾರುಕಟ್ಟೆಗೆ ಹಸ್ತಾಂತರ**

ಸರ್ಕಾರಿ ಶಿಕ್ಷಣ ಮತ್ತು ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ಬದಲು, ಖಾಸಗೀಕರಣಕ್ಕೆ ಕೆಂಪು ಹಾಸು ಹಾಕಲಾಗಿದೆ. ಬಡವರ ಶಿಕ್ಷಣ–ಆರೋಗ್ಯ ಹಕ್ಕುಗಳನ್ನು ಕಾರ್ಪೊರೇಟ್ ಮಾರುಕಟ್ಟೆಗೆ ಒಪ್ಪಿಸುವ ಈ ನೀತಿ ಮಾನವೀಯತೆಯ ವಿರುದ್ಧದ ಅಪರಾಧ.

ಇದು ಆರ್ಥಿಕ ನೀತಿ ಅಲ್ಲ – ವರ್ಗಯುದ್ಧದ ಘೋಷಣೆ

ಈ ಬಜೆಟ್ ಜನರ ಕಲ್ಯಾಣಕ್ಕಾಗಿ ಅಲ್ಲ; ಇದು ಶ್ರೀಮಂತರ ಲಾಭಕ್ಕಾಗಿ ಬಡವರ ಬದುಕನ್ನು ಬಲಿಕೊಡುವ ದಾಖಲೆ. ಸಂವಿಧಾನದ ಸಮಾಜವಾದ, ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ತುಳಿಯುವ ಈ ಬಜೆಟ್ ಅನ್ನು ಸಿಪಿಐಎಂಎಲ್ ರೆಡ್ ಸ್ಟಾರ್ ಸಂಪೂರ್ಣವಾಗಿ ತಿರಸ್ಕರಿಸುತ್ತದೆ.

**ಈ ಜನವಿರೋಧಿ, ಕಾರ್ಪೊರೇಟ್ ಪರ ಬಜೆಟ್ ವಿರುದ್ಧ**

ಕಾರ್ಮಿಕರು – ರೈತರು – ದಲಿತರು –ಮಹಿಳೆಯರು – ಯುವಜನರು ಒಂದಾಗಿ ಕಾರ್ಪೊರೇಟ್ ಆಡಳಿತದ ವಿರುದ್ಧ ಬೀದಿಗೆ ಇಳಿಯಬೇಕೆಂದು ಈ ಮೂಲಕ ಕರೆ ನೀಡುತ್ತೇವೆ ಎಂದು ರಾಜ್ಯ ಸಮಿತಿ ಸದಸ್ಯರಾದ ಎಂ ಗಂಗಾಧರ್ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದರು

## 94ನೇ ದಿನದ ಕ್ವಿಟ್ ಬಲ್ಡೋಟ ಧರಣಿಗೆ ಬಾಮಸೆಫ್ ಬೆಂಬಲ




• **ಮಲ್ಲಮ್ಮ ನುಡಿ ವಾರ್ತೆ,ಕೊಪ್ಪಳ:**

ನಗರಸಭೆ ಆವರಣದ ಮುಂದೆ 94 ದಿನಗಳಿಂದ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ಮೂಲಕ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹವನ್ನು ಬಾಮಸೆಫ್ ರಾಜ್ಯ ಉಸ್ತುವಾರಿಯಾದ ಗೋಪಿ ಬಳ್ಳಾರಿಯವರು ಬೆಂಬಲಿಸಿ ಮಾತನಾಡಿ, ಇದೊಂದು ಹೋರಾಟ ವಿಶಿಷ್ಟವಾದುದು. ಇಲ್ಲಿ ಜೀವ ಮತ್ತು ಆರೋಗ್ಯ ಉಳಿಸಿಕೊಳ್ಳಲು ಇಷ್ಟೊಂದು ಕಷ್ಟ ಪಡುತ್ತಿರುವಾಗ ಸರ್ಕಾರ ಕಣ್ಣುಮುಚ್ಚಿ ಕುಳಿತಿರುವುದು ಸರಿಯಲ್ಲ. ಅಧಿಕಾರಿಗಳು ರಾಜಕಾರಣಿಗಳು ಜನರ ಕುಂದು ಕೊರತೆಗಳಿಗೆ ಕಿವಿಕೊಡದಿದ್ದಾಗ ಅವರ ಕೇಂದ್ರ ಸ್ಥಾನಗಳನ್ನು ಸುತ್ತುವರಿದು ಹೋರಾಟ ಮಾಡಬೇಕು. ಅವರು ರಸ್ತೆಗಿಳಿಯಲು ಯೋಚನೆ ಮಾಡಬೇಕು. ಕ್ರಿಯಾಶೀಲ ಸಂಘಟನೆಗಳು, ಯುವಜನರು ದೃಢ ನಿಲುವು ತಳೆದು ಹೋರಾಟದ ಕಣಕ್ಕೆ ಧುಮುಕಬೇಕು. ನಮ್ಮ ಸಂಘಟನೆ ನೀವು ಕರೆದಾಗ ಬಂದು ಸಂಪೂರ್ಣವಾಗಿ ಬೆಂಬಲಿಸುತ್ತೇವೆ. ಜನತೆಯ ಒಳಿತಿಗಾಗಿ ಹೋರಾಡುವ ನಿಮ್ಮ ಬೆನ್ನಿಗೆ ನಿಲ್ಲುತ್ತೇವೆ ಎಂದರು. ಧರಣಿ ನೇತೃತ್ವವಹಿಸಿದ್ದ ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು, ಸಂಚಾಲಕರಾದ ಮಲ್ಲಿಕಾರ್ಜುನ್ ಬಿ. ಗೋನಾಳ, ರಾಜಶೇಖರ ಏಳುಭಾವಿ, ಡಿಎಸ್‌ಎಸ್ ಮುಖಂಡ ನಿಂಗಪ್ಪ ಜಿ.ಎಸ್. ಬೆಳಕಲ್, ಗವಿಸಿದ್ದಪ್ಪ ಹಲಿಗಿ, ಸಂಜೀವಮೂರ್ತಿ ಬೇವಿನಗಿಡದ, ಕಾಶಪ್ಪ ಚಲವಾದಿ, ಮೂಕಪ್ಪ ಮೇಸ್ತ್ರಿ ಬಸಾಪುರ, ರತ್ನಮ್ಮ ದೊಡ್ಡಮನಿ, ಶಿವಪ್ಪ ಜೆಲ್ಲಿ, ಗಂಗಮ್ಮ ಮುಂಡರಗಿ, ಮೈಲಪ್ಪ ಮದಿನೂರು, ದ್ಯಾಮಣ್ಣ ಚಿಲವಾಡಗಿ ಮುಂತಾದವರು ಪಾಲ್ಗೊಂಡರು.

## ವಿವಿಧೆಡೆ ದಾಳಿ: ಇಬ್ಬರು ಬಾಲಕಾರ್ಮಿಕ ಮಕ್ಕಳ ರಕ್ಷಣೆ




• **ಮಲ್ಲಮ್ಮ ನುಡಿ ವಾರ್ತೆ,ಬಳ್ಳಾರಿ,:**

ನಗರದ ವಿವಿಧೆಡೆ ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಜಂಟಿ ಸಹಕಾರದೊಂದಿಗೆ ಶುಕ್ರವಾರ ದಾಳಿ ನಡೆಸಿ ಇಬ್ಬರು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್ ಅವರು ತಿಳಿಸಿದ್ದಾರೆ.

ಪ್ಯಾನ್–ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಹೊಸಮನೆ ಅವರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್‌ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ಕೈಗೊಳ್ಳಲಾಗಿದೆ.

ನಗರದ ದುರ್ಗಮ್ಮ ದೇವಸ್ಥಾನದ ಹತ್ತಿರದ ಕಪ್ಪಗಲ್ಲು ರಸ್ತೆ, ತಾಳೂರು ರಸ್ತೆ, ರೇಣುಕ ನಗರ, ದುರ್ಗಮ್ಮ ಗುಡಿ ಹತ್ತಿರದ ವಿವಿಧ ಸ್ಥಳಗಳಲ್ಲಿರುವ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಟಾಸ್ಕ್ ಫೋರ್ಸ್ ಸಮಿತಿ ಮುಖಾಂತರ ಭೇಟಿ ನೀಡಿದ ಸಂದರ್ಭದಲ್ಲಿ ಕೆಲಸ ಮಾಡುತ್ತಿದ್ದ ಇಬ್ಬರು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ವಶಕ್ಕೆ ಪಡೆದುಕೊಂಡು ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿಯೇ ಪಡೆದುಕೊಂಡು ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಶಿಕ್ಷಣ ಇಲಾಖೆಗೆ ಒಪ್ಪಿಸಲಾಗಿದೆ.

ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್ ವಿತರಿಸಿ ಜಾಗೃತಿ ಮೂಡಿಸಲಾಯಿತು.

ಈ ಟಾಸ್ಕ್‌ಫೋರ್ಸ್ ಸಮಿತಿಯಲ್ಲಿ ಬಳ್ಳಾರಿ ತಾಲ್ಲೂಕು ಗ್ರೇಡ್–2 ತಹಶೀಲ್ದಾರ ವಿನಾಯಕ, ಕಾರ್ಮಿಕ ನಿರೀಕ್ಷಕರಾದ 1ನೇ ವೃತ್ತದ ರಮೇಶ್, 2 ನೇ ವೃತ್ತದ ಪರಶುರಾಮ್, ಆರೋಗ್ಯ ಇಲಾಖೆಯ ಮುಸ್ತಾಕ್ ಅಹಮದ್, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರ ಪ್ರಶಾಂತ್ ಕುಮಾರ್, ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ಹೊನ್ನೂರಪ್ಪ ಮತ್ತು ಉಮೇಶ, ಮಕ್ಕಳ ಸಹಾಯವಾಣಿ ಸಿಬ್ಬಂದಿ ಚಂದ್ರಕಲಾ ಮತ್ತು ರೀಚ್ ಸಂಸ್ಥೆಯ ಸಂಯೋಜಿಕಿ ಬಸಮ್ಮ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ವೀರಶೈವ ಸಮಾಜದ ದೊಡ್ಡ ಶಕ್ತಿ ಈಶ್ವರ ಖಂಡ್ರೆ : ಹಲಮಂಡಗೆ



• **ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ:**

ಸಚಿವ ಈಶ್ವರ ಖಂಡ್ರೆಯವರು ವೀರಶೈವ ಸಮಾಜದ ದೊಡ್ಡ ಶಕ್ತಿಯಾಗಿದ್ದಾರೆ ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಹಲಮಂಡಗೆ ಅಭಿಪ್ರಾಯಪಟ್ಟರು.

ಬೀದರ ವಿಮಾನ ನಿಲ್ದಾಣದಲ್ಲಿ ರವಿವಾರ ಅಖಿಲ ಭಾರತಿ ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿಕೊಂಡ ಸಚಿವ ಈಶ್ವರ ಖಂಡ್ರೆಯವರಿಗೆ ಸನ್ಮಾನಿಸಿ ಅವರು ಮಾತನಾಡಿದರು. ವೀರಶೈವ ಲಿಂಗಾಯತ ಸಮಾಜವನ್ನು ಮುನ್ನಡೆಸಬಲ್ಲ ಏಕೈಕ ವ್ಯಕ್ತಿ ಸಚಿವ ಈಶ್ವರ ಖಂಡ್ರೆಯವರಾಗಿದ್ದಾರೆ. ಹೀಗಾಗಿ ಸಮಾಜದ ಮುಖಂಡರು ಅವರಿಗೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಸ್ಥಾನಕ್ಕೇರಿಸಿದ್ದು ಸಮಂಜಸವಾಗಿದೆ. ಗುರು ವಿರಕ್ತರನ್ನು ಒಂದೇ ತಟ್ಟೆಯಲ್ಲಿ ತೆಗೆದು–ಕೊಂಡು ಹೋಗುವ ಸಾಮರ್ಥ್ಯ ಈಶ್ವರ ಖಂಡ್ರೆಯವರಲ್ಲಿ ಮಾತ್ರ ಇದೆ. ಹೀಗಾಗಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾಕ್ಕೆ ಅವರು ಸೂಕ್ತವಕ್ತಿಯಾಗಿದ್ದಾರೆ ಎಂದು ಬಣ್ಣಿಸಿದರು.

ಈ ಸಂದರ್ಭದಲ್ಲಿ ಪೌರಾಡಳಿತ ಸಚಿವ ರಹೀಂ ಖಾನ, ಕಸಾಪ ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ, ನಿವೃತ್ತ ನೌಕರರ ವೇದಿಕೆಯ ಜಿಲ್ಲಾ ಸಂಚಾಲಕ ಬಾಬುರಾವ ಬಿರಾದಾರ, ಪ್ರಾಥಮಿಕ ಶಿಕ್ಷಕರ ಸಂಘದ ಅಶೋಕ ಕುಂಬಾರ, ಸರ್ಕಾರಿ ನೌಕರರ ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ ರಾಜೆಪ್ಪ ಪಾಟೀಲ, ಚನ್ನಬಸಪ್ಪ ತಳವಾಡೆ, ತಿಪ್ಪಣ್ಣ ಶಿವಪೂರೆ ಮತ್ತಿತರರು ಉಪಸ್ಥಿತರಿದ್ದರು.

## ಆರ್ಥಿಕ ಬೆಳವಣಿಗೆಗೆ ಹೊಸ ದಿಕ್ಕು.



**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ.**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವ ಮತ್ತು "ಕೇಂದ್ರ ಹಣಕಾಸು ಸಚಿವೆ ಶ್ರೀಮತಿ ನಿರ್ಮಲಾ ಸೀತಾರಾಮನ್ ಮಂಡಿಸಿದ ಯೂನಿಯನ್ ಬಜೆಟ್ 2026 ಒಂದು ವಿಕಸಿತ ಭಾರತದ ದೃಢ ಸಂಕಲ್ಪದ ಪ್ರತಿಬಿಂಬವಾಗಿದೆ. ಬಡವರು, ರೈತರು, ಮಧ್ಯಮ ವರ್ಗ, ಮಹಿಳೆಯರು, ಯುವಜನತೆ, ಎಂಎಸ್‌ಎಂಇ, ಉದ್ಯೋಗ ಸೃಷ್ಟಿ, ಎಐ ತಂತ್ರಜ್ಞಾನ, ಹೈ–ಸ್ಪೀಡ್ ರೈಲ್ವೇ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಸಮತೋಲನದ ಆದ್ಯತೆ ನೀಡಿರುವ ಈ ಬಜೆಟ್ ದೇಶದ ಆರ್ಥಿಕ ಬೆಳವಣಿಗೆಗೆ ಹೊಸ ದಿಕ್ಕು ನೀಡಲಿದೆ. ಎಂದು ಇಂಚೂರ್ ಗ್ರಾಮ ಪಂಚಾಯಿತಿ ಸದಸ್ಯ ಕನಕ ಮಲ್ಲೇಶಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ನಂದನದಲ್ಲಿ ಶಿಕ್ಷಣದ ಜೊತೆ ಸಂಸ್ಕೃತಿ, ಸಾಹಿತ್ಯ, ಕಲೆಗೆ ಆದ್ಯತೆ



• ಮಲ್ಲಮ್ಮ ನುಡಿ ವಾರ್ತೆ ,ಕೆಂಭಾವಿ:

ಅತಿಯಾದ ಮೊಬೈಲ್ ಬಳಕೆ ಮಕ್ಕಳ ಕಲಿಕೆ ಹಾಗೂ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಪಾಲಕ ಪೋಷಕರು ಮಕ್ಕಳ ಕೈಗೆ ಮೊಬೈಲ್ ನೀಡದಂತೆ ಎಚ್ಚರಿಕೆ ವಹಿಸಬೇಕು ಎಂದು ಉಪನ್ಯಾಸಕ ಡಾ ಯಂಕನಗೌಡ ಎಸ್ ಪಾಟೀಲ ಹೇಳಿದರು.

ಪಟ್ಟಣದ ನಂದನ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ಹಮ್ಮಿಕೊಂಡಿದ್ದ 5 ನೇ ವಾರ್ಷಿಕೋತ್ಸವ ಹಾಗೂ ಸಾಂಸ್ಕೃತಿಕ ಸಮಾರಂಭದಲ್ಲಿ ಭಾಗವಹಿಸಿ ಉಪನ್ಯಾಸ ನೀಡಿದ ಅವರು ಮಾಹಿತಿ ತಂತ್ರಜ್ಞಾನ ಬೆಳೆದಂತೆ ಮಾನವೀಯ ಮೌಲ್ಯಗಳು ಕಣ್ಮರೆಯಾಗುತ್ತಿರುವ ಕಾಲಘಟ್ಟದಲ್ಲಿ, ಕಲಿಕೆಯ ಜೊತೆ ಜೊತೆಗೆ ಶಿಸ್ತು, ಸಹನೆ, ಸಮಯಪ್ರಜ್ಞೆ, ಸಂಸ್ಕಾರ, ಸಂಸ್ಕೃತಿ, ಸಾಹಿತ್ಯ, ಕಲೆಗೆ ಮೊದಲ ಆದ್ಯತೆ ನೀಡುತ್ತಿರುವ ನಂದನ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಕಾರ್ಯ ಶ್ಲಾಘನೀಯ ಎಂದರು.

ಯಾದಗಿರಿ ಜಿಲ್ಲಾ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ಮಹಿಪಾಲರಡ್ಡಿ ಡಿಗ್ಗಾವಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು, ಶಿಕ್ಷಣ ಸಂಯೋಜಕ ಶಿವಪುತ್ರಪ್ಪ ಆಲ್ದಾಳ, ಸಿಆರ್ ಸಿ ಬಂದೇನವಾಜ್ ನಾಲತವಾಡ ವಲಯ ಕಸಾಪ ಅಧ್ಯಕ್ಷ ಮಡಿವಾಳಪ್ಪಗೌಡ ಪಾಟೀಲ ಮಾತನಾಡಿದರು. ಹಿರೇಮಠದ ಪೀಠಾಧಿಪತಿ ಷ ಬ್ರ ಶ್ರೀ ಚನ್ನಬಸವ ಶಿವಾಚಾರ್ಯರು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಮುಖ್ಯ ಶಿಕ್ಷಕಿ ಬಿ ವಾಣಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಿವೃತ್ತ ಶಿಕ್ಷಕ ಷಣ್ಮುಖಪ್ಪ ಬಡಿಗೇರ, ಪಾಲಕರ ಪ್ರತಿನಿಧಿಯಾಗಿ ಪುರಸಭೆ ಸದಸ್ಯ ಶರಣಪ್ಪ ಯಾಳಗಿ, ಶಿಕ್ಷಕಿ ಪರ್ವಿನ್ ಬೇಗಂ, ಸಂಸ್ಥೆಯ ಅಧ್ಯಕ್ಷ ಮೋಹನರಡ್ಡಿ ಡಿಗ್ಗಾವಿ, ಉಪಾಧ್ಯಕ್ಷ ಗುರು ಕುಂಬಾರ ಸೇರಿದಂತೆ ಮಕ್ಕಳು, ಶಿಕ್ಷಕರು ಮತ್ತು ಪಾಲಕ ಪೋಷಕರು ಉಪಸ್ಥಿತರಿದ್ದರು.

# ಪ್ರಾಮಾಣಿಕ ಕಾರ್ಯಕರ್ತರೇ ಪಕ್ಷದ ಜೀವಾಳ

## ಶರಣಪ್ಪ ಡಿ ಮಾನೇಗಾರ ಯರಗೋಳ.



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಪಕ್ಷಕ್ಕಾಗಿ ದುಡಿಯುತ್ತಿರುವ ಪ್ರಾಮಾಣಿಕ ಕಾರ್ಯಕರ್ತರೇ ಪಕ್ಷದ ಜೀವಾಳವಾಗಿದ್ದು ಅವರ ಸಮಸ್ಯೆಗಳಿಗೆ ಸ್ಪಂದಿಸಿ ಪ್ರತಿಯೊಬ್ಬರ ಹಿತ ಕಾಯುವುದು ನಮ್ಮ ಕರ್ತವ್ಯ ಎಂದು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಕೆಪಿಸಿಸಿ ಸದಸ್ಯ ಹಾಗೂ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಸದಸ್ಯ ಶರಣಪ್ಪ ಡಿ ಮಾನೇಗಾರ ಅವರು ಅಭಿಪ್ರಾಯ ಪಟ್ಟರು.

ಗುರುಮಠಕಲ್ ಮತಕ್ಷೇತ್ರದ ಸೈದಾಪೂರ ಬ್ಲಾಕ್ ವ್ಯಾಪ್ತಿಯಲ್ಲಿ ಬರುವ ವಿವಿಧ ಹಳ್ಳಿಗಳ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಮನೆಗಳಿಗೆ ಭೇಟಿ ನೀಡಿ ಕುಶಲೋಪರಿ ವಿಚಾರಿಸಿ ಅವರು ಮಾತನಾಡಿದರು. ನಿಷ್ಠಾವಂತ ಕಾರ್ಯಕರ್ತರ ದುಃಖದಲ್ಲಿ ಭಾಗಿಯಾಗಿ, ಅವರಿಗೆ ಮಾನಸಿಕ ಬೆಂಬಲ ನೀಡಿ ಆಪ್ತವಾಗಿ ಮಾತನಾಡಿ ಧೈರ್ಯ ತುಂಬುವುದು ನಮ್ಮ ಆದ್ಯ ಕರ್ತವ್ಯ ಆಗಿದೆ ಎಂದರು. ನೀಲಹಳ್ಳಿ ಗ್ರಾಮದ ಸಿದ್ರಾಮಪ್ಪ ಬಾಗ್ಲಿ, ಮಲ್ಲೇಶ ಪಾಪಣ್ಣೋರ್ , ಬೆಳಗುಂದಿ ಗ್ರಾಮದ ಮಾಜಿ ತಾಲೂಕು ಪಂಚಾಯತಿ ಸ್ಥಾಯಿ ಸಮಿತಿ ಅಧ್ಯಕ್ಷ ಹಂಪಣ್ಣಗೌಡ ಪೊಲೀಸ್ ಪಾಟೀಲ, ತೋರಣತಿಪ್ಪ ಗ್ರಾಮದ ಶ್ರೀನಿವಾಸ ಗೂಡೆಬಳ್ಳೂರು, ಬದ್ದೆಪಲ್ಲಿ ಗ್ರಾಮದ ಸೌರಪ್ಪ , ಅಜಲಾಪುರ ಗ್ರಾಮದ ಹುಸೇನಪ್ಪ ಕಾರ್ಯಕರ್ತರ ಮನೆಗಳಿಗೆ ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದರು. ನೀಲಹಳ್ಳಿ ಗ್ರಾಮದ ಮಲ್ಲಯ್ಯನ ದೇವಸ್ಥಾನ, ನರಸಪ್ಪನ ಗುಡಿ, ದೊಡ್ಡಸಂಭ್ರ ಗ್ರಾಮದ ರೇಣುಕಾ ಯಲ್ಲಮ್ಮ ದೇವಸ್ಥಾನ, ಅಜಲಾಪೂರ ಗ್ರಾಮದ ಭೀಮರಾಯ ದೇವಸ್ಥಾನ, ಬದ್ದೆಪಲ್ಲಿ ಗ್ರಾಮದ ಮಹಿಬೂಬ್ ಸುಭಾನಿ ದರ್ಗಾಕ್ಕೆ ಭೇಟಿ ನೀಡಿ ದರ್ಶನ ಪಡೆದರು. ಈ ಸಂದರ್ಭದಲ್ಲಿ ಯಾದಗಿರಿ ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಚಮರೆಡ್ಡಿ ಬೆನಕನಹಳ್ಳಿ, ಮಾಜಿ ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ಸುದರ್ಶನ ಪಾಟೀಲ್ ಜೈಗ್ರಾಮ, ಹಣಮಂತ ದೊಡ್ಡಮನಿ, ಜಗದೀಶ್ ಸಜ್ಜನ್, ದೇವಪ್ಪ ಗೌಡ ರಾಚನಳ್ಳಿ, ಬನ್ನಪ್ಪ ಹುಲಿಬೆಟ್ಟ, ಸಾಹೇಬ್ ಹುಸೇನಿ ನೀಲಹಳ್ಳಿ, ಡಾ. ಮೈಮುದ್ ಬಡಿಗೇರ್ ಬದ್ದೇಪಲ್ಲಿ, ರಘುಪತಿ ಗೌಡಗೇರಿ, ಮಲ್ಲು ಮಾಳಿಕೇರಿ, ಮಲ್ಲಯ್ಯ ಮೈಲಾಪುರ, ಬಸಲಿಂಗಪ್ಪ ನಾಯಕ ನೀಲಹಳ್ಳಿ, ಬಸವಂತ ಬೆಳಗುಂದಿ, ಶಿವಶಂಕರ ಬಾಗ್ಲಿ ನೀಲಹಳ್ಳಿ, ಸೈದಾಪುರ ಬ್ಲಾಕ್ ಯುವ ಕಾಂಗ್ರೆಸ್ ಅದ್ಯಕ್ಷ ಅಂಜನೇಯ ಕಟ್ಟಿಮನಿ, , ಬ್ಲಾಕ್ ಪ್ರಚಾರ ಸಮಿತಿ ಅಧ್ಯಕ್ಷ ವಿಜಯ ಕಂದಳ್ಳಿ, ವೀರೇಶ್ ಸಜ್ಜನ ಕಡೇಚೂರ, ಮಣಿ ಕ್ಯಾತನಾಳ, ಸಚಿನ್ ಸೈದಾಪುರ , ವೆಂಕಟೇಶ ನಾಯಕ ಕೂಡ್ಲೂರ, ಪುಂಡಲಿಕ ಗೊಂದೆಡಗಿ,

ತಿಮ್ಮಣ್ಣರೆಡ್ಡಿ ಬೆಳಗುಂದಿ, ಭೀಮರಾಯ ಉಜ್ವೆಲಿ , ಮಂಜುನಾಥ ಮೇತ್ರಿ ಮಲ್ಹಾರ, ಸಾಬು ಪೂಜಾರಿ ರಾಂಪುರ, ಸಿದ್ದು ನಾಯಕ, ಸತೀಶ್ ಕಣೇಕಲ್ ಇನ್ನೂ ಮುಂತಾದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಶರಣಪ್ಪ ಮಾನೇಗಾರ ಅಭಿಮಾನಿಗಳು ಉಪಸ್ಥಿತರಿದ್ದರು.

# ಗ್ರಾಮೀಣ ಭಾಗದಲ್ಲಿ ಡಿಡಿಯು ಶಿಕ್ಷಣ ಸಂಸ್ಥೆಯ ಕಾರ್ಯ ಶ್ಲಾಘನೀಯ: ಕರುಣೇಶ್ವರ ಶ್ರೀ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.



ಸತತ ಪ್ರಯತ್ನ ಕಠಿಣ ಶ್ರಮದಿಂದ ಮಾತ್ರ ಸಾಧನೆ ಮಾಡಲು ಸಾಧ್ಯ ಎಂದು ಸುಕ್ಷೇತ್ರ ಕೃಷ್ಣವೇಣಿ ಭೀಮಾ ಸಂಗಮದ ಪರಮಪೂಜ್ಯ ಶ್ರೀ ಕರುಣೆಶ್ವರ ಶಿವಾಚಾರ್ಯರ ಮಹಾಸ್ವಾಮಿಗಳು ಹೇಳಿದರು. ಶನಿವಾರದಂದು ವಡಗೇರಾ ಪಟ್ಟಣದಲ್ಲಿ

ಡಿಡಿಯು ಶಿಕ್ಷಣ ಸಂಸ್ಥೆಗಳ ವಡಗೇರಾ ಶಾಖೆಯ 8ನೇ ವರ್ಷದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಜೀವನದಲ್ಲಿ ಮೌಲ್ಯಾಧಾರಿತ ಶಿಕ್ಷಣ, ಶಿಸ್ತು ಸಮಯ ಪಾಲನೆ ಬೆಳೆಸಿಕೊಳ್ಳಬೇಕು ಇದು ಸ್ಪರ್ಧಾತ್ಮಕ ಯುಗವಾಗಿದ್ದು ವಿದ್ಯಾರ್ಥಿಗಳು ಉತ್ತಮವಾಗಿ ಅಧ್ಯಯನ ಮಾಡುವಂತೆ ಸಲಹೆ ನೀಡಿದರು. ಡಿಡಿಯು ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಡಾ.ಭೀಮಣ್ಣ ಮೇಟಿ ಗ್ರಾಮೀಣ ಭಾಗದ ಮಕ್ಕಳ ಶೈಕ್ಷಣಿಕ ಬೆಳವಣಿಗೆಗಾಗಿ ಹಗಲಿರುಳು ಎನ್ನದೆ ಶ್ರಮಿಸಿ ಇಲ್ಲಿ ಉತ್ತಮವಾದ ಶಾಲೆ ಕಾಲೇಜು ತೆರೆದಿರುವ ಕಾರ್ಯ ಶ್ಲಾಘನೀಯ ವಿದ್ಯಾರ್ಥಿಗಳು ಉತ್ತಮವಾದ ಸಾಧನೆ ಮಾಡಿ ಶಾಲೆ ಮತ್ತು ತಾಲೂಕು ಜಿಲ್ಲೆ ರಾಜ್ಯಕ್ಕೂ ಕೀರ್ತಿ ತರುವಂತೆ ಹೇಳಿದರು. ಕಲಬುರ್ಗಿ ವಿಶ್ವವಿದ್ಯಾಲಯದ ವಾಣಿಜ್ಯ ಶಿಕ್ಷಣ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ನಿವೃತ್ತ ಡೀನ್ ಎ.ಪಿ. ಹೊಸಮನಿ ಮಾತನಾಡಿ. ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ಶಿಕ್ಷಕರ ಪಾತ್ರ ಅಷ್ಟೇ ಅಲ್ಲ ಪಾಲಕರ ಪಾತ್ರವು ಅತಿ ಮುಖ್ಯವಾಗಿದೆ ಎಂದರು. ವಿದ್ಯಾರ್ಥಿಗಳು ಸಮಯ ಪಾಲನೆ ಶಿಸ್ತು ತಂದೆ ತಾಯಿ ಗುರು ಹಿರಿಯರನ್ನು ಗೌರವಿಸುವುದನ್ನು ರೂಡಿಸಿಕೊಳ್ಳಬೇಕು ಪಾಲಕರು ಮಕ್ಕಳ ಕೈಗೆ ಮೊಬೈಲ್ ನೀಡದಂತೆ ಕಿವಿಮಾತು ಹೇಳಿದರು. ಡಿಡಿಯು ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ದೇವೇಂದ್ರಪ್ಪ ಮೇಟಿ, ಆಡಳಿತಾಧಿಕಾರಿಗಳಾದ ಮಲ್ಲಿಕಾರ್ಜುನ ಮೇಟಿ, ಪ್ರಸ್ತಾವಿಕವಾಗಿ ಮಾತನಾಡಿದರ. ಇದೇ ಸಮಯದಲ್ಲಿ ಶಾಲಾ ವಾರು ವರ್ಷದ ಶಿಕ್ಷಣದಲ್ಲಿ ಅತಿಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಸಾಯಂಕಾಲ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಸಜೀಶ್ ರಾಜ್, ಜಸ್ಟಿನ್ ಕೆ.ಎಸ್, ಹೊನ್ನಯ್ಯ ಕೊಂಕಲ್, ಪಟ್ಟಣದ ಮುಖಂಡರು ಹಾಗೂ ಶಾಲಾ ಸಿಬ್ಬಂದಿ ವರ್ಗದವರು ಪಾಲಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಇಂದು ನೇರ ಫೋನ್ ಇನ್ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಜಿಲ್ಲೆಯ ಸಾರ್ವಜನಿಕರಿಗೆ ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳ ಗಮನಕ್ಕೆ 2026ರ ಫೆಬ್ರವರಿ 2 ರಂದು ನೇರ ಫೋನ್ ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ವಿಭಾಗ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿ ಜಿ.ಬಿ. ಮಂಜುನಾಥ ಅವರು ತಿಳಿಸಿದ್ದಾರೆ. ಜಿಲ್ಲೆಯ ಸಾರ್ವಜನಿಕರಿಗೆ ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಂಟಾಗುವ ಸಾರಿಗೆ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಪ್ರತಿ ತಿಂಗಳು ಮೊದಲನೆಯ ಸೋಮವಾರ ನೇರ ಫೋನ್ ಇನ್ ಕಾರ್ಯಕ್ರಮವನ್ನ ಆಯೋಜಿಸಲು ಕಲಬುರಗಿ ಕೇಂದ್ರ ಕಛೇರಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವ್ಯವಸ್ಥಾಪಕ ನಿರ್ದೇಶಕರು ಅವರು ಸೂಚಿಸಿದ್ದಾರೆ. ಯಾದಗಿರಿ ಜಿಲ್ಲೆಯ ಸಾರ್ವಜನಿಕರಿಗೆ ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಇರುವ ಸಾರಿಗೆ ಸಮಸ್ಯೆಗಳ ಕುರಿತು ಕಕರಸಾ ನಿಗಮ ಯಾದಗಿರಿ ವಿಭಾಗದಿಂದ 2026ರ ಫೆಬ್ರವರಿ 2ರ ಸೋಮವಾರ ಮಧ್ಯಾಹ್ನ 3.30 ರಿಂದ 5.30 ಗಂಟೆಯ ವರೆಗೆ ನೇರ ಫೋನ್ ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿರುತ್ತದೆ. ಯಾದಗಿರಿ ಜಿಲ್ಲೆಯ ಸಾರ್ವಜನಿಕರು ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳು ಈ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ದೂ.ಸಂ. 6366423882 ಕರೆ ಮಾಡಿ ತಮ್ಮ ಸಾರಿಗೆ ವ್ಯವಸ್ಥೆ ಕುರಿತು ಇರುವ ಸಮಸ್ಯೆಗಳನ್ನು ತಿಳಿಸಿ ಪರಿಹಾರ ಕಂಡುಕೊಳ್ಳಬೇಕು. ಅಂದು ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಯಾದಗಿರಿ ವಿಭಾಗ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿ ಅವರು ಜಿಲ್ಲೆಯ ಸಾರಿಗೆ ಸಮಸ್ಯೆಗಳ ಕುರಿತು ಸಾರ್ವಜನಿಕರೊಂದಿಗೆ ನೇರವಾಗಿ ಮಾತನಾಡಲಿದ್ದಾರೆ. ಜಿಲ್ಲೆಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಸಿತ ಭಾರತದತ್ತ ದೃಢ ಹೆಜ್ಜೆ ಕೇಂದ್ರ ಬಜೆಟ್ ಶ್ರೀಧರ ಸಾಹುಕಾರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಎನ್‌ಡಿಎ ಸರ್ಕಾರ ಮಂಡಿಸಿರುವ ಕೇಂದ್ರ ಬಜೆಟ್ 2026–27 ಅನ್ನು ನಾನು ಹೃತ್ಪೂರ್ವಕವಾಗಿ ಸ್ವಾಗತಿಸುತ್ತೇನೆ. ಈ ಬಜೆಟ್ ವಿಕಸಿತ ಭಾರತ ನಿರ್ಮಾಣದ ದೃಢ ಮತ್ತು ಭವಿಷ್ಯನಿರ್ದೇಶಿತ ರೂಪರೇಖೆಯಾಗಿದ್ದು, ವೇಗವಾದ ಆರ್ಥಿಕ ಬೆಳವಣಿಗೆ, ಸಾಮಾಜಿಕ ನ್ಯಾಯ, ಹಣಕಾಸು ಶಿಸ್ತು ಮತ್ತು ಜನಕೇಂದ್ರಿತ ಆಡಳಿತವನ್ನು ಸಮತೋಲನದಿಂದ ಒಗ್ಗೂಡಿಸಿದೆ ಎಂದು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಶ್ರೀಧರ ಸಾಹುಕಾರ ಹೇಳಿದರು.

ಭಾಷಣಕ್ಕಿಂತ ಕಾರ್ಯ, ಜನಪ್ರಿಯತೆಯಿಗಿಂತ ಸುಧಾರಣೆ ಎಂಬ ತತ್ವದೊಂದಿಗೆ ರೂಪುಗೊಂಡ ಈ ಬಜೆಟ್, ರೈತರು, ಯುವಕರು, ಮಹಿಳೆಯರು, ಎಂಎಸ್‌ಎಂಇಗಳು, ಮಧ್ಯಮ ವರ್ಗ ಮತ್ತು ವಂಚಿತ ವರ್ಗಗಳವರೆಗೆ ಅಭಿವೃದ್ಧಿಯ ಲಾಭಗಳು ತಲುಪುವಂತೆ ಮಾಡುತ್ತದೆ. ಉತ್ಪಾದನಾ ಕ್ಷೇತ್ರ, ಎಂಎಸ್‌ಎಂಇಗಳು, ಮೂಲಸೌಕರ್ಯ, ಕೌಶಲ್ಯಾಭಿವೃದ್ಧಿ ಮತ್ತು ಗ್ರಾಮೀಣ ಅಭಿವೃದ್ಧಿಗೆ ನೀಡಿರುವ ಬಲಿಷ್ಠ ಒತ್ತಾಸೆ, ಸ್ಥಳೀಯ ಉದ್ಯಮ ಉತ್ತೇಜನ, ಉತ್ತಮ ಸಂಪರ್ಕ ವ್ಯವಸ್ಥೆ ಮತ್ತು ಕೃಷಿ ಬೆಳವಣಿಗೆಯಲ್ಲಿ ಮಹತ್ತರ ಲಾಭವನ್ನು ತರುತ್ತದೆ. ಕೇಂದ್ರ ಬಜೆಟ್ 2026–27 ಭಾರತದ ಆರ್ಥಿಕ ಅಡಿಪಾಯವನ್ನು ಬಲಪಡಿಸುವ ಜೊತೆಗೆ, 2047ರೊಳಗೆ ಅಭಿವೃದ್ಧಿಶೀಲ ರಾಷ್ಟ್ರವಾಗುವ ಭಾರತದ ಗುರಿಗೆ ದೃಢ ಪಥವನ್ನು ಹಾಕಿದೆ. ವಿಕಸಿತ ಭಾರತ ನಿರ್ಮಾಣದ ನಿಟ್ಟಿನಲ್ಲಿ ಮತ್ತೊಂದು ಮಹತ್ವದ ಮೈಲಿಗಲ್ಲನ್ನು ಸ್ಥಾಪಿಸುವ ದೂರದೃಷ್ಟಿಯ ಕೇಂದ್ರ ಬಜೆಟ್ ಮಂಡಿಸಿದ್ದಕ್ಕಾಗಿ ನಾನು ಆದರಣೀಯ ಪ್ರಧಾನಿ ಶ್ರೀ ನರೇಂದ್ರ ಮೋದಿ ಜೀ ಹಾಗೂ ಮಾನ್ಯ ವಿತ್ತ ಸಚಿವೆ ಶ್ರೀಮತಿ ನಿರ್ಮಲ ಸೀತಾರಮಾನ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ..

# ಅಂಬಲಿ ರಾಶಿ ಮುತ್ತಿನ ಗಿಣಿ ಸಂಪಾಯಿತಲೇ ಪರಾಕ್ ಇದು



ಮಲ್ಲಮ್ಮ ನುಡಿ ವಾರ್ತೆ ಹರಪನಹಳ್ಳಿ :

ನಗರದ ಹತ್ತಿರ ಇರುವ ದೊಡ್ಡ ಮೈಲಾರಲಿಂಗೇಶ್ವರ ದೇವಸ್ಥಾನದಲ್ಲಿ ಇಂದು ಪ್ರತಿ ವರ್ಷದಂತೆ ಗೋರಪ್ಪ ನುಡಿದ ಕಾರ್ಣಿಕೋತ್ಸವ ದ ಭವಿಷ್ಯದ ನುಡಿ.

ಪ್ರತಿವರ್ಷ ಜರುಗುವ ಮೈಲಾರಲಿಂಗೇಶ್ವರ ಜಾತ್ರೆಗು ಕೆಲ ದಿನಗಳ ಮುನ್ನ ಪಟ್ಟಣದ ದೊಡ್ಡ ಮೈಲಾರ ಎಂದೇ ಪ್ರಸಿದ್ಧಿ ಹೊಂದಿರುವ ಐತಿಹಾಸಿಕ ದೇವಸ್ಥಾನದಲ್ಲಿ ನುಡಿಯುವ ಭವಿಷ್ಯವಾಣಿಯನ್ನೇ ಅವಲಂಬಿಸಿ ಇಡೀ ತಾಲೂಕಿನ ಜನತೆ ಭಕ್ತಿಯಿಂದ ನಡೆಯುತ್ತಾರೆ.

ಈ ಬಾರಿಯ ಭವಿಷ್ಯದ ನುಡಿ ಮುಂದಿನ ದಿನಗಳಲ್ಲಿ ಉತ್ತಮ ಮಳೆ ಬೆಳೆ ಆಗಿ ಸಮೃದ್ಧಿ ಹೊಂದುತ್ತದೆ ಎಂಬ ಅರ್ಥವನ್ನು ಸೂಚಿಸುತ್ತದೆ. ಕಾಣಿಕೋತ್ಸವದ ನುಡಿಯನ್ನೇ ವರ್ಷದ ಭವಿಷ್ಯವನ್ನಾಗಿ ನಂಬಿಕೆಯಿಂದ ನಡೆದುಕೊಳ್ಳುವುದು ತಲತಲಾಂತರದಿಂದ ಬಂದ ವಾಡಿಕೆಯಾಗಿದೆ. ಕಾರ್ಣಿಕ ನುಡಿಯುವ ಕುಮಾರಪ್ಪ 9 ದಿನಗಳ ಕಾಲ ಉಪವಾಸವಿದ್ದು ಜಾತ್ರೆಯ ದಿನ ಭವಿಷ್ಯ ನಡೆಯುವುದು ನಡೆದ ಬಂದಿದೆ. ಕಾರ್ಣಿಕೋತ್ಸವಕ್ಕೂ ಮುನ್ನ ನೆರೆದಿರುವ ಸಾವಿರಾರು ಭಕ್ತರ ಗದ್ದಲ ವನ್ನ ಸದ್ದಲೇ ಎನ್ನುತ್ತಿದ್ದಂತೆ ಇಡೀ ಜಾತ್ರೆಯ ನಿಶಬ್ದವಾಗುತ್ತದೆ.


## PUBLIC NOTICE FOR SALE

Herein, I Vikram Sambhaji Patil Advocate, Basavakalyan, under the instruction and authorization of below mentioned land owners, do hereby issue this public notice as under:

Sr. No-. Sy. No- Acre/Guntas Situated at Stands in the name of

1. 201/1. 2 --16 Hulsoor. Santosh Vinayakrao Vinayakrao @ Venkatrao Manikrao Murlidhar Pandurangrao

2. 201/6. 1 -- 37. Hulsoor. Vinayakrao @ Venkatrao Manikrao

3.201/7. 2 -- 16. Hulsoor. Murlidhar Pandurangrao

4.201/8. 3 -- 00. Hulsoor. Srikant Madhavrao

5.202/1. 4 – 16. Hulsoor. Smt. Savita Srikant & Smt. Jaishri Hanmant.

6.202/6 2 – 00. Hulsoor. Srikant Madhavrao.

**Which are Commonly bounded as under:**

East : Nala

West : Land of Vijaykumar Ambadasrao.

North : Hulsor to Halhalli Road.

South : Land of Rajappa Kamshetty, Jagannath Mehkare and Shailendra Mehkare.

Public in general is hereby informed by this notice that, the above land owners are selling the above lands through registered sale deeds.

Therefore, Any person/s having any right, title, claim or interest in the said properties by way of sale, inheritance, legal heirs, possession, succession, mortgage, lien, lease, gift or any deed etc or otherwise whosoever in respect of the same has any claim, shall initiate the objection in writing to the undersigned with supporting documents thereof within 14 days from the date of publication of this notice, or otherwise any such subsequent claims by any one shall not be considered and shall be deemed to be waived and abandoned. And my client shall proceed to conclude registration and no claims shall be entertained thereafter. Hence this notice.

**Date: 31/01/2026.**

**Place: Basavkalyan**

**Vikram S Patil Advocate.**

**Court Road, B. kalyan, Dist:Bidar**




ಹಿರೇಮಠದ ಶ್ರೀ ಚೆನ್ನಬಸವೇಶ್ವರ ಇವರ ವತಿಯಿಂದ ಬಸವಕಲ್ಯಾಣ ಕ್ಷೇತ್ರ ಸಮಿತಿ ಸಹ ಯೋಗದಲ್ಲಿ 4.ನೇಯ ಕಾಯಕ ಉತ್ಸವ 2026. ಇದೇ ತಿಂಗಳ ದಿನಾಂಕ 7. ಮತ್ತು 8.ರಂದು ಎರಡು ದಿನಗಳ ಕಾಲ ನಡೆಯಲಿರುವ ಕಾಯಕ ಉತ್ಸವದ ಆಮಂತ್ರಣ ಪತ್ರಿಕೆಯನ್ನು ಹಾರಕೂಡ ಪೂಜ್ಯ ಶ್ರೀ ಡಾ ಚನ್ನವೀರ ಶಿವಾಚಾರ್ಯರು ಭಕ್ತರಿಗೆ ನೀಡಿ ಆಹ್ವಾನಿಸಿದರು. ಈ ಸಂದರ್ಭದಲ್ಲಿ ಪೃಥ್ವಿರಾಜ ದೇಗಾಂವ, ಮಲ್ಲಿನಾಥ ಹಿರೇಮಠ ಹಾರಕೂಡ, ರಾಜಕುಮಾರ ಪಾಟೀಲ, ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದುಗೆ ಮಹಾದೇವ ಪಾಟೀಲ, ಸೂರ್ಯಕಾಂತ ಮಠ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).



ಕಲಬುರಗಿ: ನಗರದ ವಾರ್ಡ ನಂ. 39.ರಲ್ಲಿ ಬರುವ ಕನಕ ನಗರದಲ್ಲಿ ಕೆಕೆಆರ್‌ಡಿಬಿ ಅನುದಾನದಲ್ಲಿ 50.ಲಕ್ಷ ರೂ.ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಶಾಸಕ ಅಲ್ಲಮಪ್ರಭು ಪಾಟೀಲ ಹಾಗೂ ಮೇಯರ್ ವರ್ಷಾ ರಾಜೀವ ಜಾನೆ ಅವರು ಗುದಲ್ಲಿ ಪೂಜೆ ನೇರೆವರಿಸಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಿಂಗರಾಜ ತಾರಫೈಲ್, ಪಾಲಿಕೆ ಸದಸ್ಯೆ ರೇಣುಕಾ ಹೋಳಕರ್, ಕಾಂಗ್ರೆಸ್ ಮುಖಂಡರಾದ ಶಿವಾನಂದ ಹೋನಗುಂಟಿ, ಪರಶುರಾಮ ನಾಟೀಕಾರ, ಶರಣು ಕಲಶೆಟ್ಟಿ, ಭೀಮು ಪೂಜಾರಿ, ಶಿವಾಜಿ ಪಟ್ಟಣ್ಣ, ನಾಗೇಶ ಮಠಪತಿ, ರಾಜು ಟಿ, ಶಿವುಕುಮಾರ ಬಾಳಿ, ನರಸಪ್ಪ ಗುತ್ತೇದಾರ, ಲಕ್ಷ್ಮೀಕಾಂತ ಮೇತ್ರಿ, ಶಂಕರ ಕೇರೂರ ಸೇರಿದಂತೆ ಇತರರು ಇದ್ದರು.

# ಅದ್ದೂರಿಯಾಗಿ ಜರುಗಿದ ಹಿಂದೂ ಸಮ್ಮೇಳನ ಮೆರವಣಿಗೆ



• ಮಲ್ಲಮ್ಮ ನುಡಿ ವಾರ್ತೆ,ಕಮಲನಗರ:

ಪಟ್ಟಣದಲ್ಲಿ ಭಕ್ತಿ ಮತ್ತು ಶಕ್ತಿಯ ಸಂಗಮದಂತೆ ಹಿಂದೂ ಸಮ್ಮೇಳನ ಹಾಗೂ ಬೃಹತ್ ಶೋಭಾ ಯಾತ್ರೆ ಅತ್ಯಂತ ವಿಜೃಂಭಣೆಯಿಂದ ಜರುಗಿತು. ನಗರದ ಮೂಲೆ ಮೂಲೆಗಳಿಂದ ಕೇಸರಿ ಶಾಲು ಹೊತ್ತು, ಕೈಯಲ್ಲಿ ಧ್ವಜ ಹಿಡಿದು ಸಾವಿರಾರು ಯುವಕರು, ಮಹಿಳೆಯರು ಹಾಗೂ ಹಿರಿಯರು ಸಮ್ಮೇಳನದಲ್ಲಿ ಭಾಗಿಯಾಗಿದ್ದರು.

**ಕಣ್ಮನ ಸೆಳೆದ ಶೋಭಾ ಯಾತ್ರೆ:**

ಮಧ್ಯಾಹ್ನ 2 ಗಂಟೆಗೆ ಆರಂಭವಾದ ಶೋಭಾ ಯಾತ್ರೆಯು ನಗರದ ಪ್ರಮುಖ ವೃತ್ತಗಳ ಮೂಲಕ ಸಾಗಿತು.

ಡಾ. ಚನ್ನಬಸವ ಪಟ್ಟದ್ದೇವರು ಶಾಖಾ ಮಠದಿಂದ ಆರಂಭಗೊಂಡ ಶೋಭಾಯಾತ್ರೆಗೆ ಸಮಿತಿ ಅಧ್ಯಕ್ಷ ಶಿವಾನಂದ ವಡ್ಡೆ ನೇತೃತ್ವದಲ್ಲಿ ರಾಷ್ಟ್ರೀಯ ಸೇವಾ ಸಂಘ ಪ್ರಮುಖರು, ಸಮಿತಿ ಪ್ರಮುಖರು, ವಿವಿಧ ಸಂಘಟನೆ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಮುಖಂಡರು ಗೋ ಪೂಜೆ ಮಾಡುವ ಮೂಲಕ ಚಾಲನೆ ನೀಡಲಾಯಿತು.

ಯಾತ್ರೆಯ ಮುಂಚೂಣಿಯಲ್ಲಿ ಸಾಗಿದ ಕಲಾತಂಡಗಳು, ವೀರಗಾಸೆ, ಡೊಳ್ಳು ಕುಣಿತ ಮತ್ತು ಭಜನಾ ತಂಡಗಳು ಜನರ ಕಣ್ಮನ ಸೆಳೆದವು. ವಿಶೇಷವಾಗಿ ವಿನ್ಯಾಸಗೊಳಿಸಲಾದ ಭವ್ಯ ರಥದಲ್ಲಿ ಭಾರತ ಮಾತಾ ಭಾವಚಿತ್ರ ಮೆರವಣಿಗೆ ಮಾಡಲಾಯಿತು.

**ಧರ್ಮ ಸಭೆ:ಮೆರವಣಿಗೆಯ ನಂತರ**

ಧರ್ಮ ಸಭೆಯನ್ನು ಡಾ. ಚನ್ನಬಸವ ಪಟ್ಟದ್ದೇವರ ಪ್ರೌಢಶಾಲೆಯಲ್ಲಿ ನಡೆದ ಧರ್ಮ ಸಭೆಯಲ್ಲಿ ಮಠಾಧೀಶರಾದ ಶ್ರೀ ರಾಮ ಚೈತನ್ಯ ಹಾಗೂ ಗಣ್ಯರು ಭಾಗವಹಿಸಿ, ಹಿಂದೂ ಧರ್ಮದ ಸಂಸ್ಕೃತಿ, ಏಕತೆ ಮತ್ತು ಪರಂಪರೆಯ ಬಗ್ಗೆ ಪ್ರೇರಣಾದಾಯಕ ಭಾಷಣ ಮಾಡಿದರು. "ನಾವೆಲ್ಲರೂ ಒಂದೇ" ಎನ್ನುವ ಸಂದೇಶ ಸಾರುವ ಮೂಲಕ ಸೌಹಾರ್ದಯುತವಾಗಿ ಸಮ್ಮೇಳನವನ್ನು ಮುಕ್ತಾಯಗೊಳಿಸಲಾಯಿತು.

**ಬಿಗಿ ಪೊಲೀಸ್ ಬಂದೋಬಸ್ತ್:**

ಯಾವುದೇ ಅಹಿತಕರ ಘಟನೆ ನಡೆಯದಂತೆ ಡಿ.ವೈ.ಎಸ್ಪಿ ಶಿವಾನಂದ ಪವಾಡಶೆಟ್ಟಿ ಅವರ ನೇತೃತ್ವದಲ್ಲಿ ಪೊಲೀಸ್ ಇಲಾಖೆ ನಗರದಾದ್ಯಂತ ಬಿಗಿ ಭದ್ರತೆಯನ್ನು ಕೈಗೊಂಡಿದರು.

# ಮಡಿವಾಳ ಮಾಚಿದೇವರ ಮಾರ್ಗದಲ್ಲಿ ನಡೆಯರಿ: ಸಾಲಿಮಠ



• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಸಮ ಸಮಾಜ ನಿರ್ಮಾಣಕ್ಕೆ ಬಸವಣ್ಣನವರು ತೋರಿದ ಹಾದಿಯಲ್ಲಿ ಮಡಿವಾಳ ಮಾಚಿದೇವರು ನಡೆದು, ಎಲ್ಲ ಶರಣರ ವಚನ ಸಾಹಿತ್ಯವನ್ನು ಸಂರಕ್ಷಣೆ ಮಾಡಿದರು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವು ನಡೆಯಬೇಕೆಂದು ಸೀತಾ ಸುಬ್ಬರಾಜು ಸ್ಮಾರಕ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯರಾದ ಪರಮೇಶ್ವರ ಸಾಲಿಮಠ ಅವರು ಹೇಳಿದರು. ಫೆ.01ರ ಭಾನುವಾರ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಮಡಿವಾಳ ಮಾಡಿದೇವ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಮಾತನಾಡಿದರು.

ಸಾಮಾಜಿಕ ವ್ಯವಸ್ಥೆಯ ಕೆಳ ಸ್ಥರದಲ್ಲಿದ್ದ ಜಾತಿಗಳಿಗೆ ವಿದ್ಯೆ ಕಲಿಯಲು ಅವಕಾಶ ಇಲ್ಲದ ದಿನಗಳಲ್ಲಿ ಸಾಕಷ್ಟು ವಿಷಯಗಳನ್ನು ಅಧ್ಯಯನ ಮಾಡಿ ಪಾಂಡಿತ್ಯ ಗಳಿಸಿದ್ದವರು ವೀರ ಗಣಾಚಾರಿ ಮಡಿವಾಳ ಮಾಚಿದೇವರು. ಬಸವಣ್ಣನವರು ಮಾಚಿದೇವರನ್ನು ತಂದೆ ಎಂದು ಕರೆದಿದ್ದರು. ಇದು ಮಾಚಿದೇವರ ಮೇಲಿರುವ ಬಸವಣ್ಣನವರ ಗೌರವದ ಪ್ರತೀಕ ಎಂದು ಹೇಳಿದರು.

ಮಡಿವಾಳ ಕುಲದಲ್ಲಿ ಹುಟ್ಟಿದ್ದರೂ ಮಾಚಯ್ಯ ಉತ್ತಮ ಶಿಕ್ಷಣ ಮತ್ತು ಶರಣರ ಸಂಪರ್ಕದಿಂದ ಮಹಾಪುರುಷರಾದರು. ಕಲ್ಯಾಣ ಕ್ರಾಂತಿಯ ಇತಿಹಾಸದಲ್ಲಿ ಮಾಚಯ್ಯ ಶ್ರೇಷ್ಠ ವ್ಯಕ್ತಿಗಳಲ್ಲಿ ಒಬ್ಬರು.

ಜ್ಞಾನಜ್ಯೋತಿಯಿಂದ ಲೋಕವನ್ನು ಬೆಳಗಿಸಿದ ಮಾಚಯ್ಯ ನುಡಿದಂತೆ ನಡೆದ, ನಡೆದಂತೆ ನುಡಿದ ಶರಣರಲ್ಲಿ ಒಬ್ಬರು. ಎಲ್ಲರೂ ಸಮಾನರು, ಎಲ್ಲರಿಗೂ ಸಮಾನ ಅಧಿಕಾರವಿದೆ ಎಂದು ತಿಳಿಸಿ ಸರ್ವರಿಗೂ ಆಧ್ಯಾತ್ಮಿಕ ಉನ್ನತಿ ಪಡೆಯುವಂತೆ ಪ್ರೋತ್ಸಾಹಿಸಿದರು.

# ಕಠಿಣ ಪರಿಶ್ರಮದಿಂದ ಅಧ್ಯಯನ ಮಾಡಿದರೆ ಯಶಸ್ಸು ಸಾಧ್ಯ: ಶಿವದೇವಾನಂದ ಗುರೂಜಿ



• **ಮಲ್ಮನ ನುಡಿ ವಾರ್ತೆ ಮಸ್ಕಿ:**

ಕಠಿಣ ಪರಿಶ್ರಮದಿಂದ ಅಧ್ಯಯನ ಮಾಡಿದರೆ ಯಾವುದೇ ಕ್ಷೇತ್ರದಲ್ಲಾದರೂ ಸಾಧನೆ ಮಾಡಲು ಸಾಧ್ಯ ಸಾಧನೆಗೆ ಪರಿಶ್ರಮವೇ ಹೊರತು ಅನ್ಯ ಮಾರ್ಗವಿಲ್ಲ ಎಂದು ಶಿವದೇವಾನಂದ ಗುರೂಜಿ ಹೇಳಿದರು. ಮಸ್ಕಿ ತಾಲೂಕಿನ ತುಂಗಭದ್ರ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 15ನೇ ವರ್ಷದ ಕಾಲೇಜು ವಾರ್ಷಿಕೋತ್ಸವ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭದ ಉದ್ಘಾಟನೆ ನೆರವೇರಿಸಿ ಮಾತನಾಡಿದರು ಪ್ರಸ್ತುತ ದಿನಗಳಲ್ಲಿ ಅಂಕಗಳ ಜೊತೆಗೆ ಜೀವನದ ಮೌಲ್ಯಗಳು ಬೆಳೆಸಿಕೊಳ್ಳಬೇಕಾದ ಅಗತ್ಯವಿದೆ ಎಂದರು. ಮುಖ್ಯ ಅತಿಥಿ ರಾಯಚೂರು ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಮೌನೇಶ್ ನಾಯಕ್ ಮಸ್ಕಿ ಮಾತನಾಡಿ ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಬಹಳ ಪ್ರಮುಖವಾಗಿರುತ್ತದೆ.

ಆತ್ಮವಿಶ್ವಾಸದಿಂದ ಮುನ್ನಡೆದರೆ ಜೀವನದಲ್ಲಿ ಏನನ್ನಾದರೂ ಸಾಧಿಸಬಹುದು ಗುರಿ ಸಾಧನೆ ಮಾಡಬೇಕಾದರೆ ನಿರಂತರ ಪ್ರಯತ್ನ ಆಗತ್ಯವಾಗಿದೆ ಮಕ್ಕಳ ಬಗ್ಗೆ ಪಾಲಕರು ಬಹಳಷ್ಟು ನಿರೀಕ್ಷಗಳನ್ನ ಇಟ್ಟುಕೊಂಡಿರುತ್ತಾರೆ ಎಂದರು. ಸಂಸ್ಥೆ ಕಾರ್ಯದರ್ಶಿ ರಾಮಣ್ಣ ನಾಯಕ ಅಧ್ಯಕ್ಷೀಯ ನುಡಿಗಳನ್ನಾಡಿದರು. ಕಾಲೇಜು ಪ್ರಾಚಾರ್ಯ ಲಕ್ಷ್ಮಣ ಕರ್ಲಿ ಪ್ರಾಸ್ತಾವಿಕ ನುಡಿ ಹಾಗೂ ವಾರ್ಷಿಕ ವರದಿ ವಾಚನ ಮಾಡಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹನುಮಂತಪ್ಪ ಮುದ್ದಾಪುರ, ಗ್ಯಾರಂಟಿ ಯೋಜನೆ ಅಧ್ಯಕ್ಷ ಮಹೇಬೂಬ ಸಾಬ ಮುದ್ದಾಪುರ ಪಾಲಕ ಪ್ರತಿನಿಧಿಗಳಾದ ಕಟ್ಟಿಬಸಪ್ಪ ಎಲೆಕೂಡ್ಲಿಗಿ, ಮುದಕಪ್ಪ ಕೋಳಬಾಳ ಇದ್ದರು. ವಿದ್ಯಾರ್ಥಿಗಳಾದ ದೀಪಾ, ಯಲ್ಲಮ್ಮ, ಮಮತಾ, ಹುಲಿಗೆಮ್ಮ ಉಪನ್ಯಾಸಕರಾದ ಹುಸೇನಬಾಷ, ಶಂಕ್ರಪ್ಪ ಅನಿಸಿಕೆ ವ್ಯಕ್ತಪಡಿಸಿದರು. ಉಪನ್ಯಾಸಕರಾದ ಸೋಮನಾಥ ವಿಜಯಲಕ್ಷ್ಮಿ, ಅಕ್ಕಮಹಾದೇವಿ ಬಸಲಿಂಗಪ್ಪ, ಶ್ರೀಕಾಂತ ಹಾಗೂ ವಿದ್ಯಾರ್ಥಿಗಳು ಇದ್ದರು.

# ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಚವ್ಹಾಣ ಮನವಿ

• **ಮಲ್ಲಮ್ಮ ನುಡಿ ವಾರ್ತೆ ಔರಾದ:**



ಕನ್ನಡ ಸಾಹಿತ್ಯ ಪರಿಷತ್ತಿನಿಂದ ಫೆ.4 ರಂದು ಔರಾದ ಪಟ್ಟಣದಲ್ಲಿ ನಡೆಯಲಿರುವ 7ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಜನ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಸ್ವಾಗತ ಸಮಿತಿಯ ಅಧ್ಯಕ್ಷರೂ ಆಗಿರುವ ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಹಿರಿಯ ಸಾಹಿತಿ ಡಾ.ಮನ್ಮಥ್ ಡೋಳೆ ಅವರ ಅಧ್ಯಕ್ಷತೆಯಲ್ಲಿ ಪಟ್ಟಣದ ಡಾ.ಗುರುಪಾದಪ್ಪ ನಾಗಮಾರಪಳ್ಳಿ ಕಲ್ಯಾಣ ಮಂಟಪದಲ್ಲಿ ಬಹಳಷ್ಟು ಅದ್ದೂರಿಯಾಗಿ ಕನ್ನಡದ ಜಾತ್ರೆ ನಡೆಯಲಿದೆ. ಚಿಕ್ಕಮಗಳೂರಿನ ಸಾಂಸ್ಕೃತಿಕ ಚಿಂತಕ ಚಟ್ನಳ್ಳಿ ಮಹೇಶ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ರಾಯಚೂರಿನ ಪ್ರಗತಿಪರ ಕೃಷಿ ಚಿಂತಕಿ ಕವಿತಾ ಮಿಶ್ರಾ, ಮೈಸೂರಿನ ಹಿರಿಯ ಸಾಹಿತಿ ಶಶಿಕಲಾ ವಸ್ತ್ರದ್ ಸೇರಿದಂತೆ ಅನೇಕ ಸಾಹಿತಿಗಳು, ಕವಿಗಳು, ವಿಮರ್ಶಕರು, ಚಿಂತಕರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಿ ಕನ್ನಡದ ಇತಿಹಾಸ, ಸಾಹಿತ್ಯ ಪರಂಪರೆ, ಸಮಕಾಲೀನ ಚಿಂತನೆಗಳು ಹಾಗೂ ಭವಿಷ್ಯದ ಸಾಹಿತ್ಯ ದಿಕ್ಕುಗಳ ಕುರಿತ ಚರ್ಚೆ ನಡೆಸುವರು.

**ಔರಾದನಲ್ಲಿ 4ರಂದು ಕನ್ನಡ ಸಾಹಿತ್ಯ ಸಮ್ಮೇಳನ**

ಕನ್ನಡ ಸಾಹಿತ್ಯ ಸಮ್ಮೇಳನವು ಕೇವಲ ಒಂದು ಕಾರ್ಯಕ್ರಮವಲ್ಲ, ಗಡಿ ಭಾಗವಾಗಿರುವ ಔರಾದನಲ್ಲಿ ಕನ್ನಡ ಭಾಷೆ, ಸಾಹಿತ್ಯ ಹಾಗೂ ಸಂಸ್ಕೃತಿಯ ವೈಭವವನ್ನು ಪ್ರತಿಬಿಂಬಿಸುವ ಮಹತ್ವದ ವೇದಿಕೆಯಾಗಿದೆ. ಮರಾಠಿ ಮತ್ತು ತೆಲುಗು ಭಾಷೆಯ ಪ್ರಭಾವ ಹೆಚ್ಚಾಗಿರುವ ಈ ಭಾಗದಲ್ಲಿ ಕನ್ನಡವನ್ನು ಬೆಳೆಸಲು ಸಾಕಷ್ಟು ಪರಿಶ್ರಮ ವಹಿಸಲಾಗಿದೆ. ಜಿಲ್ಲೆಯಲ್ಲಿಯೇ ಮೊದಲ ಕನ್ನಡ ಭವನ ಔರಾದ್‌ನಲ್ಲಿ ನಿರ್ಮಿಸಿದ್ದೇನೆ. ಎಲ್ಲ ಶಾಲಾ-ಕಾಲೇಜುಗಳಿಗೆ ಕನ್ನಡ ಭಾಷೆಯ ಶಿಕ್ಷಕರನ್ನು ತಂದು ಎಲ್ಲ ಕಡೆ ಕನ್ನಡ ಬೋಧಿಸುವ ವ್ಯವಸ್ಥೆ ಮಾಡಲಾಗಿದೆ. 'ಸಾಹಿತಿ ಸಂಗಮ' ಕಾರ್ಯಕ್ರಮದ ಮೂಲಕ ಕನ್ನಡಕ್ಕಾಗಿ ಶ್ರಮಿಸುತ್ತಿರುವ ಸಾಹಿತಿಗಳು ಮತ್ತು ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ಮಾಡುತ್ತಾ ಬಂದಿದ್ದೇನೆ. ಈ ಎಲ್ಲ ಪ್ರಯತ್ನಗಳಿಂದಾಗಿ ಕನ್ನಡ ಭಾಷೆ ಸುಧಾರಿಸಿದೆ ಎಂದಿದ್ದಾರೆ. ಇಲ್ಲಿವರೆಗೆ 6 ಸಮ್ಮೇಳನಗಳನ್ನು ಯಶಸ್ವಿಯಾಗಿ ನಡೆದಿವೆ. ವಲಯ ಸಮ್ಮೇಳನಗಳು ಸೇರಿದಂತೆ ನಿರಂತರವಾಗಿ ಕನ್ನಡ ಕಾರ್ಯಕ್ರಮಗಳು ನಡೆಯುತ್ತಿರುತ್ತವೆ. ಕಸಾಪ ಜಿಲ್ಲಾಧ್ಯಕ್ಷರಾದ ಸುರೇಶ ಚನ್ನಶೆಟ್ಟಿ, ತಾಲ್ಲೂಕು ಅಧ್ಯಕ್ಷ ಬಾಲಾಜಿ ಅಮರವಾಡಿ ನೇತೃತ್ವದಲ್ಲಿ ವಿವಿಧ ಸಮಿತಿಗಳನ್ನು ರಚಿಸಿ ಜವಾಬ್ದಾರಿಗಳನ್ನು ಹಂಚಿಕೆ ಮಾಡಲಾಗಿದೆ. ಕಾರ್ಯಕ್ರಮಕ್ಕಾಗಿ ಎಲ್ಲ ರೀತಿಯ ತಯಾರಿಗಳನ್ನು ಮಾಡಿಕೊಂಡಿದ್ದು ನುಡಿಹಬ್ಬಕ್ಕೆ ಔರಾದ(ಬಿ) ಪಟ್ಟಣದ ಸಜ್ಜಾಗಿದೆ ಎಂದು ಹೇಳಿದ್ದಾರೆ.

ಕನ್ನಡ ನಾಡು-ನುಡಿಯ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಸಾಹಿತ್ಯ ಸಮ್ಮೇಳನಗಳು ಭಾಷೆಯ ಸಂರಕ್ಷಣೆ ಹಾಗೂ ಬೆಳವಣಿಗೆ ಸಹಕಾರಿಯಾಗುತ್ತವೆ. ಈ ದಿಶೆಯಲ್ಲಿ ಔರಾದ(ಬಿ) ಪಟ್ಟಣದಲ್ಲಿ ಫೆ.4 ರಂದು ನಡೆಯುತ್ತಿರುವ ಕನ್ನಡ ಸಾಹಿತ್ಯ ಸಮ್ಮೇಳನವು ಔರಾದನ ಸಂಸ್ಕೃತಿಕ ಶ್ರೀಮಂತಿಕೆಯನ್ನು ವೃದ್ಧಿಸಿ ಕನ್ನಡ ಭಾಷೆಯ ಮೇಲಿನ ಅಭಿಮಾನವನ್ನು ಮತ್ತಷ್ಟು ಗಟ್ಟಿಗೊಳಿಸಲಿದ್ದು, ವಿದ್ಯಾರ್ಥಿಗಳು, ಯುವಕರು, ಶಿಕ್ಷಕರು, ಸಾಹಿತ್ಯಾಸಕ್ತರು ಸೇರಿದಂತೆ ಸಾರ್ವಜನಿಕರೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಕನ್ನಡದ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಶಾಸಕರು ಮನವಿ ಮಾಡಿದ್ದಾರೆ.

## ಭಾರತಮಾತೆಯ ಜಾತ್ರೆಗೆ ಜನಸಾಗರ ಹಿಂದೂ ಸಮ್ಮೇಳನ ಯಶಸ್ವಿ.

# ಮನಸೆಳೆದ ಮಕ್ಕಳ ಸಾಂಸ್ಕೃತಿಕ ನೃತ್ಯ ಕಲಾತಂಡಗಳ ಪ್ರದರ್ಶನ



• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್:**

ಗುರುಮಠಕಲ್: ಹಿಂದೂ ಧರ್ಮದ ಉಳಿವಿಗೆ ಮನೆಯಲ್ಲಿ ಮಕ್ಕಳಿಗೆ ಸಂಸ್ಕಾರ ನೀಡುವುದು ಅಗತ್ಯ ಎಂದು ಮಲ್ಲಿಕಾರ್ಜುನ ಸ್ವಾಮಿ ಜಗದ್ಗಿರಿಬೆಟ್ಟ ಶನಿವಾರ ಹೇಳಿದರು.

ಪಟ್ಟಣದ ಹಿಂದೂ ಸಮ್ಮೇಳನ ಅಂಗವಾಗಿ ನಡೆದ ಭವ್ಯ ಶೋಭಾಯಾತ್ರೆಯಲ್ಲಿ ಭಾರತಮಾತೆ, ಮಹಾತ್ಮ ಬಸವಣ್ಣನವರು, ಧರ್ಮರಕ್ಷಕ ಮಹಾರಾಜರು, ಡಾ. ಅಂಬೇಡ್ಕರ್, ಶರಣರು ಸೇರಿದಂತೆ ವಿವಿಧ ಮಹಾನ್ ವ್ಯಕ್ತಿಗಳ ಭಾವಚಿತ್ರಗಳು ಭಾಗವಹಿಸಿದವು. ಎಲ್ಲಾ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ನಂತರ ಮಲ್ಲಿಕಾರ್ಜುನ ಬಾಳೆಕಾಯಿ ಉಪನ್ಯಾಸ ನೀಡಿ, "ಹಿಂದೂ ಸಮಾಜ 'ವಸುಧೈವ ಕುಟುಂಬಂ' ಎಂಬಂತೆ ಬದುಕುತ್ತದೆ. ಭಾರತ ಶಾಸ್ತ್ರ ಹಾಗೂ ಶಸ್ತ್ರ ರಕ್ಷಣೆಗೆ ಸಿದ್ಧ" ಎಂದರು.

ಸಮಿತಿ ಅಧ್ಯಕ್ಷ ಪನ್ನಾಲಾಲ್ ಪಟೇಲ್, ಬಸಪ್ಪ ಸಂಜನೊಳ, ಶ್ರೀನಿವಾಸ ಯಾದವ ಸೇರಿದಂತೆ ಎಲ್ಲ ಸಮುದಾಯದ ಮುಖಂಡರು, ಯುವಕರು ಸಂಖ್ಯೆಯಲ್ಲಿ ಭಾಗವಹಿಸಿದರು.




• **ಮಲ್ಲಮ್ಮ ನುಡಿ ವಾರ್ತೆ ಕಾರವಾರ:**

**ಹುತಾತ್ಮರ ದಿನಾಚರಣೆ ಅಂಗವಾಗಿ ಶುಕ್ರವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ , ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಸ್ಮರಣಾರ್ಥ ಮೌನಾಚರಣೆ ಸಲ್ಲಿಸಲಾಯಿತು.ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ , ಜಿ.ಪಂ. ಉಪ ಕಾರ್ಯದರ್ಶಿ ಅಲ್ಲಾ ಭಕ್ಷ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.**

# ಪುಸ್ತಕ ಓದುವ ಸಂಸ್ಕೃತಿ ಹೆಚ್ಚಾಗಲಿ: ಗಣಪತಿ ಬೋಚರೆ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**




ಪುಸ್ತಕ ಸಂಸ್ಕೃತಿ ಹಾಗೂ ಓದುವಿಕೆ ನಮ್ಮ ಬದುಕಿನ ಭಾಗಗಳು. ಪುಸ್ತಕಗಳು ನಮ್ಮ ಪರಂಪರೆ, ಭಾರತೀಯ ಸಂಸ್ಕೃತಿ, ಇತಿಹಾಸ, ಬದುಕಿನ ಕಲೆ ಮತ್ತು ಮೌಲ್ಯಗಳನ್ನು ಪುಸ್ತಕ ತಿಳಿಸುತ್ತದೆ ಎಂದು ಹಿರಿಯ ಪತ್ರಕರ್ತ ಗಣಪತಿ ಬೋಚರೆ ಹೇಳಿದರು.

ಕನ್ನಡ ಪುಸ್ತಕ ಪ್ರಾಧಿಕಾರ ಬೆಂಗಳೂರು ಹಾಗೂ ಮನೆಗೊಂದು ಗ್ರಂಥಾಲಯ ಬೀದರ್ ಜಿಲ್ಲಾ ಜಾಗೃತ ಸಮಿತಿ ಸಹಯೋಗದಲ್ಲಿ ಭಾಲ್ಕಿ ಪಟ್ಟಣದ ಸಾಹಿತಿ ಡಾ.ಮಕ್ತುಂಬಿ ಎಂ.ಅವರ ಮನೆಯಲ್ಲಿ ಆಯೋಜಿಸಿದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಎರಡು ದಶಕಗಳ ಹಿಂದೆ ಗ್ರಂಥಾಲಯಗಳು ಓದುಗರಿಂದ ತುಂಬಿ ತುಳುಕುತ್ತಿದ್ದವು. ಇತ್ತೀಚೆಗೆ ಅತಿಯಾದ ಮೊಬೈಲ್ ಬಳಕೆಯ ಗೀಳಿನಿಂದಾಗಿ ಜನರಲ್ಲಿ ಪುಸ್ತಕ ಓದುವ ಹವ್ಯಾಸ ಕಡಿಮೆಯಾಗಿದೆ. ಜ್ಞಾನದ ನಿರಂತರ ಧಾರೆ ಪುಸ್ತಕ ರೂಪದಲ್ಲಿ ಸಂಗ್ರಹವಾಗಿರುತ್ತದೆ. ಪುಸ್ತಕ ಓದುವ ಸಂಸ್ಕೃತಿ ಹೆಚ್ಚಾಗಬೇಕಿದೆ ಎಂದರು.

ಮನೆಗೊಂದು ಗ್ರಂಥಾಲಯ ಜಿಲ್ಲಾ ಜಾಗೃತ ಸಮಿತಿ ಸಂಚಾಲಕ ಬಾಲಾಜಿ ಕುಂಬಾರ ಮಾತನಾಡಿ, ಓದುಗರನ್ನು ಮತ್ತೆ ಪುಸ್ತಕಗಳತ್ತ ಕರೆತರಲು, ಓದುವ ಅಭ್ಯಾಸ ಉತ್ತೇಜಿಸಬೇಕೆಂಬ ಮಹತ್ವಾಕಾಂಕ್ಷಿ ಉದ್ದೇಶದಿಂದ ಮನೆಗೊಂದು ಗ್ರಂಥಾಲಯ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಯಾವುದೇ ಕಾಲದ ಸಂಸ್ಕೃತಿ, ಜನಜೀವನ ಅರ್ಥಮಾಡಿಕೊಳ್ಳಲು ನಮಗೆ ಅಧಿಕೃತವಾಗಿ ಸಿಗುವ ಆಕರಗಳೆಂದರೆ ಪುಸ್ತಕಗಳು. ಪುಸ್ತಕಗಳು ಆಯಾ ಕಾಲದ ಸಂಸ್ಕೃತಿಯ ಜೀವಂತ ಪ್ರತೀಕ. ಪುಸ್ತಕ ನಾಗರಿಕತೆ-ಯ ತಳಹದಿ, ಜ್ಞಾನಾರ್ಜನೆಯ ಮಾಧ್ಯಮದ ಒಂದು ಪ್ರಮುಖ ಸಾಧನ. ಅನುಭವ, ಜ್ಞಾನದ ಅಭಿವ್ಯಕ್ತಿ ರೂಪವಾದ ಪುಸ್ತಕ ಸಂಸ್ಕೃತಿಯ ನಿರಂತರ ಪ್ರವಾಹಕ್ಕೆ ಸೇತುವೆಯಾಗಿವೆ ಎಂದು ಹೇಳಿದರು.

ಜಿಲ್ಲಾ ಜಾಗೃತ ಸಮಿತಿ ಸದಸ್ಯರಾದ ಚೇತನಾ ಚನ್ನಶೆಟ್ಟಿ ಅವರು ಮಾತನಾಡಿ, ಪುಸ್ತಕ ಓದುವುದೆಂದರೆ ಅರಿವನ್ನು ವಿಸ್ತರಿಸಿಕೊಳ್ಳುವುದು ಎಂದರ್ಥ. ಯುವ ಜನಾಂಗ ಸೇರಿ ಎಲ್ಲ ವಯೋಮಾನದವರು ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚು ಸಕ್ರಿಯವಾಗಿದ್ದು, ಪುಸ್ತಕ ಓದುವ ಸಂಸ್ಕೃತಿಯನ್ನು ಮರೆತು ಸಮಾಜಮುಖಿ ಸಂವೇದನೆ ಕಳೆದುಕೊಳ್ಳುವಂತಾಗಿದೆ. ನಾವೆಲ್ಲರೂ ಮೊಬೈಲ್ ಬಿಟ್ಟು ಮತ್ತೆ ಕೈಯಲ್ಲಿ ಪುಸ್ತಕ ಹಿಡಿಯುವುದು ಅಗತ್ಯವಾಗಿದೆ ಎಂದರು.

ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ ಡಾ.ಮಕ್ತುಂಬಿ ಎಂ. ಅವರು ಮಾತನಾಡಿ, ಪುಸ್ತಕ ಓದುವ ಹವ್ಯಾಸ ಎಲ್ಲರೂ ಬೆಳಿಸಿಕೊಳ್ಳಬೇಕಾಗಿದೆ. ಓದು-ಬರಹದಿಂದ ಉತ್ತಮ ಸಂಸ್ಕಾರ ಬೆಳೆಸಿಕೊಳ್ಳಲು ಸಾಧ್ಯ. ಮನೆಗೊಂದು ಗ್ರಂಥಾಲಯ ಮೂಲಕ ಮನೆ-ಮನೆಗೆ ಪುಸ್ತಕ ಸಂಸ್ಕೃತಿ ಜಾಗೃತಿ ಮೂಡಿಸುವ ಪ್ರಾಧಿಕಾರದ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದರು.

ಭಾಲ್ಕಿ ಗ್ರಂಥಾಲಕ ಸಹಾಯಕ ನಿಂಗಪ್ಪ ಗಚ್ಚಿನಮನಿ, ವಚನ ಸಾಹಿತ್ಯ ಪರಿಷತ್ತಿನ ತಾಲೂಕಾಧ್ಯಕ್ಷ ಗುಂಡಪ್ಪ ಸಂಗಮಕರ್, ವಕೀಲರಾದ ಅಮೂಲ್ ತಳವಾಡಕರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಪಿಡಿಒ ಯೋಗೇಶ ಹಿರೇಮಠ, ಯುವ ಚಿಂತಕರಾದ ಉಮಾಕಾಂತ ವಿಳಾಸಪುರೆ, ಸೋಹೇಲ್, ಪೃಥ್ವಿ, ಶಬನಮ್ ಮತ್ತಿತರರು ಉಪಸ್ಥಿತರಿದ್ದರು.

# ಗ್ರಾಹಕರ ವ್ಯಾಜ್ಯಗಳ ಇತ್ಯರ್ಥದಲ್ಲಿ ಕರ್ನಾಟಕ 2ನೇ ಸ್ಥಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ರಾಜ್ಯದಲ್ಲಿ ಗ್ರಾಹಕರ ಹಕ್ಕುಗಳಿಗೆ ಚ್ಯುತಿಯಾದ ಪ್ರಕರಣಗಳ ಇತ್ಯರ್ಥದಲ್ಲಿ ಕರ್ನಾಟಕ ರಾಜ್ಯವು ದೇಶದಲ್ಲಿಯೇ ಎರಡನೇ ಸ್ಥಾನ ಪಡೆದುಕೊಂಡಿದೆ ಎಂದು ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ಟಿ.ಜಿ ಶಿವಶಂಕರೇಗೌಡ ಅವರು ಹೇಳಿದರು.

ಶನಿವಾರದಂದು ಜಿಲ್ಲಾಡಳಿತ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಮತ್ತು ಜಿಲ್ಲಾ ನ್ಯಾಯವಾದಿಗಳ ಸಂಘ ಇವರ ಸಂಯುಕ್ತಾಶ್ರಯದಲ್ಲಿ ನಗರದ ರೈಲ್ವೇ ನಿಲ್ದಾಣ ಎದುರುಗಡೆಯ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿನ ಬಳ್ಳಾರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಧ್ಯಸ್ಥಿಕೆ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಗ್ರಾಹಕರ ಕುಂದುಕೊರತೆಗಳನ್ನು ನಿಗದಿತ ಅವಧಿಯೊಳಗೆ ಮತ್ತು ಸಾರಾಂಶ ಕಾರ್ಯವಿಧಾನವನ್ನು ಅನುಸರಿಸುವ ಮೂಲಕ ಉಚಿತವಾಗಿ ಪರಿಹಾರ ಒದಗಿಸುವುದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಗಳ ಮುಖ್ಯ ಉದ್ದೇಶ ಮತ್ತು ಕರ್ತವ್ಯವಾಗಿದೆ ಎಂದು ತಿಳಿಸಿದರು.

ಭಾರತ ದೇಶವು ಜಾಗತೀಕರಣ ಹೊಂದುತ್ತಿದೆ. ಅಭಿವೃದ್ಧಿಯತ್ತ ಮಾರುಕಟ್ಟೆ ವ್ಯವಸ್ಥೆಯಲ್ಲಿ ಗ್ರಾಹಕರ ಹಕ್ಕುಗಳಿಗೆ ಚ್ಯುತಿಯಾಗದಂತೆ ಅವರ ಹಿತಾಸಕ್ತಿ ಕಾಪಾಡಲು ದೇಶದಲ್ಲಿ ರಾಷ್ಟ್ರೀಯ ಗ್ರಾಹಕ ಸಂರಕ್ಷಣಾ ಕಾಯ್ದೆ 1986 ಜಾರಿಗೆ ತರಲಾಯಿತು. ಸಾರ್ವಜನಿಕರು ಗ್ರಾಹಕ ಕಾಯ್ದೆ, ಹಕ್ಕುಗಳ ಕುರಿತು ಜಾಗೃತಿ ಹೊಂದಬೇಕು ಎಂದರು.

ರಾಜ್ಯದಲ್ಲಿ 34 ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಗಳಿದ್ದು, ಗ್ರಾಹಕರ ವ್ಯಾಜ್ಯಗಳ ತ್ವರಿತ ಇತ್ಯರ್ಥಕ್ಕಾಗಿ ಹಂತ-ಹಂತವಾಗಿ ಎಲ್ಲಾ ಜಿಲ್ಲೆಗಳಲ್ಲೂ ಮಧ್ಯಸ್ಥಿಕೆ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ತಿಳಿಸಿದರು.

# ಅರ್ಹರಿಗೆ ಗ್ಯಾರಂಟಿ ಯೋಜನೆಗಳ ಸೌಲಭ್ಯ ತಲುಪಿಸಿ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸಿರುವ ಮುಖ್ಯ ಉದ್ದೇಶವೇ ಅವಕಾಶ ಮತ್ತು ಆದಾಯದಿಂದ ವಂಚಿತರಾದ ಅರ್ಹ ಫಲಾನುಭವಿಗಳನ್ನು ಗುರುತಿಸಿ ಅವರಿಗೆ ಸೌಲಭ್ಯಗಳನ್ನು ಒದಗಿಸುವುದು ಹಾಗೂ ಅರ್ಹರಿಗೆ ಸೌಲಭ್ಯ ಸಿಕ್ಕಿದ್ದನ್ನು ಖಾತ್ರಿ ಪಡಿಸಿಕೊಳ್ಳುವುದಾಗಿದ್ದು ಈ ನಿಟ್ಟಿನಲ್ಲಿ ಅರ್ಹರಿಗೆ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳನ್ನು ತಲುಪಿಸುವ ಕಾರ್ಯ ಮಾಡಬೇಕಾಗಿದೆ ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅನೀಲ ದಡ್ಡಿ ಹೇಳಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರಕಾರದ ಐದು ಯೋಜನೆಗಳಿಂದ ಪ್ರತಿ ಕುಟುಂಬಗಳಿಗೆ ನೇರವಾಗಿ ಆರ್ಥಿಕ ಲಾಭ ದೊರೆಯುತ್ತದೆ. ಇದನ್ನು ಇನ್ನೂ ಪರಿಣಾಮಕಾರಿಯಾಗಿ ಮಾಡಬೇಕಾಗಿರುವದರಿಂದ ತಾಲೂಕು ಮಟ್ಟದಲ್ಲಿ ಶಿಬಿರಗಳನ್ನು ಆಯೋಜಿಸಿ, ಶಿಬಿರಗಳಿಗೆ ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರ ಸಹಾಯ ಪಡೆದಾಗ ಪ್ರತಿ ಗ್ರಾಮದ ಪ್ರತಿ ಮನೆಯನ್ನು ತಲುಪಲು ಸಾಧ್ಯವಾಗುತ್ತದೆ. ಶಿಬಿರಗಳಲ್ಲಿ ಹೆಚ್ಚಿನ ಸಂಖ್ಯೆಯ ಫಲಾನುಭವಿಗಳು ಭಾಗವಹಿಸುವಂತೆ ಮಾಡಿದಾಗ ಯೋಜನೆಗಳ ಮಾಹಿತಿ ದೊರೆಯುವದರೊಂದಿಗೆ ಪ್ರಚಾರ ಕೂಡ ದೊರೆಯುತ್ತದೆ. ಒಟ್ಟಿನಲ್ಲಿ ಎಲ್ಲರೂ ಸೇರಿ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿ ಹಾದಿಯತ್ತ ಸಾಗುವಂತೆ ಮಾಡಬೇಕು ಎಂದರು. ಬಸ್ ಗಳಲ್ಲಿ ಚಾಲಕರು ಮತ್ತು ನಿರ್ವಾಹಕರು ಸರಕಾರದ ಬಗ್ಗೆ ನಕಾರಾತ್ಮಕವಾಗಿ ಮಾತನಾಡದಂತೆ ಅಧಿಕಾರಿಗಳು ಶಿಸ್ತು ಕ್ರಮ ಕೈಗೊಳ್ಳಬೇಕು ಅಲ್ಲದೇ ಫಲಾನುಭವಿಗಳು ರೇಶನ್ ಅಕ್ಕಿಯನ್ನು ಮಾರಾಟ ಮಾಡದಂತೆ ಮನ ಪರಿವರ್ತಿಸುವ ಕೆಲಸ ಮಾಡಿ ಆಗ ಈ ಯೋಜನೆಗಳಿಗೆ ಹೆಚ್ಚಿನ ಮಹತ್ವ ಬರುತ್ತದೆ ಎಂದು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಮಾತನಾಡಿ, ಈಗಾಗಲೇ ವಿವಿಧೆಡೆ ಶಿಬಿರಗಳನ್ನು ಆಯೋಜಿಸಲಾಗಿದ್ದು ಇನ್ನೂ ಹೆಚ್ಚಿನ ಮಟ್ಟದಲ್ಲಿ ಶಿಸ್ತುಬದ್ಧವಾಗಿ ಮಾಡಬೇಕಾಗಿದೆ. ಎಲ್ಲಾ ಐದೂ ಯೋಜನೆಗಳ ಬಗ್ಗೆ ಪ್ರತ್ಯೇಕವಾಗಿ ಮಾಡುವದರಿಂದ ಪರಿಣಾಮಕಾರಿಯಾದ ಫಲಿತಾಂಶವಿರುತ್ತದೆ. ಆಯಾ ತಾಲೂಕುಗಳಲ್ಲಿ ಶಿಬಿರಗಳನ್ನು ಆಯೋಜಿಸಿರುವ ಬಗ್ಗೆ ದಾಖಲೆಗಳನ್ನು ನೀಡುವದರೊಂದಿಗೆ ಅದರ ನಡುವಳಿಗಳನ್ನು ಸಹ ಸಲ್ಲಿಸಬೇಕು ಎಂದು ಸೂಚಿಸಿದರು. ಸಭೆಯಲ್ಲಿ ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕನವಾಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪ್ರಭಾಕರ ಕವಿತಾಳ, ಜಿಲ್ಲಾ ಉದ್ಯೋಗಾಧಿಕಾರಿ ಗುರುಪಾದಯ್ಯ ಹಿರೇಮಠ , ಡಿಟಿ ಓ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರು ಇದ್ದರು.



**ಭಾಲ್ಕಿ . ಷ.ಬ್ರ. ಶ್ರೀ ರಾಜೇಶ್ವರ ಶಿವಾಚಾರ್ಯರ ದಿವ್ಯ ಸಾನಿಧ್ಯದಲ್ಲಿ ಮೇಹಕರ ಗ್ರಾಮದ ಪ್ರಸಿದ್ಧ ಶ್ರೀ ಗುರು ವೀರೂಪಾಕ್ಷೇಶ್ವರ ಜಾತ್ರಾ ಮಹೋತ್ಸವದ 10ನೇ ದಿನದ ಮಹಾಪೂಜೆಯಲ್ಲಿ ಭಾರತ ಪಬ್ಲಿಕ್ ಸ್ಕೂಲ್ ಅಧ್ಯಕ್ಷರಾದ ಪ್ರವೀಣ ಹಣಮಶೆಟ್ಟಿ ಅವರು ಭಾಗವಹಿಸಿ ವಿಶೇಷ ಪೂಜೆ ಸಲ್ಲಿಸಿ ದೇವರ ದರ್ಶನ, ಆಶೀರ್ವಾದ ಪಡೆದರು.**

# ಸಂಭ್ರಮದ ಬಳ್ಳಾರಿ ತೇರು

ಬಳ್ಳಾರಿ : ಬಳ್ಳಾರಿ: 'ಬಳ್ಳಾರಿ ತೇರು' ಎಂದೇ ಖ್ಯಾತವಾಗಿರುವ ಇಲ್ಲಿನ ಕೋಟೆ ಮಲ್ಲೇಶ್ವರ ರಥೋತ್ಸವವು ಭಾನು ವಾರ ಸಂಜೆ ಸಾವಿರಾರು ಭಕ್ತರ ಶ್ರದ್ಧೆ ಮತ್ತು ಹರ್ಷೋದ್ಗಾರಗಳ ನಡುವೆ ವಿಜೃಂಭಣೆಯಿಂದ ನಡೆಯಿತು, ನಗರದ ತೇರು ಬಜಾರು ರಸ್ತೆಯಲ್ಲಿರುವ ಸಣ್ಣ ಮಲ್ಲೇಶ್ವರ ಗುಡಿ ಮುಂದೆ ಬೆಳಿಗ್ಗೆಯಿಂದಲೇ ರಥಕ್ಕೆ ವಿಶೇಷ ಪೂಜೆ ನಡೆಯಿತು.

ಬೆಳಿಗ್ಗೆ 10.15ರ ವೇಳೆಗೆ ಭಕ್ತರು ಮಡಿ ತೇರನ್ನು ಎಳೆದರು. ಸಂಜೆ 4.15ರ ವೇಳೆಗೆ, ಇನ್ನೂ ಚುರುಕು ಮುಟ್ಟಿಸುವಂತಿದ್ದ ಬಿಸಿಲ ನಡುವೆಯೇ ಉತ್ಸವಕ್ಕೆ ಚಾಲನೆ ದೊರಕಿತು. ನಗರದ ಭಕ್ತರೊಂದಿಗೆ ಸುತ್ತಮುತ್ತಲಿನ ಹತ್ತಾರು ಗ್ರಾಮಗಳ ಸಾವಿರಾರು ಭಕ್ತರ ಸಂಭ್ರಮದ ನಡುವೆ ತೇರು ಸಾಗಿತು.

ಬ್ರೂಸ್‌ಪೇಟೆ ಠಾಣೆ ಮುಂಭಾಗ ದಿಂದ ಮುಂದುವರಿದ ತೇರು ದೊಡ್ಡ ಮಾರುಕಟ್ಟೆ, ನೀಲಕಂಠೇಶ್ವರ ಗುಡಿ ಮೂಲಕ ಕಣೇಕಲ್ಲು ಬಸ್ ನಿಲ್ದಾಣ ಸಮೀಪದವರೆಗೂ ಸಾಗಿ ಹಿಂದಿರುಗಿತು. ಬಜಾರು ರಸ್ತೆಯ ಅಕ್ಕ ಪಕ್ಕದಲ್ಲಿ, ಕಟ್ಟಡಗಳ ಮೇಲ್ಭಾಗದಲ್ಲಿ ನಿಂತು ಭಕ್ತರು ತೇರಿಗೆ ಹೂವು ಹಣ್ಣು ಎಸೆದು ಹರಕೆ ತೀರಿಸಿದರು.ತಳ್ಳಾಟ: ತೇರಿನ ಸುತ್ತಮುತ್ತ ಹೆಚ್ಚಿನ ಭಕ್ತರು ಸಾಗುತ್ತಿದ್ದ ಪರಿಣಾಮವಾಗಿ ತಳ್ಳಾಟ ನಿಯಂತ್ರಿಸಲು ಪೊಲೀಸರು ಹರಸಾಹಸ ಮಾಡುತ್ತಿದ್ದರು. ತೇರಿಗೆ ಎಸೆದ ಬಾಳೆಹಣ್ಣುಗಳು ಬಿದ್ದು ರಸ್ತೆಯಲ್ಲಿ ಜಾರಿಕೆ ಉಂಟಾಗಿದ್ದರಿಂದ ಕೆಲವು ಭಕ್ತರು ಬಿದ್ದ ಘಟನೆಯೂ ನಡೆಯಿತು.ತೇರು ಬಜಾರಿಗೆ ಸಂಪರ್ಕ ಕಲ್ಪಿಸುವ ಎಲ್ಲ ರಸ್ತೆಗಳಲ್ಲೂ ಜನ ಮತ್ತು ವಾಹನ ದಟ್ಟಣೆ ಹೆಚ್ಚಾಗಿತ್ತು.



# ಪ್ರಾಮಾಣಿಕ ಸೇವೆಗೆ ಶಾಶ್ವತ ಗೌರವ: ಅಂಕುಶ ಢೋಲೆ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಸರ್ಕಾರದ ಇಲಾಖೆಯಲ್ಲಿ ದಕ್ಷತೆ, ಪ್ರಾಮಾಣಿಕತೆ ಮತ್ತು ನಿಯತ್ತಿನಿಂದ ಸೇವೆ ಸಲ್ಲಿಸುವವರಿಗೆ ಸಮಾಜದಲ್ಲಿ ಶಾಶ್ವತ ಗೌರವ ದೊರೆ-ಯುತ್ತದೆ ಎಂದು ಶಾಂತಿ ವರ್ಧಕ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಅಂಕುಶ ಢೋಲೆ ಅಭಿಪ್ರಾಯಪಟ್ಟರು. ಪಟ್ಟಣದ ಅಕ್ಕಮಹಾದೇವಿ ಕನ್ಯೆ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಧನರಾಜ ಮೆಂಗಾ ಅವರು ತಮ್ಮ ವೃತ್ತಿ ಜೀವನದಲ್ಲಿ ಸದಾ ಸಕ್ರೀಯವಾಗಿ ಕರ್ತವ್ಯ ನಿರ್ವಹಿಸಿದ್ದಾರೆ. ಅವರ ನಿವೃತ್ತಿ ಜೀವನವು ಸುಖ, ಶಾಂತಿ ನೆಮ್ಮದಿಯಿಂದ ಸಾಗಲಿ ಎಂದು ಶುಭ ಹಾರೈಸಿದರು. ಹಿರಿ ಯ ಪತ್ರಕರ್ತ ಅಶೋಕ ರಾಜೋಳೆ ಮಾತನಾಡಿ, ಯಾವತ್ತು ದೇವರು, ಧರ್ಮ ಮತ್ತು ಗುರುಗಳ ಮೇಲಿನ ನಂಬಿಕೆ ಕಳೆದುಕೊಳ್ಳಬಾರದು .ಸಹನೆಯಿಂದ ಜೀವನ ಸಾಗಿಸಿದರೆ ನಿರ್ದಿಷ್ಟ ಗುರಿ ತಲುಪಬಹುದು ಎಂದರು.

ನಿವೃತ್ತ ಪ್ರಾಚಾರ್ಯ ಸಾವಿತ್ರಿ ಮರೂರಕರ್ ಮಾತನಾಡಿ ಮಹಿಳಾ ಕಾಲೇಜಿನಲ್ಲಿ ನಡೆಯುವ ಪರೀಕ್ಷೆ, ಆಟೋಟಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಯಶಸ್ವಿಯಾಗುವಲ್ಲಿ ವಯೋನಿವೃತ್ತ ಧನರಾಜ ಮೆಂಗಾ ಸೇವೆ ಅನುಪಮವಾಗಿದೆ ಎಂದರು. ಪ್ರಾಸ್ತಾವಿಕ ಮಾತನಾಡಿದ ಪ್ರಾಚಾರ್ಯ ಭೀಮರಾವ ಗಿರಿ, ಎಸ್.ವ್ಹಿ.ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಸಚಿವ ಈಶ್ವರ ಖಂಡ್ರೆ ಅವರ ಮಾರ್ಗದರ್ಶನದಲ್ಲಿ ಅಕ್ಕಮಹಾದೇವಿ ಕನ್ಯೆ ಪದವಿ ಪೂರ್ವ ಕಾಲೇಜಿನಲ್ಲಿ ಗ್ರಾಮೀಣ ಭಾಗದ ಬಡ ಕುಟುಂಬದ ವಿದ್ಯಾರ್ಥಿನಿಯರಿಗೆ ಅತ್ಯಂತ ಕಡಿಮೆ ಶುಲ್ಕದಲ್ಲಿ ಸಂಸ್ಕಾರಭರಿತ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ ಎಂದು ಹೇಳಿ, ಧನರಾಜ ಮೆಂಗಾ ಅವರು 40 ವರ್ಷ ಯಾವುದೇ ಕಪ್ಪು ಚುಕ್ಕೆಯಿಲ್ಲದೆ ಸೇವೆ ಸಲ್ಲಿಸಿದ್ದು ಶ್ಲಾಘನೀಯ ಎಂದರು. ನಿವೃತ್ತ ಕೃಷಿ ಅಧಿಕಾರಿ ರಾಜಶೇಖರ ಚಿದ್ರಿ ಮಾತನಾಡಿ, ಉತ್ತಮ ಕೆಲಸ ಮಾಡುವವರಿಗೆ ಎಲ್ಲ ಕಡೆ ಗುರುತಿಸಲಾಗುತ್ತದೆ ಎಂದರು. ವಿಶೇಷ ಸನ್ಮಾನ: ವಯೋನಿವೃತ ಕಛೇರಿ ಸಹಾಯಕ ಧನರಾಜ ಮೆಂಗಾ ಪತ್ನಿ ರೇವತಾ ಅವರಿಗೆ ಹಾಗೂ ನಿವೃತ್ತ ಪ್ರಾಚಾರ್ಯರಾದ ಪಂಡಿತ ಉಮರಾಣಿ, ಸಾವಿತ್ರಿ ಮರೂರಕರ್, ಶಿವಶರಣಪ್ಪ ಟಪಗೆ, ಅಂಕುಶ ಡೋಲೆ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಎಸ್.ವ್ಹಿ. ಸಂಸ್ಥೆಯ ಆಡಳಿತಾಧಿಕಾರಿ ಡಾ.ಕಮಲಾ ಸಿರ್ಸೆ, ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಓಂಕಾರ ಸೂರ್ಯವಂಶಿ, ಐಟಿಐ ಕಾಲೇಜು ಪ್ರಿನ್ಸಿಪಾಲ್ ಸಂಗಪ್ಪ ಹುಲಸೂರೆ ಸೇರಿದಂತೆ ಕಾಲೇಜು ಸಿಬ್ಬಂದಿ, ವಿದ್ಯಾರ್ಥಿನೀಯರು ಉಪಸ್ಥಿತರಿದ್ದರು. ಪ್ರೊ. ದೇವೇಂದ್ರ ಸ್ವಾಮಿ ಸ್ವಾಗತಿಸಿದರು. ಪ್ರೊ.ಲಾವಣ್ಯ ಶಿವಸ್ವಾಮಿ ನಿರೂಪಿಸಿದರು. ಪ್ರೊ. ನಿಲೇಶ ರಾಜೂರೆ ವಂದಿಸಿದರು.

> ಎಸ್.ವ್ಹಿ.ಸಂಸ್ಥೆಯ ಅಧ್ಯಕ್ಷ ದಿ.ಡಾ.ಭೀಮಣ್ಣ ಖಂಡ್ರೆಯವರು ಆ ಕಾಲದಲ್ಲಿ ಶಿಕ್ಷಣ ಸಂಸ್ಥೆ ತೆರೆದು ಸಾವಿರಾರು ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಿ ಅವರ ಕುಟುಂಬಕ್ಕೆ ಆಶ್ರಯದಾತರಾಗಿದ್ದಾರೆ.
>
> **ಅಂಕುಶ ಢೋಲೆ ಆಡಳಿತಾಧಿಕಾರಿ ಎಸ್.ವ್ಹಿ.ಶಿಕ್ಷಣ ಸಂಸ್ಥೆ ಭಾಲ್ಕಿ.**

## ಧನರಾಜ ಮೆಂಗಾವರಿಗೆ ಹೃದಯಸ್ಪರ್ಶಿ ಬೀಳ್ಕೊಡುಗೆ

> 'ವಯೋನಿವೃತ ಧನರಾಜ ಮೆಂಗಾ ಅವರು ತಮ್ಮ ಕರ್ತವ್ಯವನ್ನು ಅತ್ಯಂತ ನಿಷ್ಠೆ ಮತ್ತು ದಕ್ಷತೆಯಿಂದ ನಿರ್ವಹಿಸಿ ಇತರರಿಗೆ ಮಾದರಿಯಾಗಿದ್ದಾರೆ. ಮಹಿಳೆಯರ ಸರ್ವತೋಮುಖ ಬೆಳವಣಿಗೆಗಾಗಿ ಡಾ.ಚನ್ನಬಸವ ಪಟ್ಟದ್ದೇವರು ಮತ್ತು ಮಾಜಿ ಮಂತ್ರಿ ದಿ.ಡಾ.ಭೀಮಣ್ಣ ಖಂಡ್ರೆಯವರು ಅಕ್ಕಮಹಾದೇವಿ ಕನ್ಯೆ ಪದವಿ ಪೂರ್ವ ಕಾಲೇಜು ತೆರೆದು ಮಹಿಳಾ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿ ಮಾಡಿದ್ದಾರೆ.
>
> **ಸಾವಿತ್ರಿ ಮರೂರಕರ್ ನಿವೃತ್ತ ಪ್ರಾಂಶುಪಾಲೆ ಭಾಲ್ಕಿ.**

# ಶಿವಶರಣರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳೋಣ: ಪಿ.ಗಾದೆಪ್ಪ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

12 ನೇ ಶತಮಾನ ಕಾಲದ ಎಲ್ಲಾ ಶಿವಶರಣರ ಕಾಯಕ ನಿಷ್ಠೆಗಳು ಮಾದರಿಯಾಗಿದ್ದು,ಅಂತಹ ಶರಣರ ಆದರ್ಶ ಗುಣಗಳನ್ನು ನಾವೆಲ್ಲರೂ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಚನ ಸಾಹಿತ್ಯ ಕಾಲದಲ್ಲಿ ಸರ್ವರಿಗೂ ಸಮಪಾಲು–ಸಮಬಾಳು ಒದಗಿಸಲು ಅನೇಕ ಶರಣರು ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು. ಅಂತಹವರ ವಿಚಾರಧಾರೆಗಳನ್ನು ಇಂದಿನ ಪೀಳಿಗೆಗೆ ಮನದಟ್ಟು ಮಾಡಲು ನಮ್ಮ ಸರ್ಕಾರ ಜಯಂತಿ ಕಾರ್ಯಕ್ರಮಗಳನ್ನು ಆಚರಿಸುತ್ತಿದೆ ಎಂದು ತಿಳಿಸಿದರು. ಜಯಂತಿ ಕಾರ್ಯಕ್ರಮ ಆಚರಣೆಗೆ ಹೆಚ್ಚಿನ ಅನುದಾನಕ್ಕಾಗಿ ಮಹಾನಗರ ಪಾಲಿಕೆಯಿಂದ ವಿಶೇಷ ಅನುದಾನ ನೀಡಲಾಗುವುದು. ಈ ಕುರಿತು ಸಂಸದರ, ಶಾಸಕರ, ಪಾಲಿಕೆ ಸದಸ್ಯರ ಜೊತೆಗೂಡಿ ಸಾಮಾನ್ಯ ಸಭೆಯಲ್ಲಿ ಚರ್ಚಿಸಲಾಗುವುದು ಎಂದರು. ಪ್ರತಿಯೊಂದು ಸಮುದಾಯಗಳ ಅಭಿವೃದ್ಧಿಗೆ ನಮ್ಮ ಸರ್ಕಾರ ಸದಾ ಬದ್ಧವಾಗಿದೆ. ಸಮುದಾಯಗಳು ಒಗ್ಗಟ್ಟಾಗಿ ಶಿಕ್ಷಣ ಪಡೆಯುವುದರ ಮೂಲಕ ಮುಖ್ಯವಾಹಿನಿಗೆ ಬರಬೇಕು ಎಂದು ಕಿವಿಮಾತು ಹೇಳಿದರು. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಭಾರತ ಹುಣ್ಣಿಮೆಯ ದಿನದಂದೇ ಮಡಿವಾಳ ಮಾಚಿದೇವರ ಜಯಂತಿ ಆಚರಿಸುತ್ತಿಸುವುದು ನಮ್ಮೆಲ್ಲರ ಸೌಭಾಗ್ಯ. ಜಾತಿ, ಮತ, ಲಿಂಗ ಭೇದವನ್ನು ತಿರಸ್ಕರಿಸಿದ ಬಸವಣ್ಣನವರ ಸಾಮಾಜಿಕ ಕ್ರಾಂತಿಯಲ್ಲಿ ತೊಡಗಿಸಿಕೊಂಡಿದ್ದವರು ಮಡಿವಾಳ ಮಾಚಿದೇವರು ಒಬ್ಬರಾಗಿದ್ದರು ಎಂದು ಹೇಳಿದರು.

12ನೇ ಶತಮಾನದಲ್ಲಿ ದುರ್ಬಲರ ಶೋಷಣೆ, ಜಾತೀಯತೆ, ಮೇಲು–ಕೀಳು ತಾರತಮ್ಯ, ಅಸ್ಪೃಶ್ಯತೆ, ಮೂಢನಂಬಿಕೆಗಳ ಸೃಷ್ಟಿ, ಶಿಕ್ಷಣದಲ್ಲಿ ಅವಕಾಶ ವಂಚನೆ ಹೀಗೆ ಅನೇಕ ಸಾಮಾಜಿಕ ಅಸಮಾನತೆಯಿಂದ ತುಳಿತಕ್ಕೆ ಒಳಗಾಗಿದ್ದ ಜನರ ಏಳ್ಗೆಗಾಗಿ ಅನೇಕ ಶರಣರು ಸಾಮಾಜಿಕ ಕ್ರಾಂತಿಯನ್ನೇ ಕೈಗೊಂಡರು ಎಂದರು. ಕುರುಗೋಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ತಿಪ್ಪೇರುದ್ರ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, 12ನೇ ಶತಮಾನದ ಬಸವಣ್ಣನವರ ಸಮಕಾಲೀನ ಶರಣರಲ್ಲಿ ಮಡಿವಾಳ ಮಾಚಿದೇವರು ಒಬ್ಬರಾಗಿದ್ದರು.

ಮೌಢ್ಯಗಳಿಂದ ದೀನರ ಶೋಷಣೆ ನಡೆಯುತ್ತಿದ್ದ ಕಾಲದಲ್ಲಿ ಮಾಚಿದೇವ ಜಾಗೃತಿಯ ಮೂಲಕ ಶೋಷಣೆ ತಡೆಗಟ್ಟಿದರು.

12ನೇ ಶತಮಾನದ ಕಾಲದಲ್ಲಿ ಇಂತಹ ಶರಣರು ಮಹಾಪುರುಷರು ಹಾಕಿಕೊಟ್ಟ ಮಾರ್ಗದರ್ಶನ ಹಾಗೂ ವಚನಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.ಕ್ರಿ.ಶ.1120 ರಲ್ಲಿ ಬಿಜಾಪುರ ಜಿಲ್ಲೆಯ ಸಿಂಧಗಿ ತಾಲ್ಲೂಕಿನ ದೇವರ ಹಿಪ್ಪರಗಿಯಲ್ಲಿ ತಂದೆ ಪರುವತಯ್ಯ ತಾಯಿ ಸುಜ್ಞಾನವ್ವ ದಂಪತಿಗಳ ಮಗನಾಗಿ ಮಡಿವಾಳ ಮಾಚಿದೇವರು ಜನಿಸಿದರು. ವಚನ ಸಾಹಿತ್ಯದ ಹಸ್ತ ಪ್ರತಿಗಳನ್ನು ರಕ್ಷಣೆ ಮಾಡುವ ಜವಾಬ್ದಾರಿಯನ್ನು ಹೊಂದಿದ್ದ ಇವರು, ಬಸವಣ್ಣನವರು ನಿರ್ಮಿಸಿದ್ದ ಅನುಭವ ಮಂಟಪದಲ್ಲಿಯೂ ಪ್ರಮುಖ ಪಾತ್ರ ವಹಿಸಿದ್ದರು. ಈ ಮೂಲಕ ಸಾಮಾಜಿಕ ಪರಿವರ್ತನೆಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆ ಬೋಧಿಸಲಾಯಿತು.

ಬಳಿಕ ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಗಣ್ಯರು ಪುಷ್ಪ ನಮನ ಸಲ್ಲಿಸಿದರು. ಬಳ್ಳಾರಿಯ ದೊಡ್ಡಯ್ಯ ವಿ.ಕಲ್ಲೂರು ತಂಡ ವಚನ ಸಂಗೀತ ಗಾಯನ ಪ್ರಸ್ತುತಪಡಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಮಡಿವಾಳ ಸಂಘದ ಅಧ್ಯಕ್ಷ ಎನ್.ಧನುಂಜಯ ಹಮಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್, ಮುಖಂಡರಾದ ಪ್ರತಾಪ್ ರೆಡ್ಡಿ, ಅನೂಪ್ ಕುಮಾರ್, ಅಲ್ಲಂ ಪ್ರಶಾಂತ್ ಸೇರಿದಂತೆ ಸಮಾಜದ ಮುಖಂಡರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಮಕ್ಕಳ ಮಾತುಗಳನ್ನು ಪಾಲಕರು ಪ್ರೀತಿಯಿಂದ ಆಲಿಸಬೇಕು: ಡಾ.ಕಲಾವತಿ



### ಜನಸಿಸ್ ಶಾಲೆ ಸಂಸ್ಕೃತಿ 2026 ವಾರ್ಷಿಕೋತ್ಸವ ಸಮಾರಂಭ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಮಕ್ಕಳ ಮೇಲಿನ ವ್ಯಾಮೋಹ ಇರಬೇಕು. ಆದರೆ, ಅದು ಅತಿಯಾಗಬಾರದು, ಅವರನ್ನು ಸ್ವಲ್ಪ ಫ್ರೀಯಾಗಿ ಬೆಳೆಯಲು ಬಿಡಬೇಕು. ಮಕ್ಕಳು ಶಾಲೆಯಿಂದ ಬಂದ ಕೂಡಲೇ ಎಲ್ಲ ವರದಿಯನ್ನು ಪಾಲಕರ ಎದುರು ಒಪ್ಪಿಸಲು ಮುಂದಾಗ್ತಾರೆ. ನಾವು ಎಷ್ಟೇ ಬ್ಯೂಸಿ ಯಾಗಿದ್ದರೂ ಎಲ್ಲವನ್ನೂ ಬದಿಗೊತ್ತಿ, ಮಕ್ಕಳ ಮಾತುಗಳನ್ನು ಪ್ರೀತಿಯಿಂದ ಆಲಿಸಬೇಕು

ಎಂದು ಮೋಕ ಪದವಿ ಪೂರ್ವ ಕಾಲೇಜು ಉಪನ್ಯಾಸಕಿ ಡಾ.ಕಲಾವತಿ ಅವರು ಹೇಳಿದರು. ನಗರದ ರೆಡ್ಡಿ ಜನಸಂಘ ಸಮುಚ್ಚಯ, ಜೆನಸಿಸ್ ಶಾಲೆ ಆವರಣದಲ್ಲಿ ಶನಿವಾರ ಸಂಜೆ ಹಮ್ಮಿಕೊಂಡಿದ್ದ ಸಂಸ್ಕೃತಿ – 2026 ಉತ್ಸವದಲ್ಲಿ ಮಾತನಾಡಿದರು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಜೊತೆಗೆ ಕೆಲವರು, ಸಂಗೀತ, ಯೋಗ, ಕರಾಟೆ, ಕ್ರೀಡೆಗಳಿಗೆ, ಬ್ಯಾಡ್ಮಿಂಟನ್ ಸೇರಿದಂತೆ ನಾನಾ ಚಟುವಟಿಕೆಗಳಿಗೆ ತೊಡಗಿಸುತ್ತಾರೆ, ಇದು ಹೆಚ್ಚು ಒಳ್ಳೆಯದಲ್ಲ, ಇದರಿಂದ ಮಕ್ಕಳು ಶಿಕ್ಷಣವನ್ನು ಮರೆಯುವ ಸಾಧ್ಯತೆ ಹೆಚ್ಚರಲಿದೆ. ಮಕ್ಕಳ ಎದುರು ಎಂದು ಸುಳ್ಳು ಹೇಳಬಾರದು, ಮಾತಾಡ್ಬಾರದು, ಇದರಿಂದ ಮಕ್ಕಳ ಗಮನ ಬೇರೆ ಕಡೆಗೆ ಹರಿಯುವ ಸಾಧ್ಯತೆ ಇರಲಿದೆ. ಶಿಕ್ಷಣದ ಮಾನದಂಡ ಕೇವಲ, ಪ್ರೋಗ್ರೆಸ್ ಕಾರ್ಡ್, ಮಾರ್ಕ್ಸ್ ಕಾರ್ಡ್ ಗೆ ಸೀಮಿತ ಆಗಬಾರದು ಎಂದರು.

ಜೆನಸಿಸ್ ಶಾಲೆ ಸಂಸ್ಥಾಪಕ ಅಧ್ಯಕ್ಷ ಸಂತೋಷ್ ಮಾರ್ಟಿನ್ ಅವರು ಮಾತನಾಡಿ,

ಪ್ರತಿಯೊಬ್ಬ ಮಗುವಿಗೂ ಗುಣಮಟ್ಟದ ಶಿಕ್ಷಣ ಕಲ್ಪಿಸಬೇಕು, ಪ್ರತಿಯೊಬ್ಬ ಮಗುವಿಗೂ ವೇದಿಕೆ ಕಲ್ಪಿಸಬೇಕು, ಮಕ್ಕಳ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸಬೇಕು ಎನ್ನುವ ಕನಸು ನನ್ನದು. ಶಿಕ್ಷಣದ ಜೊತೆಗೆ ಮಕ್ಕಳು ಎಲ್ಲ ವಲಯದಲ್ಲೂ ತೊಡಗಿಸಿಕೊಳ್ಳಬೇಕು, ಸಂಭ್ರಮಿಸಬೇಕು ಎಂದರು. ಈ ಸಂದರ್ಭದಲ್ಲಿ ಜನಸಿಸ್ ಶಾಲೆಯ ಸೋನಿಯಾ ಮಾರ್ಟಿನ್, ಮುಖ್ಯಗುರುಗಳಾದ ವಿಜಯಾ ಮೇಡಂ, ನಜ್ಮಾ ಮೇಡಂ, ಸುಧಾ ಭಾಸುತ್ಕರ ಸೇರಿದಂತೆ ಶಾಲೆಯ ಎಲ್ಲ ಶಿಕ್ಷಕರು,

ಸಿಬ್ಬಂದಿಗಳು, ಪಾಲಕರು, ಇತರರಿದ್ದರು. ಮಕ್ಕಳು ಪ್ರಾರ್ಥಿಸಿದರು. ಹಿರಿಯ ಪತ್ರಕರ್ತ, ಕಲಾವಿದ ಎಂ. ಅಹಿರಾಜ್ ಅವರು ತಬಲಾ ಸಾಥ್ ನೀಡಿದರು. ನಂತರ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಮುದ್ದು ಮಕ್ಕಳ ನೃತ್ಯಕ್ಕೆ ನೆರೆದ ಸಾವಿರಾರು ಪಾಲಕರು, ಶಿಕ್ಷಕರು ಚಪ್ಪಾಳೆ ತಟ್ಟಿ ಪ್ರೋತ್ಸಾಹಿಸಿದರು.

# ಕಾರ್ಮಿಕ: ಜಂಟಿ ಸಮಿತಿಯಿಂದ ಸಮಾವೇಶ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಇಂದು ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯಿಂದ ನಗರದ ಗಾಂಧಿ ಭವನದಲ್ಲಿ ಸಮಾವೇಶವನ್ನು ಹಮ್ಮಿಕೊಳ್ಳಲಾಗಿತ್ತು. ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ಲೇಬರ್ ಕೋಡ್ ಹಾಗೂ ಇನ್ನಿತರ ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ನಡೆಯುತ್ತಿರುವ ಅಖಿಲ ಭಾರತ ಸಾರ್ವತ್ರಿಕ ಮುಷ್ಕರದ ಹಿನ್ನೆಲೆಯಲ್ಲಿ ಈ ಸಮಾವೇಶವನ್ನು ಸಂಘಟಿಸಲಾಗಿತ್ತು. ಎಐಯುಟಿಯುಸಿ, ಸಿಐಟಿಯು, ಎಐಟಿಯುಸಿ ಕೇಂದ್ರ ಕಾರ್ಮಿಕ ಸಂಘಟನೆಗಳು ಸೇರಿದಂತೆ, ಅಖಿಲ ಭಾರತ ವಿಮಾ ನೌಕರರ ಸಂಘಟನೆ, ಬ್ಯಾಂಕ್ ನೌಕರರ ಸಂಘಟನೆಗಳು, ರೈತ ಸಂಘಟನೆಗಳಾದ ಎಐಕೆಕೆಎಂಎಸ್, ಕರ್ನಾಟಕ ರಾಜ್ಯ ರಾಜ್ಯ ರೈತ ಸಂಘ, ಯುವಜನ, ಮಹಿಳಾ ಹಾಗೂ ವಿದ್ಯಾರ್ಥಿ ಸಂಘಟನೆಗಳು ಈ ಸಮಾವೇಶದಲ್ಲಿ ಪಾಲ್ಗೊಂಡಿದ್ದವು.

ಕಾರ್ಮಿಕ ವಿರೋಧಿ, ಜನವಿರೋಧಿ ನೀತಿಗಳ ವಿರುದ್ಧ ಫೆಬ್ರವರಿ 12 ರಂದು ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ಕರೆ ನೀಡಲಾಗಿದೆ. ಅದನ್ನು ರಾಜ್ಯದಲ್ಲಿ ಯಶಸ್ವಿಗೊಳಿಸಬೇಕೆಂದು ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಕರೆ ನೀಡುತ್ತಿದೆ.

ಈ ಸಂದರ್ಭದಲ್ಲಿ ವಿವಿಧ ಕಾರ್ಮಿಕ ಮುಖಂಡರು ಮಾತನಾಡಿದರು.

ಈ ಸಮಾವೇಶದ ಅಧ್ಯಕ್ಷತೆಯನ್ನು ಅರ್.ಸೋಮಶೇಖರ್ ಗೌಡ ವಹಿಸಿದ್ದರು, ಸಿಐಟಿಯು ಮುಖಂಡರಾದ ಸತ್ಯ ಬಾಬು, ಎಐಯುಟಿ–ಯುಸಿ ಎ.ಶಾಂತ, ಸುರೇಶ್, ಎಐಟಿಯುಸಿ ಚನ್ನಬಸಯ್ಯ, ಎಸಿ ಯೂನಿಯನ್ ಸೂರ್ಯನಾರಾಯಣ, ಬ್ಯಾಂಕ್ ಯೂನಿಯನ್ ಪ್ರದೀಪ್, ಸಿಐಟಿಯು ತಿಪ್ಪಯ್ಯ, ಮಲ್ಲಮ್ಮ, ರೈತ ಸಂಘದ ಸಂಗನಕಲ್ಲು ಕೃಷ್ಣಪ್ಪ, ಶಿವಶಂಕರ್, ಹನುಮಂತಪ್ಪ, ಸರ್ಕಾರಿ ನೌಕರರ ಸಂಘದ ಗುರುಸಿದ್ಧ ಮೂರ್ತಿ, ಜನವಾದಿ ಮಹಿಳಾ ಸಂಘದ ಚಂದ್ರಕುಮಾರಿ, ಯುವಜನ ಸಂಘದ ಕಟ್ಟೆಬಸಪ್ಪ, ಏರಿಸ್ವಾಮಿ, ನಿವೃತ್ತ ನೌಕರರ ಸಂಘದ ಮಂತಯ್ಯ, ವೇದಿಕೆಯಲ್ಲಿದ್ದರು.

## ಸಂಡೂರು: ಶಾಲಾ ಮಕ್ಕಳೊಂದಿಗೆ ಸಂವಾದ

# ಅಧಿಕಾರಿಗಳು ಕ್ರಿಯಾಶೀಲತೆಯಿಂದ ಕಾರ್ಯಪ್ರವೃತ್ತರಾಗಬೇಕು: ಕೋಸಂಬೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು, ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಹಾಗೂ ಅವರ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕ್ರಿಯಾಶೀಲತೆಯಿಂದ ಕಾರ್ಯಪ್ರವೃತ್ತರಾಗಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅವರು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ತಾಲೂಕು ಆಡಳಿತ, ತಾಲೂಕು ಪಂಚಾಯತ್ ಸಂಡೂರು, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬಳ್ಳಾರಿ ಹಾಗೂ ಭಾಗಿದಾರರ ಇಲಾಖೆಗಳ ಇವರ ಸಂಯುಕ್ತಾಶ್ರಯದಲ್ಲಿ ಸಂಡೂರು ಪಟ್ಟಣದ ಎಪಿಎಂಸಿ ಹತ್ತಿರದ ಸರ್ಕಾರಿ ಪ್ರೌಢ ಶಾಲೆಯ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ ಸರ್ಕಾರಿ, ಅನುದಾನಿತ, ಅನುದಾನ ರಹಿತ ಮತ್ತು ವಿವಿಧ ಮಾದರಿ ಶಾಲೆಗಳ ಮಕ್ಕಳೊಂದಿಗ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಶಾಲಾ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಸುಸಜ್ಜಿತ ಕಟ್ಟಡ, ಮೂಲಭೂತ ಸೌಲಭ್ಯಗಳು ಮತ್ತು ಹಿತಕರ ವಾತಾವರಣ ಕಲ್ಪಿಸಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿಗೆ ನಿರ್ದೇಶನ ನೀಡಿದರು.ಮಕ್ಕಳ ಹಕ್ಕುಗಳು ಸಂವಿಧಾನ ಬದ್ಧವಾಗಿದ್ದು,

ಮಕ್ಕಳಿಗೆ ಕಾನೂನಾತ್ಮಕ ಸಮಸ್ಯೆ ಎದುರಾದಲ್ಲಿ 1098 ಮಕ್ಕಳ ಸಹಾಯವಾಣಿಗೆ ಕರೆ ಮಾಡಿ, ಸಮಸ್ಯೆಗಳನ್ನು ಮುಕ್ತವಾಗಿ ಹೇಳಬಹುದು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.ಮಕ್ಕಳ ರಕ್ಷಣೆ ಹಾಗೂ ಕಾನೂನು ಸುರಕ್ಷತೆ ಕಾಪಾಡಲು ಮತ್ತು ಪೊಲೀಸ್ ಇಲಾಖೆಯು ಮಕ್ಕಳೊಂದಿಗೆ ಸ್ನೇಹಿ ಸಂಬಂಧ ಬೆಸೆಯಲು ಪ್ರತಿ ಗುರುವಾರ ತೆರೆದ ಮನೆ ಕಾರ್ಯಕ್ರಮದಡಿ ಶಾಲಾ ಮಕ್ಕಳಿಗೆ ಕಾನೂನು ಸಲಹೆ ಮತ್ತು ಮಕ್ಕಳ ಹಕ್ಕುಗಳ ಕುರಿತು ಕಡ್ಡಾಯವಾಗಿ ಮಾಹಿತಿ ನೀಡಬೇಕು. ಮಕ್ಕಳು ದುಶ್ಚಟಗಳಿಗೆ ಬಲಿಯಾಗಬಾರದು, ಈ ನಿಟ್ಟಿನಲ್ಲಿ ಶಾಲಾ ಆವರಣದ 100 ಮೀ. ಅಂತರದಲ್ಲಿ ಧೂಮಪಾನ, ತಂಬಾಕು ಮಾರಾಟ ಮಾಡಿದ್ದಲ್ಲಿ ಕೂಡಲೇ ತೆರವುಗೊಳಿಸಬೇಕು. ವಿಶೇಷವಾಗಿ ಶಾಲಾ ಆವರಣದಲ್ಲಿ ಪುಂಡರ ಹಾವಳಿ ತಡೆಗಟ್ಟಲು ಪೊಲೀಸ್ ಸಿಬ್ಬಂದಿ ಬೀಟ್ ಮೂಲಕ ಪರಿಶೀಲಿಸಬೇಕು ಎಂದು ಪೊಲೀಸ್ ಇಲಾಖೆಗೆ ಆಯೋಗದ ಅಧ್ಯಕ್ಷರು ನಿರ್ದೇಶನ ನೀಡಿದರು.

# ಕುಡಿಯುವ ನೀರು ಕಾಮಗಾರಿಗಳನ್ನು ಶೀಘ್ರದಲ್ಲಿ ಕೈಗೊಳ್ಳಿ : ಡಾ.ದಿಲೀಷ್ ಶಶಿ



• ಮಲ್ಲಮ್ಮ ನುಡಿ ವಾರ್ತೆ ಕಾರವಾರ:

ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಟಾಸ್ಕ್ ಪೋರ್ಸ್ ಸಭೆಯಲ್ಲಿ ಮಂಜೂರಾಗಿರುವ ಕುಡಿಯುವ ನೀರಿನ ಕ್ರಿಯಾ ಯೋಜನೆಗಳನ್ನು ಶೀಘ್ರದಲ್ಲಿ ಅನುಷ್ಠಾನಗೊಳಿಸುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ಸೂಚಿಸಿದರು.ಅವರು ಶುಕ್ರವಾರ ಜಿಲ್ಲಾ ಪಂಚಾಯತ್ ನಲ್ಲಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರಸಕ್ತ ಸಾಲಿನಲ್ಲಿ ಎಲ್ಲಾ ತಾಲೂಕುಗಳಲ್ಲಿ ಶಾಸಕರ ಟಾಸ್ಕ್ ಪೋರ್ಸ್ ಸಭೆಯಲ್ಲಿ ಮಂಜೂರಾಗಿರುವ ಕುಡಿಯುವ ನೀರಿನ ಕ್ರಿಯಾ ಯೋಜನೆಯ ಎಲ್ಲಾ ಕಾಮಗಾರಿಗಳಿಗೆ ಜಿಲ್ಲಾ ಪಂಚಾಯತ್ ನಿಂದ ಅನುಮೋದನೆ ನೀಡಿದ್ದು, ಈಗಾಗಲೇ ಗುರುತಿಸುವ ಪ್ರದೇಶಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಶೀಘ್ರದಲ್ಲಿ ಎಲ್ಲಾ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಂತೆ ತಿಳಿಸಿದರು.ಇದೇ ಸಂದರ್ಭದಲ್ಲಿ ಜಲ ಜೀವನ್ ಮಿಷನ್ ಯೋಜನೆಯ ಕಾಮಗಾರಿಗಳ ಬಗ್ಗೆ ಪರಿಶೀಲನೆ ನಡೆಸಿದರು.ಸಭೆಯಲ್ಲಿ ಜಿ.ಪಂ. ಉಪ ಕಾರ್ಯದರ್ಶಿ ಅಲ್ಲಾ ಭಕ್ಷ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಇಂಜಿನಿಯರ್ ಸತ್ಯಪ್ಪ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

# ಗಂಗಾವತಿ ಲಯನ್ಸ್ ತಂಡದ ಭರ್ಜರಿ ಜಯ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

KBNPL2026: ಐವಾನ್–ಎ–ಶಾಹಿ ರಾಯಲ್ಸ್ ವಿರುದ್ಧ ಗೆದ್ದು ಅಂಕಪಟ್ಟಿಯಲ್ಲಿ ಪ್ರಥಮ ಸ್ಥಾನ ಪಡೆದ ಗಂಗಾವತಿ ಲಯನ್ಸ್ ಭಾನುವಾರ ನಡೆಯುತ್ತಿರುವ ಏಃಓಕಐ 2026 ಪಂದ್ಯಾವಳಿಯಲ್ಲಿ ಗಂಗಾವತಿ ಲಯನ್ಸ್ ತಂಡವು ಐವಾನ್–ಎ–ಶಾಹಿ ರಾಯಲ್ಸ್ ವಿರುದ್ಧ ಭರ್ಜರಿ ಜಯ ಸಾಧಿಸಿ ಅಂಕಪಟ್ಟಿಯಲ್ಲಿ ಪ್ರಥಮ ಸ್ಥಾನವನ್ನು ತನ್ನದಾಗಿಸಿಕೊಂಡಿತು. ಟಾಸ್ ಗೆದ್ದ ಐವಾನ್–ಎ–ಶಾಹಿ ರಾಯಲ್ಸ್ ಮೊದಲು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡರು.

ಗಂಗಾವತಿ ಲಯನ್ಸ್ ಪರವಾಗಿ ಭುವನ್ ರಾಜು ಹಾಗೂ ಮಿರ್ಜಾ ವಸೀಂ ಬೇಗ್ ಇನಿಂಗ್ಸ್ ಆರಂಭಿಸಿ ನಿಧಾನಗತಿಯ ಆರಂಭ ನೀಡಿದರು. ನಂತರ ರೋಹನ್ ನವೀನ್ 39 ಚೆಂಡುಗಳಲ್ಲಿ 5 ಬೌಂಡರಿ ಮತ್ತು 5 ಸಿಕ್ಸರ್‌ಗಳೊಂದಿಗೆ 66 ರನ್‌ಗಳ ಅದ್ಭುತ ಇನಿಂಗ್ಸ್ ಆಡಿದರು. ಮೊಹಮ್ಮದ್ ಕೈಫ್ 40 ಚೆಂಡುಗಳಲ್ಲಿ 6 ಬೌಂಡರಿ ಹಾಗೂ 4 ಸಿಕ್ಸರ್‌ಗಳೊಂದಿಗೆ 65 ರನ್ ಗಳಿಸಿ ತಂಡದ ಮೊತ್ತ ಹೆಚ್ಚಿಸಿದರು.

ಅಂತಿಮ ಹಂತದಲ್ಲಿ ಶಿವರಾಜ್ ಎಸ್ ಕೇವಲ 19 ಚೆಂಡುಗಳಲ್ಲಿ 4 ಬೌಂಡರಿ ಮತ್ತು 4 ಸಿಕ್ಸರ್‌ಗಳೊಂದಿಗೆ ವೇಗದ 54 ರನ್ ಗಳಿಸಿದರು. ಭೀಮರಾವ್ ನಾವಳೆ 1 ಬೌಂಡರಿ ಹಾಗೂ 3 ಸಿಕ್ಸರ್‌ಗಳೊಂದಿಗೆ 28 ರನ್ ಗಳಿಸಿದರು. ಐವಾನ್–ಎ–ಶಾಹಿ ರಾಯಲ್ಸ್ ಪರ ಲವೀಶ್ ಕೌಶಲ್ ಮತ್ತು ಸಂತೋಷ್ ಹಟ್ಟಿ ತಲಾ 2 ವಿಕೆಟ್ ಪಡೆದರು.

ಗುರಿ ಬೆನ್ನಟ್ಟಿದ ಐವಾನ್–ಎ–ಶಾಹಿ ರಾಯಲ್ಸ್ ತಂಡಕ್ಕೆ ಆದರ್ಶ ಪ್ರಜ್ವಲ್ ಹಾಗೂ ಆರವ್ ಮಹೇಶ್ ಆರಂಭ ನೀಡಿದರು. ಈ ಜೋಡಿ ಮೊದಲ ವಿಕೆಟ್‌ಗೆ 34 ರನ್‌ಗಳ ಜೊತೆಯಾಟ ನಡೆಸಿತು. ಆದರ್ಶ ಪ್ರಜ್ವಲ್ 28 ರನ್ ಗಳಿಸಿದರೆ, ಆರವ್ ಮಹೇಶ್ 25 ಚೆಂಡುಗಳಲ್ಲಿ 1 ಬೌಂಡರಿ ಮತ್ತು 3 ಸಿಕ್ಸರ್‌ಗಳೊಂದಿಗೆ 33 ರನ್ ಗಳಿಸಿದರು.

ಆದರೆ ಲಯನ್ಸ್ ಬೌಲರ್‌ಗಳ ಒತ್ತಡದ ಮುಂದೆ ರಾಯಲ್ಸ್ ತಂಡ 18.1 ಓವರ್‌ಗಳಲ್ಲಿ 10 ವಿಕೆಟ್ ಕಳೆದುಕೊಂಡು 143 ರನ್‌ಗಳಿಗೆ ಆಲೌಟ್ ಆಯಿತು. ಗಂಗಾವತಿ ಲಯನ್ಸ್ ಪರ ಶೀತಲ್ ಕುಮಾರ್ ಅದ್ಭುತ ಪ್ರದರ್ಶನ ನೀಡಿ 4 ವಿಕೆಟ್ ಪಡೆದು ತಂಡದ ಜಯಕ್ಕೆ ಪ್ರಮುಖ ಪಾತ್ರ ವಹಿಸಿದರು.

# ಕಾಂಗ್ರೆಸ್ ಅಪಪ್ರಚಾರಕ್ಕೆ ಬಿಜೆಪಿ ತಿರುಗೇಟು ಎ.ಎಸ್. ಪಾಟೀಲ್ ನಡಹಳ್ಳಿ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಬಳ್ಳಾರಿಯ ಮೋಕಾ ರಸ್ತೆಯಲ್ಲಿರುವ ವಾಜಪೇಯಿ ಬಡಾವಣೆಯ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಎ.ಎಸ್.ಪಾಟೀಲ್ ನಡಹಳ್ಳಿ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಕಸಿತ ಭಾರತ ಗ್ರಾಮ ಗ್ರಾಮೀಣ ಉದ್ಯೋಗ ಮತ್ತು ಆಜೀವಿಕಾ ಮಿಷನ್ (VB-G RAM G) ಯೋಜನೆ ಗ್ರಾಮೀಣ ಭಾರತದ ಸಮಗ್ರ ಅಭಿವೃದ್ಧಿಗೆ ದಿಕ್ಕು ತೋರಿಸುವ ಮಹತ್ವದ ಯೋಜನೆಯಾಗಿದೆ ಎಂದು ಹೇಳಿದರು. MGNREGAಗೆ ಬದಲಾಗಿ ರೂಪುಗೊಂಡಿರುವ ಈ ಹೊಸ ಯೋಜನೆಯ ಕುರಿತು ಕಾಂಗ್ರೆಸ್ ಅಪಪ್ರಚಾರ ಮಾಡುತ್ತಿದೆ ಎಂದು ಆರೋಪಿಸಿದ ಅವರು, VB-G RAM G ಯೋಜನೆ ಹಿಂದಿನ ಯೋಜನೆಗಿಂತ ಹೆಚ್ಚು ಪಾರದರ್ಶಕ, ಪರಿಣಾಮಕಾರಿ ಮತ್ತು ತಂತ್ರಜ್ಞಾನಾಧಾರಿತವಾಗಿದೆ ಎಂದು ಸ್ಪಷ್ಟಪಡಿಸಿದರು.

### ಉದ್ಯೋಗಾವಕಾಶ ಮತ್ತು ದಿನಗಳ ವೃದ್ಧಿ

VB-GRAMG ಯೋಜನೆಯಲ್ಲಿ ಗ್ರಾಮೀಣ ಕಾರ್ಮಿಕರಿಗೆ 100 ದಿನಗಳ ಉದ್ಯೋಗ ಖಾತ್ರಿ 125 ದಿನಗಳಿಗೆ ಹೆಚ್ಚಿಸಲಾಗಿದೆ. ಕೃಷಿ ಚಟುವಟಿಕೆಗಳು ಹೆಚ್ಚಿರುವ ಅವಧಿಯಲ್ಲಿ ರಾಜ್ಯ ಸರ್ಕಾರಗಳ ನಿರ್ಧಾರಕ್ಕೆ ಅನುಗುಣವಾಗಿ ಇನ್ನೂ 60 ದಿನಗಳವರೆಗೆ ಕೆಲಸ ಸ್ಥಗಿತಗೊಳಿಸುವ ಅವಕಾಶವೂ ಇದೆ, ಇದರಿಂದ ಕೃಷಿ ಕಾರ್ಮಿಕರ ಕೊರತೆ ಸಮಸ್ಯೆ ನಿವಾರಣೆಯಾಗಲಿದೆ ಎಂದು ತಿಳಿಸಿದರು.

### ತಂತ್ರಜ್ಞಾನ ಆಧಾರಿತ ಅನುಷ್ಠಾನ

ಯೋಜನೆಯ ಎಲ್ಲಾ ಹಂತಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ, ಜಿಯೋ–ಟ್ಯಾಗಿಂಗ್, ಡಿಜಿಟಲ್ ಡ್ಯಾಶ್‌ಬೋರ್ಡ್, ಲೈವ್ ಮೇಲ್ವಿಚಾರಣೆ, ವಾರಂತ್ಯ ಪ್ರಗತಿ ಪ್ರಕಟಣೆ ಅಳವಡಿಸಲಾಗಿದೆ. ಇದರಿಂದ ನಕಲಿ ಕೆಲಸ, ಮಧ್ಯವರ್ತಿಗಳ ಹಸ್ತಕ್ಷೇಪ ಮತ್ತು ಭ್ರಷ್ಟಾಚಾರಕ್ಕೆ ಕಡಿವಾಣ ಬೀಳಲಿದೆ ಎಂದು ಹೇಳಿದರು.

### ಕೇಂದ್ರ ರಾಜ್ಯ ಹಂಚಿಕೆ

ಈ ಯೋಜನೆಯಲ್ಲಿ ಕೇಂದ್ರ ರಾಜ್ಯ ವೆಚ್ಚ ಹಂಚಿಕೆ 60:40 ಆಗಿದ್ದು, ಇದರಿಂದ ರಾಜ್ಯ ಸರ್ಕಾರಗಳಿಗೂ ಜವಾಬ್ದಾರಿ ಹೆಚ್ಚಲಿದೆ. ಈಶಾನ್ಯ ಮತ್ತು ಹಿಮಾಲಯನ್ ರಾಜ್ಯಗಳಿಗೆ 90:10 ಅನುಪಾತದಲ್ಲಿ ಅನುದಾನ ನೀಡಲಾಗುತ್ತದೆ. ವೇತನ ಪಾವತಿಯಲ್ಲಿ ಯಾವುದೇ ಅನಿಶ್ಚಿತತೆ ಇಲ್ಲದೆ ಕನಿಷ್ಠ ವೇತನದ ಖಾತ್ರಿ ಇರುವುದಾಗಿ ನಡಹಳ್ಳಿ ಸ್ಪಷ್ಟಪಡಿಸಿದರು. MGNREGAUE ಹೋಲಿಸಿದರೆ VB-G RAM GMGNREGA ಯೋಜನೆ ಉದ್ಯೋಗ

ಸೃಷ್ಟಿಯಲ್ಲಿಯೇ ಸೀಮಿತವಾಗಿದ್ದರೆ, VB-GRAMG ಯೋಜನೆ 2047ರ ವಿಕಸಿತ ಭಾರತದ ದೃಷ್ಟಿಕೋನವನ್ನು ಇಟ್ಟುಕೊಂಡು, ಶಾಶ್ವತ ಆಸ್ತಿಗಳ ನಿರ್ಮಾಣ, ಮೂಲಸೌಕರ್ಯ ಅಭಿವೃದ್ಧಿ ಮತ್ತು ಗ್ರಾಮಗಳ ಸ್ವಾವಲಂಬನೆಗೆ ಒತ್ತು ನೀಡುತ್ತದೆ ಎಂದು ಹೇಳಿದರು.

ಸಾಮಾಜಿಕ ಲೆಕ್ಕಪರಿಶೋಧನೆ, ದೂರು ನಿವಾರಣೆಗೆ ಕಾಲಮಿತಿಯ ಡಿಜಿಟಲ್ ವ್ಯವಸ್ಥೆ, ಹಾಗೂ ಕೇಂದ್ರ ಮತ್ತು ರಾಜ್ಯ ಮಟ್ಟದ ನಿರ್ವಹಣಾ ಮಂಡಳಿಗಳ ಮೂಲಕ ಕಟ್ಟುನಿಟ್ಟಿನ ಮೇಲ್ವಿಚಾರಣೆ ನಡೆಯಲಿದೆ ಎಂದು ತಿಳಿಸಿದರು. VB-GRAMG ಯೋಜನೆಯ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಮೂಲಸೌಕರ್ಯ, ಶಿಕ್ಷಣ, ಆರೋಗ್ಯ, ಉದ್ಯೋಗ ಮತ್ತು ಡಿಜಿಟಲ್ ಸೌಲಭ್ಯಗಳನ್ನು ವಿಸ್ತರಿಸಿ, ಗ್ರಾಮೀಣ ನಗರ ಅಂತರವನ್ನು ಕಡಿಮೆ ಮಾಡುವುದು ಕೇಂದ್ರ ಸರ್ಕಾರದ ಗುರಿಯಾಗಿದೆ ಎಂದು ನಡಹಳ್ಳಿ ಹೇಳಿದರು. ಈ ಸಂದರ್ಭದಲ್ಲಿ ಅನಿಲಕುಮಾರ್ ಮೋಕಾ, ಸೋಮಶೇಖರ್ ರೆಡ್ಡಿ, ಪಕೀರಪ್ಪ, ಗುರುಲಿಂಗನ ಗೌಡ, ಗುರಿರಂ ವೆಂಕಟರಮಣ, ಐನಾಥರೆಡ್ಡಿ, ಕೆ.ಎಸ್. ದಿವಾಕರ್, ಹನುಮಂತಪ್ಪ, ಜಿ.ಟಿ. ಪಂಪಪತಿ, ಶಾಮ್, ಉಜ್ವಲ ಶ್ರೀಧರ್ ಸೇರಿದಂತೆ ಹಲವು ಬಿಜೆಪಿ ಮುಖಂಡರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಸರ್ಕಾರಿ ಶಾಲಾ ಮಕ್ಕಳಿಗೆ ತಟ್ಟೆ ಲೋಟ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು:

ಹುಟ್ಟುಹಬ್ಬ ದಿನದಂದು ವಿಶೇಷವಾಗಿ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ತಟ್ಟೆ, ಲೋಟಗಳ ವಿತರಣೆ ಮಾಡುತ್ತಿರುವ ಕಾರ್ಯ ಶ್ಲಾಘನೀಯ ಎಂದು ಅಂಬೇಡ್ಕರ್ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಸ್‌ಡಿಎಂಸಿ ಶಾಲೆಯ ಅಧ್ಯಕ್ಷ ಲಕ್ಷ್ಮಣ ಕಾಳಿ ಹೇಳಿದರು.

ಪಟ್ಟಣದ ಸರ್ಕಾರಿ ಕ್ರಿಯೆ ಪ್ರಾಥಮಿಕ ಶಾಲೆ ಅಂಬೇಡ್ಕರ್ ನಗರದ ಶನಿವಾರ ದಿವಸ ಹಮ್ಮಿಕೊಂಡಿದ್ದ ತಟ್ಟೆ ನೋಟ ವಿತರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು,ಶಾಲಾ ಶಿಕ್ಷಕ ಮಹೇಶ ಅಸೂಟಿ ಸಹ ಶಿಕ್ಷಕರು ಅವರ ಪತ್ನಿಯಾದಂತ ಜಯಪ್ರಧಾ ಮಹೇಶ ಅಸೂಟಿ ಇವರ ಜನ್ಮ ದಿನದ ಸುಸಂದರ್ಭದಲ್ಲಿ ಹಾಗೂ ಅವರ ಉಪಸ್ಥಿತಿಯಲ್ಲಿ ಶಾಲೆಗೆ 25ಸ್ಟೀಲ್ ತಟ್ಟೆ, 25ಸ್ಟೀಲ್ ಲೋಟ, 4 ವಿಶೇಷ ತಟ್ಟೆಗಳು,ಹಾಗೂ ಸೌಟುಗಳನ್ನು ದಾನವಾಗಿ ಕೊಟ್ಟಿದ್ದಾರೆ, ಅವರ ಜನ್ಮದಿನವನ್ನು ಈ ತರ ವಿಶೇಷವಾಗಿ ಬಡ ಮಕ್ಕಳ ವಿದ್ಯಾರ್ಥಿಗಳ ಶ್ರೇಯ ಅಭಿವೃದ್ಧಿಗೆ ಮಾಡುತ್ತಿರುವ ಕಾರ್ಯ ವಿಶೇಷವಾಗಿದೆ, ಆಧುನಿಕ ಕಾಲದಲ್ಲಿ ಪಾರ್ಟಿ ಇನ್ನಿತರ ಕಾರ್ಯಗಳಿಗೆ ಖರ್ಚು ಮಾಡಿ ಹಣದುಬ್ಬರ ಮಾಡುವುದಕ್ಕಿಂತ ಶಾಲೆಗಳ ವಿದ್ಯಾರ್ಥಿಗಳಿಗೆ ಅನುಕೂಲವಾಗಲು ಇತರ ವಿಶೇಷ ಮನೋಭಾವನೆಯನ್ನು ಬೆಳೆಸಿಕೊಂಡಿರುವುದು ಹಾಗೂ ಮುಂಬರುವ ದಿನಮಾನಗಳಿಗೆ ಹಾಗೂ ಜನಗಳಿಗೆ ಸಂದೇಶವನ್ನು ನೀಡುತ್ತಿರುವುದು ಬಹಳ ಸಂತೋಷವಾಗಿದೆ. ಅವರಿಂದ ಇನ್ನು ಹೆಚ್ಚು ಹೆಚ್ಚು ಸಾಮಾಜಿಕ ಕಾರ್ಯ ಮತ್ತು ಕಾಳಜಿ ಜಾಸ್ತಿಯಾಗಲೆಂದು ಹಾರೈಸುತ್ತಾ , ಈ ಒಂದು ಪರಂಪರೆ ಇನ್ನೂ ಹೆಚ್ಚು ಹೆಚ್ಚು ಬೆಳೆಯಲಿ ಪ್ರತಿಯೊಬ್ಬ ಹುಟ್ಟುಹಬ್ಬ ಆಚರಣೆಯು ವಿಶೇಷವಾಗಿ ದೀನದಲಿತ ಬಡ ಮಕ್ಕಳ ಸಯ ಅಭಿವೃದ್ಧಿಗೆ ಪ್ರತಿಯೊಬ್ಬರು ಶ್ರಮಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲಾ ಮುಖ್ಯ ಶಿಕ್ಷಕ ಅವದೂತ್ ಆಸ್ರಿತ್, ಶಿಕ್ಷಕಿ ರತ್ನವ್ವ ಮಾಲಿಗೌಡ್ರ, ಶೈಲಜಾ ಕುಲಕರ್ಣಿ, ಜಯಪ್ರದ ಅಸೂಟಿ, ಶಾಲಾ ಬಿಸಿ ಊಟದ ಜಯಶ್ರೀ, ಅನಸೂಯಾ, ಉಪಸ್ಥಿತರಿದ್ದರು.

# ಮನರೇಗಾ: ಕಾಂಗ್ರೆಸ್‌ನಿಂದ ಉಪವಾಸ ಸತ್ಯಾಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಗ್ರಾಮೀಣ ಬಡವರ ಜೀವನಾಧಾರವಾಗಿರುವ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (MGNREGA) ಯನ್ನು ದುರ್ಬಲಗೊಳಿಸಲು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಕ್ರಮಗಳನ್ನು ಕೈಗೊಂಡಿದೆ ಎಂದು ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಲ್ಲಮ ಪ್ರಶಾಂತ್ ಆರೋಪಿಸಿದರು ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಸಮಿತಿ (ನಗರ) ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ವತಿಯಿಂದ ಇಂದು ಮನರೇಗಾ ಬಚಾವ್ ಸಂಗ್ರಾಮ್ ಅಂದೋಲನದ ಅಂಗವಾಗಿ ಒಂದು ದಿನದ ಉಪವಾಸ ಸತ್ಯಾಗ್ರಹವನ್ನು ಆಯೋಜಿಸಲಾಯಿತು.

ಬಳ್ಳಾರಿ ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದ ಎದುರುಗಡೆ ಇರುವ ಮಹಾತ್ಮ ಗಾಂಧೀಜಿ ಪ್ರತಿಮೆಯ ಮುಂದೆ ನಡೆದ ಈ ಸಾಂಕೇತಿಕ ಪ್ರತಿಭಟನೆಯಲ್ಲಿ, ಕಾಂಗ್ರೆಸ್ ನಾಯಕರು ಹಾಗೂ ಕಾರ್ಯಕರ್ತರು ದೊಡ್ಡ ಸಂಖ್ಯೆಯಲ್ಲಿ ಪಾಲ್ಗೊಂಡು ಕೇಂದ್ರ ಸರ್ಕಾರದ ನೀತಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. 20 ವರ್ಷಗಳ ಇತಿಹಾಸ ಹೊಂದಿರುವ ಮನರೇಗಾ ಯೋಜನೆ ದೇಶದ ಕೋಟ್ಯಂತರ ಗ್ರಾಮೀಣ ಕುಟುಂಬಗಳಿಗೆ ಉದ್ಯೋಗ ಭದ್ರತೆ ಒದಗಿಸಿದ್ದು,

ಇಂತಹ ಮಹತ್ವದ ಯೋಜನೆಯನ್ನು ದುರ್ಬಲಗೊಳಿಸುವುದು ಮಹಾತ್ಮ ಗಾಂಧೀಜಿಯ ತತ್ವಗಳು ಮತ್ತು ಆಶಯಗಳಿಗೆ ಅವಮಾನ ಮಾಡಿದಂತೆ ಎಂದು ಅವರು ಆರೋಪಿಸಿದರು.

ಈ ವೇಳೆ ಮಾತನಾಡಿದ ಕಾಂಗ್ರೆಸ್ ಮುಖಂಡರು ಹಾಗೂ ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರು ಗ್ರಾಮೀಣ ಬಡವರು, ಕೃಷಿ ಕಾರ್ಮಿಕರು, ಮಹಿಳೆಯರು ಹಾಗೂ ನಿರುದ್ಯೋಗಿಗಳಿಗೆ ಮನರೇಗಾ ಯೋಜನೆ ಜೀವಾಳವಾಗಿದ್ದು, ಯೋಜನೆಗೆ ಅಗತ್ಯವಿರುವ ಅನುದಾನವನ್ನು ಕಡಿತಗೊಳಿಸುವ ಮೂಲಕ ಬಿಜೆಪಿ ಸರ್ಕಾರ ಜನವಿರೋಧಿ ನೀತಿಗಳನ್ನು ಅನುಸರಿಸುತ್ತಿದೆ ಎಂದು ಹೇಳಿದರು. ಉದ್ಯೋಗ ಸೃಷ್ಟಿ ಕಡಿಮೆಯಾಗುತ್ತಿರುವ ಪರಿಣಾಮವಾಗಿ ಗ್ರಾಮೀಣ ಜನತೆ ಮತ್ತೆ ನಗರಗಳತ್ತ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಮನರೇಗಾ ಯೋಜನೆಯಡಿ ಪ್ರತೀ ಕುಟುಂಬಕ್ಕೆ ಕನಿಷ್ಠ 100 ದಿನಗಳ ಉದ್ಯೋಗವನ್ನು ಖಚಿತಪಡಿಸಬೇಕು,

# ಸ್ವ-ಸಹಾಯ ಸಂಘಗಳ ಉತ್ಪನ್ನ ವೀಕ್ಷಿಸಿದ ಕುರೇರ್



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜಿಲ್ಲೆಯ ಸ್ವ-ಸಹಾಯ ಸಂಘಗಳ ಸದಸ್ಯರು ಉತ್ಪಾದಿಸಿದ ವಿವಿಧ ಉತ್ಪನ್ನಗಳ ಪ್ಯಾಕೇಜಿಂಗ್ ಮತ್ತು ಬ್ರಾಂಡಿಂಗ್‌ಗಳನ್ನು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ವೀಕ್ಷಣೆ ಮಾಡಿ ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಹಮ್ಮಿಕೊಂಡ ವಿವಿಧ ಸ್ವ-ಸಹಾಯ ಸಂಘದ ಸದಸ್ಯರುಗಳು ಉತ್ಪಾದಿಸಿದ ಉತ್ಪನ್ನಗಳ ಪ್ರದರ್ಶನವನ್ನು ವೀಕ್ಷಣೆ ಮಾಡಿ, ಮಹಿಳಾ ಸ್ವ-ಸಹಾಯ ಸಂಘಗಳು ಸ್ಥಳೀಯ ಸಂಪನ್ಮೂಲಗಳನ್ನು ಬಳಸಿ ಗುಣಮಟ್ಟದ ಹಾಗೂ ಮಾರುಕಟ್ಟೆಗೆ ಹೊಂದುವ ಉತ್ಪನ್ನಗಳನ್ನು ತಯಾರಿಸುತ್ತಿರುವುದು ಶ್ಲಾಘನೀಯ ಕಾರ್ಯ ಎಂದರು.

ಇಂತಹ ಉತ್ಪಾದನಾ ಚಟುವಟಿಕೆಗಳು ಗ್ರಾಮೀಣ ಮಹಿಳೆಯರ ಆರ್ಥಿಕ ಸ್ವಾವಲಂಬನೆಯನ್ನು ಹೆಚ್ಚಿಸುವುದರ ಜೊತೆಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತವೆ.

ಮುಂದಿನ ದಿನಗಳಲ್ಲಿ ಉತ್ಪನ್ನಗಳ ಮಾರುಕಟ್ಟೆ ಸಂಪರ್ಕ, ಪ್ಯಾಕೇಜಿಂಗ್ ಮತ್ತು ಬ್ರಾಂಡಿಂಗ್‌ಗೆ ಅಗತ್ಯ ಸಹಕಾರ ನೀಡಲಾಗುವುದೆಂದು ಭರವಸೆ ನೀಡುವುದರ ಜೊತೆಗೆ ನವೀನ ಮಾದರಿಯ ಬ್ರಾಂಡ್ ಉತ್ಪನ್ನಗಳ ಪ್ರಯತ್ನಗಳನ್ನು ಮುಂದುವರಿಸುವಂತೆ ಮಾರ್ಗದರ್ಶನ ನೀಡಿದರು.

ಉತ್ಪನ್ನಗಳ ಆಕರ್ಷಕ ಬ್ರಾಂಡಿಂಗ್ ಮತ್ತು ಗುಣಮಟ್ಟದ ಲೇಬಲಿಂಗ್ ಹಾಕುವ ಮೂಲಕ ಮಾರುಕಟ್ಟೆಯಲ್ಲಿ ಉತ್ತಮ ಸ್ಥಾನವನ್ನು ಪಡೆಯಬಹುದಾಗಿದೆ.

ಎನ್.ಆರ್.ಎಲ್.ಎಂನ ಎಲ್ಲ ಸಿಬ್ಬಂದಿಗಳು ಹಾಗೂ ಸ್ವ-ಸಹಾಯಕ ಸಂಘಗಳ ಸದಸ್ಯರುಗಳು ಉತ್ತಮ ಸಮನ್ವಯದೊಂದಿಗೆ ಕೆಲಸ ಮಾಡುತ್ತಿರುವುದಕ್ಕೆ ತೃಪ್ತಿ ಹಾಗೂ ಪ್ರಶಂಸೆ ವ್ಯಕ್ತಪಡಿಸಿದರು. ಎನ್.ಆರ್.ಎಲ್.ಎಂ ಯೋಜನೆಯ ಯಶಸ್ಸಿಗೆ ಮತ್ತಷ್ಟು ಬಲ ನೀಡುವಂತಾಗಿದ್ದು,

ಮುಂದಿನ ದಿನಗಳಲ್ಲಿ ಮಹಿಳಾ ಸ್ವ-ಉದ್ಯೋಗ ಮತ್ತು ಆದಾಯ ವೃದ್ಧಿಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ನಂತರ ಪರಿಶೀಲನಾ ಸಭೆಯಲ್ಲಿ ಎನ್.ಆರ್.ಎಲ್.ಎಂ ಕಾರ್ಯಕ್ರಮಗಳ ಅನುಷ್ಠಾನ ಸ್ಥಿತಿ, ಸಾಧನೆಗಳು ಹಾಗೂ ಮುಂದಿನ ಕಾರ್ಯಯೋಜನೆಗಳ ಕುರಿತು ವಿವರವಾದ ಚರ್ಚೆ ನಡೆಸಲಾಯಿತು. ಸಭೆಯಲ್ಲಿ ವಿವಿಧ ಬ್ರಾಂಡ್ ಹಾಗೂ ಬ್ಯಾಗ್‌ಗಳನ್ನು ಪ್ರದರ್ಶನ ಮಾಡಲಾಯಿತು. ಸಭೆಯಲ್ಲಿ ಜಿ.ಪಂ ಸಹಾಯಕ ನಿರ್ದೇಶಕ ಎಸ್.ಎಂ.ಕಾಂಬಳೆ, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ ಸೇರಿದಂತೆ ವಿವಿಧ ಸ್ವ-ಸಹಾಯ ಸಂಘದ ಸದಸ್ಯರುಗಳು ಉಪಸ್ಥಿತರಿದ್ದರು.

# ಕನ್ನಡ ಸಾಹಿತ್ಯಕ್ಕೆ ಬೇಂದ್ರೆ ಕೊಡುಗೆ ಅನನ್ಯ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಕನ್ನಡ ಸಾಹಿತ್ಯ ಮತ್ತು ಕಾವ್ಯ ಪ್ರಪಂಚಕ್ಕೆ ವರಕವಿ ದ.ರಾ.ಬೇಂದ್ರೆ ಅವರ ಕೊಡುಗೆ ಅನನ್ಯವಾಗಿದೆ. ಅವರ ಸಾಹಿತ್ಯ ಕೃತಿಗಳು ಜನಸಾಮಾನ್ಯರಿಗೆ ಹತ್ತಿರವಾಗಿದ್ದು ಇಂದಿಗೂ ಜನಪ್ರೀಯವಾಗಿವೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ವಿಭಾಗ ದ.ರಾ.ಬೇಂದ್ರೆ ಜನ್ಮ ದಿನದ ಅಂಗವಾಗಿ ಶನಿವಾರ ಹಮ್ಮಿಕೊಂಡಿದ್ದ ಪುಸ್ತಕ ಪ್ರದರ್ಶನ ದಿನಾಚರಣೆ ಮತ್ತು ಗೀತಗಾಯನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರಳ ಭಾಷೆ, ಜಾನಪದ ಸೊಗಡಿನ ಹಾಗೂ ಅನುಭವದ ಆಳದಿಂದ ಬಂದ ಅವರ ಕವನಗಳು ಓದುಗರ ಗಮನವನ್ನು ಸೆಳೆಯುತ್ತವೆ. ಸಾಹಿತ್ಯ ಲೋಕಕ್ಕೆ ಅವರು ನೀಡಿದ ಕೊಡುಗೆಯನ್ನು ಸ್ಮರಿಸುವುದೇ ಅವರ ಹುಟ್ಟು ಹಬ್ಬಕ್ಕೆ ನೀಡುವ ಯೋಗ್ಯ ಕಾಣಿಕೆ-ಯಾಗಿದೆ ಎಂದ ನರಗುಂದ, ವಿದ್ಯಾರ್ಥಿಗಳು ಅವರ ಬದುಕು-ಬರಹದಿಂದ ಪ್ರೇರಣೆ ಪಡೆದು ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದರು.



ಸಾಹಿತ್ಯದ ಬಗ್ಗೆ ಅಭಿರುಚಿಯನ್ನು ಬೆಳೆಸಿಕೊಳ್ಳಬೇಕು. ಬೇಂದ್ರೆಯಂತಹ ಸಾಹಿತಿಗಳ ಸಾಹಿತ್ಯ ಕೃತಿಗಳ ಅಧ್ಯಯನ ಮಾಡಿ ಅವುಗಳಲ್ಲಿನ ಮೌಲ್ಯವನ್ನು ಅರಿತು ಅವುಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಉತ್ತಮ ಕೃತಿಗಳ ಅಧ್ಯಯನದಿಂದ ಉತ್ತಮ ವ್ಯಕ್ತಿತ್ವ ಬೆಳೆಸಿಕೊಳ್ಳಲು ಸಾಧ್ಯ ಎಂದರು.

ಕನ್ನಡ ಉಪನ್ಯಾಸಕ ಕೃಷ್ಣ ಲಮಾಣಿ ಮತ್ತು ವಿದ್ಯಾರ್ಥಿ ಗಾಯತ್ರಿ ಮಡಿವಾಳರ ಬೇಂದ್ರೆ ಅವರ ಬದುಕು-ಬರಹ ಕುರಿತು ಮಾತನಾಡಿದರು.

ಉಪನ್ಯಾಸಕರಾದ ಎಂ.ಡಿ.ಕೋರವಾರ, ಕೀರ್ತಿದಾಸರ, ವಿದ್ಯಾರ್ಥಿಗಳಾದ ತುಳಸವ್ವ ಹಲಕುರ್ಕಿ, ಸ್ನೇಹಾ ಅರಬಿ ಮತ್ತು ರಕ್ಷಿತಾ ಮಸೂತಿ ಬೇಂದ್ರೆ ವಿರಚಿತ ಗೀತೆಗಳನ್ನು ಸಾದರಪಡಿಸಿದರು.

ಉಪನ್ಯಾಸಕಿ ಗೀತಾ ಕಿಲಬನೂರ ಸ್ವಾಗತಿಸಿದರು. ಸಾಲಿಯಾ ಮೋಮಿನ್ ನಿರೂಪಿಸಿದರು. ದಿಲ್‌ಶಾದ್ ನದಾಫ್ ವಂದಿಸಿದರು. ಬೇಂದ್ರೆ ಕುರಿತ ವಿಡಿಯೋ ಕ್ಲಿಪಿಂಗ್‌ನ್ನು ಎಲ್‌ಸಿಡಿ ಮೂಲಕ ವಿದ್ಯಾರ್ಥಿಗಳಿಗೆ ತೋರಿಸಲಾಯಿತು. ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ಇದ್ದರು.

# ಒಗ್ಗಟ್ಟಿನಿಂದ ಬಾಳಿದರೆ ಎಲ್ಲವನ್ನೂ ಪಡೆಯಬಹುದು: ಗೋಪಾಲ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಸಮಯಸ್ಫೂರ್ತಿ ಇರುವವರು ನಾಯಕರಾಗುತ್ತಾರೆ ಸಮಯ ಪರಿಪಾಲನೆ ಮಾಡುವುದನ್ನು ಮೊದಲು ಕಲಿಯಬೇಕು ಎಂದು ಬಾಬಾಸಾಹೇಬ ಅಂಬೇಡ್ಕರ್ ಹೇಳಿದ್ದು ನಾವುಗಳು ಆ ದಿಸೆಯಲ್ಲಿ ಮುನ್ನಡೆಯಬೇಕಿದೆ ಎಂದು ಕರ್ನಾಟಕ ಬುದ್ಧ ಧಮ್ಮ ಸಮಿತಿಗಳ ಒಕ್ಕೂಟದ ಗೌರವಾಧ್ಯಕ್ಷ ಬಿ.ಗೋಪಾಲ ಹೇಳಿದರು.

ನವನಗರದ ಅಂಬೇಡ್ಕರ ಭವನದಲ್ಲಿ ಬೌದ್ಧ ವಿಹಾರ ನಿರ್ಮಾಣ ಸಂಸ್ಥೆ ಹಮ್ಮಿಕೊಂಡಿದ್ದ ಬುದ್ಧ ಧಮ್ಮ ಕುರಿತು ಚಿಂತನ-ಮಂಥನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬಾಬಾಸಾಹೇಬರಿಂದ ಬಹಳ ಕಲಿಬೇಕಾಗಿದೆ. ಮಹಾನ ಪುರುಷರು ಹೇಳಿದ ಮಾರ್ಗಗಳನ್ನು ಅನುಸರಿಸಿಬೇಕು ಹೊರತು ನಮ್ಮದೆ ಅನುಕರಣೆ ಮಾರ್ಗ ಬೇಡ ಎಂದರು.

ಅನ್ಯಾಯದ ವಿರುದ್ಧ ಹೋಗಬೇಕಾದ ನಾವು ಪುಲೆ, ಬುದ್ದ ಹಾಗೂ ಅಂಬೇಡ್ಕರ್ ಅವರುಗಳ ವಿರುದ್ಧ ಹೊರಟಿದ್ದೇವೆ. ವ್ಯವಸ್ಥೆ ವಿರುದ್ಧ ಹೋಗದೇ ಹೊಂದಾಣಿಕೆಗೆ ಮಣೆ ಹಾಕುತ್ತಿದ್ದೇವೆ. ಇದು ನಮ್ಮ ವೈಪಲ್ಯ ಎಂದು ವಿಷಾದಿಸಿದ ಗೋಪಾಲ, ಇನ್ನು ಮುಂದೆ ಇಂತಹ ತಪ್ಪನ್ನು ಮಾಡಬೇಡಿ ಎಂದು ಕರೆ ನೀಡಿದರಲ್ಲದೇ, ನಮ್ಮಲ್ಲಿ ಒಗ್ಗಟ್ಟು ಇರದೇ ಇರುವದಕ್ಕಾಗಿಯೇ ಇವರೆಗೂ ನಾವು ರಾಜ್ಯದಲ್ಲಿ ಮುಖ್ಯಮಂತ್ರಿ ಆಗುತ್ತಿಲ್ಲ ಎಂದು ಹೇಳಿದರು.

ಕರ್ನಾಟಕ ಬುದ್ಧ ಧಮ್ಮ ಸಮಿತಿಗಳ ಒಕ್ಕೂಟದ ಉತ್ತರ ಕರ್ನಾಟಕದ ಮೊದಲ ಕಾರ್ಯಕ್ರಮ ಇದಾಗಿದೆ. ರಾಜ್ಯಾದ್ಯಂತ ಎಲ್ಲ ಕಡೆ ಇಂತಹ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗುತ್ತದೆ. ಬುದ್ದಗಯಾ ಮರಳಿ ಪಡೆಯಲು ಹೋರಾಟ ಮಾಡಲಾಗುತ್ತಿದೆ ಫೆ.12ರಂದು ನವದೆಹಲಿಯಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಪ್ರಧಾನಿಗೆ ಮನವಿ ಸಲ್ಲಿಸಲಾಗುತ್ತಿದೆ ಎಂದರು.

ಉಪನ್ಯಾಸ ನೀಡಿದ ಶಿವಮೊಗ್ಗದ ಪ್ರೊ.ರಾಚಪ್ಪ ಮಾತನಾಡಿ, ನಾವುಗಳು ಗಂಭೀರವಾದ ದಾರಿಯಲ್ಲಿ ನಿಂತಿದ್ದೇವೆ. ಅಂಬೇಡ್ಕರ ಅವರು ಪ್ರಾಚೀನ ಭಾರತದಲ್ಲಿ ಕ್ರಾಂತಿ ಮತ್ತು ಪ್ರತಿಕ್ರಾಂತಿ ಪುಸ್ತಕ ಬರೆದಿದ್ದಾರೆ. ಅದರಲ್ಲಿ ನಾವು ಮೂಲತಃ ಬೌದ್ಧರಾಗಿದ್ದಿವಿ. ನಮ್ಮ ಸಂಸ್ಕೃತಿ ಹೈಜಾಕ್ ಮಾಡಿ ಬೇರೆಯವರು ಮುಂದುವರಿದ್ದಿದಾರೆ. ಇತಿಹಾಸ ಮರೆತು ಅವರ ಅಡಿಯಾಳಾಗಿ ಜೀವನ ಸಾಗಿಸುತ್ತಿದ್ದೇವೆ ಎಂದು ಹೇಳಿದರು.

ದಿವ್ಯ ಸಾನಿಧ್ಯವನ್ನು ಆಯುಷ್ಮಾನ ಮನೋರ ರಕ್ಷಿತ ಬಂತೇಜಿ ವಹಿಸಿ ಮಾತನಾಡಿ, ಬುದ್ಧರು ಬುದ್ಧಿಯನ್ನು ಉಪಯೋಗಿಸುವುದನ್ನು ಕಲಿಯಿರಿ. ಜೀವನ ಪರಿಶುದ್ಧವಾಗಿರಲಿ, ಬುದ್ದ ಜ್ಞಾನೋದಯದ ಸಂಕೇತವಾಗಿದ್ದಾರೆ. ಅಂಬೇಡ್ಕರ್ ಪುಸ್ತಕ ಓದಿದರೆ ಅವರ ಜೊತೆ ಮಾತನಾಡಿದಂತಾಗುತ್ತದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಬಸವರಾಜ ಬದಾಮಿ, ಇಂತಹ ಕಾರ್ಯಕ್ರಮಗಳು ಮೇಲಿಂದ ಮೇಲೆ ನಡೆಯಬೇಕು ಎಂದರು.

ಇದೇ ಸಂದರ್ಭದಲ್ಲಿ ಡಾ.ಕುಲಪತಿ ಹಿಪ್ಪರಗಿ, ಡಾ.ಜಯಪ್ರಕಾಶ ಬೀಳಗಿ, ಡಾ.ಅನ್ನಪೂರ್ಣ ಹಿರೇಮನಿ ಅವರುಗಳನ್ನು ಸನ್ಮಾನಿಸಲಾಯಿತು. ಪ್ರೇಮನಾಥ ಗರಸಂಗಿ, ಸದಾಶಿವ ಕೊಡಬಾಗಿ, ಸಂಜೀವಯ್ಯ ಕಾಂಬಳೆ, ಮಹೇಶ ಬೀಳಗಿ ಉಪಸ್ಥಿತರಿದ್ದರು.

## ಹಸ್ತಪ್ರತಿ ಸಮ್ಮೇಳನದ ಸಮಾರೋಪ

# ದೇಶದ ಎಲ್ಲ ಶಾಸ್ತ್ರಗಳ ಮೂಲವೇ ಹಸ್ತಪ್ರತಿ : ಪ್ರೊ.ವೆಂಕಟೇಶ

• **ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ:**

ಹಳೆಗನ್ನಡ, ಶಾಸನಗಳು, ಹಸ್ತಪ್ರತಿಗಳು ಜ್ಞಾನದ ಅಧ್ಯಯನದ ಮೂಲ ಬೇರುಗಳಾಗಿವೆ. ಆ ಮೂಲ ಬೇರುಗಳ ಕುರಿತು ಪ್ರಸ್ತುತ ಕಾಲಘಟ್ಟದಲ್ಲಿ ಅಧ್ಯಯನದ ಅವಶ್ಯಕತೆ ಇದೆ, ಇವು ದೇಶದ ಆಸ್ತಿಯಾಗಿದ್ದು ರಕ್ಷಣೆ ಮಾಡುವ ಕೆಲಸವಾಗಬೇಕು ಎಂದು ಅಖಿಲ ಕರ್ನಾಟಕ 22ನೇ ಹಸ್ತಪ್ರತಿ ಸಮ್ಮೇಳನಾಧ್ಯಕ್ಷ ಪ್ರೊ. ಮಲ್ಲೇಪುರಂ ಜಿ.ವೆಂಕಟೇಶ ಹೇಳಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯ ಹಸ್ತಪ್ರತಿ ವಿಭಾಗ ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜು ನವನಗರ ಇವರ ಸಂಯುಕ್ತ ಆಶ್ರಯದಲ್ಲಿ ಕಾಲೇಜಿ ವಿಶ್ವಮಾನವ ಸಭಾ ಭವನದಲ್ಲಿ ಎರಡು ದಿನಗಳ ಕಾಲ ನಡೆದ ಅಖಿಲ ಕರ್ನಾಟಕ 22ನೇ ಹಸ್ತಪ್ರತಿ ಸಮ್ಮೆಳನದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ನಮ್ಮ ನಾಡಿನ ಹಾಗೂ ವಿಶ್ವದ ಪ್ರಾಚೀನ ಸಂಸ್ಕೃತಿಯನ್ನು ತಿಳಿಯಬೇಕಾದರೆ ನಮಗೆ ಹಸ್ತಪ್ರತಿಗಳ ಅಧ್ಯಯನದ ಅವಶ್ಯಕತೆ ಇದೆ. ಕಾವ್ಯ, ಶಾಸ್ತ್ರ, ನಾಟಕ ಸಾಹಿತ್ಯ, ಊರಿನ ಸಾಮಾಜಿಕ-ಸಾಂಸ್ಕೃತಿಕ ವಿವರಗಳನ್ನು ಒಳಗೊಂಡ ಬರಹ, ಶಾಸನಗಳು ಸ್ಥೂಲವಾಗಿ ಹಸ್ತಪ್ರತಿ ಎನ್ನುತ್ತೇವೆ. ವಿಶ್ವದ ಸಾಂಸ್ಕೃತಿಕ ಚರಿತ್ರೆಯನ್ನು ತಿಳಿಯಲು ಈ ಹಸ್ತಪ್ರತಿಗಳ ಅವಶ್ಯವಾಗಿದ್ದು ಅವುಗಳ ರಕ್ಷಣೆ ಅಗತ್ಯವಾಗಿವೆ ಎಂದರು.

ಬೆಂಗಳೂರಿನ ಹಿರಿಯ ವಿದ್ವಾಂಸ ಡಾ.ನಾ.ಗೀತಾಚಾರ್ಯ ಮಾತನಾಡಿ, ದೇಶದಲ್ಲಿಯೇ ಹಸ್ತಪ್ರತಿಗಳ ಸಂಗ್ರಹ ಅವುಗಳ ಅಧ್ಯಯನ ಮಾಡುತ್ತಾ ಸಮ್ಮೇಳನ ಮೂಲಕ ಜನರಲ್ಲಿ



ಜಾಗೃತಿ ಮೂಡಿಸುತ್ತಿರುವ ಹಂಪಿ ಕನ್ನಡ ವಿಶ್ವವಿದ್ಯಾಲಯ ಹಾಗೂ ಹಸ್ತಪ್ರತಿ ವಿಭಾಗದ ಕಾರ್ಯ ಶ್ಲಾಘನೀಯವಾಗಿದೆ, ಇದು ದೇಶದಲ್ಲಿ ಏಕೈಕ ವಿಶ್ವವಿದ್ಯಾಲಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ, ಕನ್ನಡ ವಿಶ್ವವಿದ್ಯಾಲಯ ಹಸ್ತಪ್ರತಿ ವಿಭಾಗ ಹಸ್ತಪ್ರತಿ ಸಂಗ್ರಹ ಮಾಡುವಾಗ ಬಾಗಲಕೋಟೆ ಮುಳಗಡೆ ಪ್ರದೇಶದಲ್ಲಿ ಅಲೆದಾಡಿದ ಅನುಭವ ಹಂಚಿಕೊಂಡರು. ಹಸ್ತಪ್ರತಿಗಳ ಸಾಂಸ್ಕೃತಿಕವಾಗಿ ಮಾನಸಿಕವಾಗಿ ನಮ್ಮಲ್ಲಿ ಜ್ಞಾನವನ್ನು ಜಾಗೃತಿಗೊಳಿಸುತ್ತಾ ಬಂದಿವೆ. ಹಸ್ತಪ್ರತಿ ಅಧ್ಯಯನದಲ್ಲಿ ಇಂದಿನ ಯುವಸಮೂಹ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಬೇಕು. ಹಸ್ತಪ್ರತಿ ವಿಭಾಗವು ಸತತವಾಗಿ 34 ವರ್ಷಗಳಿಂದ ಹಸ್ತಪ್ರತಿ ಕ್ಷೇತ್ರವನ್ನು ಪುನರುಜ್ಜೀವನಗೊಳಿಸುವ ಪ್ರಯತ್ನ ಮಾಡುತ್ತಿದೆ ಎಂದರು. ಡಾ.ಶರಣಗೌಡ ಪಾಟೀಲ ಅವರು ಮಾತನಾಡಿ ಹಂಪಿ ಕನ್ನಡ ವಿಶ್ವವಿದ್ಯಾಲದ ಹಸ್ತಪ್ರತಿ ವಿಭಾಗ ನಿರಂತರವಾಗಿ ಮಾಡುತ್ತಿರುವ ಕನ್ನಡ ಕಾರ್ಯ ಮೆಚ್ಚಿಗೆ ಪಡೆದುಕೊಂಡಿದೆ ಎಂದರು. ಹಸ್ತಪ್ರತಿ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ವೀರೇಶ ಬಡಿಗೇರ ಹಾಗೂ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಅವರು ಸಮ್ಮೇಳನದ ಯಶಸ್ವಿಗೆ ಶ್ರಮಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿ ಮಾತನಾಡಿದರು.

ಎರಡು ದಿನಗಳ ಕಾಲ ನಡೆದ ಸಮ್ಮೇಳನದಲ್ಲಿ ಭಾಗವಹಿಸಿದ ವಿವಿಧ ಕಾಲೇಜುಗಳ ಉಪನ್ಯಾಸಕರಿಗೆ, ಪ್ರಾಧ್ಯಾಪಕರಿಗೆ, ಸಂಶೋಧನಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

# ಗ್ರಾ, ಪಂ, ಆಡಳಿತಾಧಿಕಾರಿಗಳ ನೇಮಕ ಅಧಿಕಾರ ಹಂಚಿಕೆ




• **ಮಲ್ಲಮ್ಮ ನುಡಿ ವಾರ್ತೆ ಕುಕನೂರು:**

ರಾಜ್ಯದಲ್ಲಿ ಅವಧಿಪೂರ್ಣಗೊಂಡಿರುವ ಗ್ರಾಮಪಂಚಾಯತಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಆಡಳಿತಾಧಿಕಾರಿಯನ್ನು ನೇಮಿಸಲು ಆದೇಶಿಸಿರುವ ಸರ್ಕಾರ ಆಡಳಿತಾಧಿಕಾರಿಗಳಿಗೆ ಅಧಿಕಾರ ಹಂಚಿ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದ್ದು, ಅದರಂತೆ ತಾಲೂಕಿನ 15 ಗ್ರಾಮ ಪಂಚಾಯಿತಿಗಳಿಗೆ ಆಡಳಿತ ಅಧಿಕಾರಿಯಾಗಿ ನೇಮಕಗೊಂಡಿದ್ದಾರೆ ಜೊತೆಗೆ ಜೊತೆಗೆ ಅಧಿಕಾರವೂ ಕೂಡ ವಹಿಸಿಕೊಂಡಿದ್ದಾರೆ.

ಮಂಡಲಗಿರಿ ಗ್ರಾಮ ಪಂಚಾಯಿತಿಗೆ ಆಡಳಿತಧಿಕಾರಿ ಆಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶಶಿಧರ್ ಸಕ್ರಿ ಅಧಿಕಾರ ವಹಿಸಿಕೊಂಡರು.

ಯಲಬುರ್ಗಾ-ಕುಕನೂರು ಅವಳಿ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶಶಿಧರ್ ಸಕ್ರಿ ಅವರು ಒಟ್ಟು ಮೂರು ಗ್ರಾಮ ಪಂಚಾಯಿತಿಯ ಅಧಿಕಾರವನ್ನು ವಹಿಸಿಕೊಂಡಿದ್ದಾರೆ. ಹಿರೇಬಿಡ್ನಾಳ ಯರೇಹಂಚಿನಾಳ, ಮಂಡಲಗಿರಿ ಗ್ರಾಮ ಪಂಚಾಯಿತಿಗಳ ಆಡಳಿತ ಅಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

ಅದರಂತೆ ಭಾನಾಪುರ್, ಬಳಗೇರಿ, ಮಂಗಳೂರು, ಈ ಗ್ರಾಮ ಪಂಚಾಯಿತಿಗಳಿಗೆ ಆಡಳಿತ ಅಧಿಕಾರಿಯಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯತ್ ಸಂತೋಷ್ ಪಾಟೀಲ್ ಬಿರಾದಾರ್ ಅಧಿಕಾರ ವಹಿಸಿಕೊಂಡಿದ್ದಾರೆ. ರಾಜೂರು ತಳಕಲ್ ಶಿರೂರು ಈ ಗ್ರಾಮ ಪಂಚಾಯಿತಿಗಳಿಗೆ ತಾಲೂಕು ಯೋಜನಾಧಿಕಾರಿಗಳು ಆಡಳಿತ ಅಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿದ್ದು, ಜೊತೆಗೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಎಂಜಿನಿಯರಿಂಗ್ ಉಪ ವಿಭಾಗ ಯಲಬುರ್ಗಾ ಇವರು ಬನ್ನಿಕೊಪ್ಪ, ನೆಲಜೇರಿ, ಇಟಗಿ ಗ್ರಾಮ ಪಂಚಾಯಿತಿಗಳಿಗೆ ಆಡಳಿತ ಅಧಿಕಾರಿಯಾಗಿ ಅಧಿಕಾರ ತೆಗೆದು-ಕೊಂಡಿದ್ದಾರೆ. ಮಸಬಹಂಚಿನಾಳ, ಕುದ್ರಿಮೋತಿ, ಬೆಣಕಲ್ ಗ್ರಾಮ ಪಂಚಾಯಿತಿಗಳಿಗೆ ತಾಲೂಕು ವಲಯ ಅರಣ್ಯ ಅಧಿಕಾರಿ ಯಲಬುರ್ಗಾ ಇವರು ಅಧಿಕಾರ ವಹಿಸಿಕೊಂಡಿದ್ದಾರೆ.

ಈ ನೇಮಕಾತಿಗೊಂಡ ಅಧಿಕಾರಿಗಳು ಅಧಿಕಾರ ವಹಿಸಿಕೊಂಡಿರುವ ದಿನಾಂಕದಿಂದ ಆಡಳಿತಾಧಿಕಾರಿಗಳ ಪ್ರಭಾರವನ್ನು ವಹಿಸಿಕೊಂಡು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಲು ಮತ್ತು ಗ್ರಾಮ ಪಂಚಾಯತಿಗಳ ಸಾರ್ವತ್ರಿಕ ಚುನಾವಣೆಗಳ ನಂತರ ಗ್ರಾಮ ಪಂಚಾಯತಿಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆ ಮುಕ್ತಾಯವಾದ ಬಳಿಕ ಹೊಸದಾಗಿ ಆಯ್ಕೆಯಾದ ಅಧ್ಯಕ್ಷರಿಗೆ ಅಧಿಕಾರವನ್ನು ಹಸಾಂತರಿಸುವವರೆಗೆ ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿಯ ಅಧಿಕೃತ ಆದೇಶದ ಪ್ರತಿ ಉಲ್ಲೇಖವಾಗಿದೆ. ಜಿಲ್ಲಾಧಿಕಾರಿಯ ಅಧಿಕೃತ ಆದೇಶದ ಪ್ರತಿ

# ಉತ್ಸವದ ಜ್ಯೋತಿ ರಥಯಾತ್ರೆಗೆ ವಿದ್ಯುಕ್ತ ಚಾಲನೆ



• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಅಂಗವಾಗಿ ಜಿಲ್ಲಾಡಳಿತ ರೂಪಿಸಿರುವ ಜ್ಯೋತಿ ರಥಯಾತ್ರೆಗೆ ಫೆಬ್ರವರಿ 01ರಂದು ಚಾಲನೆ ಸಿಕ್ಕಿತು. ನಗರದ ಐತಿಹಾಸಿಕ ಕರ್ನಾಟಕ ಸಂಘದ ಆವರಣದಿಂದ ರಥಯಾತ್ರೆ ಆರಂಭಗೊಂಡಿತು. ರಥಯಾತ್ರೆ ಚಾಲನೆ ಹಿನ್ನೆಲೆಯಲ್ಲಿ ಕರ್ನಾಟಕ ಸಂಘದ ಆವರಣದಲ್ಲಿ ಬೆಳಗ್ಗೆ ಹಬ್ಬದ ಸಂಭ್ರಮ ಕಂಡು ಬಂದಿತು. ಹೂವು, ತಳಿರು ತೋರಣಗಳಿಂದ ಶೃಂಗರಿಸಿದ್ದ ರಥವು ಗಮನ ಸೆಳೆಯಿತು. ಆಶಾ ಮತ್ತು ಅಂಗನವಾಡಿ ಕಾರ್ಯಕತೆ-ರ್ಯರು ಒಂದೇ ಬಣ್ಣದ ಸೀರೆ ಧರಿಸಿ ಆಗಮಿಸಿ ಕಾರ್ಯಕ್ರಮದ ಕಳೆ ಹೆಚ್ಚಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಈ ರಥಯಾತ್ರೆಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಚಾಲನೆ ನೀಡಿದರು.

ಜಿಲ್ಲಾಡಳಿತದ ಸೂಚನೆ ಹಿನ್ನೆಲೆ, ರಜೆ ದಿನವಾದ ಭಾನುವಾರವೂ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ತಮ್ಮತಮ್ಮ ಕಚೇರಿಯ ಸಿಬ್ಬಂದಿಯೊಂದಿಗೆ ಆಗಮಿಸಿದ್ದರು.

ಜ್ಯೋತಿ ರಥಯಾತ್ರೆ ಕಾರ್ಯಕ್ರಮದಲ್ಲಿ ಶಾಲಾ-ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಥಯಾತ್ರೆಯನ್ನು ಯಶಸ್ವಿಗೊಳಿಸಿದರು. ನಗರದ ಪ್ರಮುಖ ರಸ್ತೆಗಳಲ್ಲಿ ಜಾಥಾ: ನಗರದ ಬಂಗಾರ ಬಜಾರ್, ಸದರ್ ಬಜಾರ್, ಹಳೆ ನಗರಸಭೆ ಕಚೇರಿ ಮುಂಭಾಗ, ಕೇಂದ್ರ ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತ ಮಾರ್ಗವಾಗಿ ಬಸವೇಶ್ವರ ವೃತ್ತದ ಮೂಲಕ ಮಾನವಿಯತ್ತ ಹೊರಟಿತು. ಈ ಜ್ಯೋತಿ ರಥಯಾತ್ರೆಯು ಮಾನವಿ,

ಸಿಂಧನೂರ, ಮಸ್ಕಿ, ಲಿಂಗಸೂರು, ಕವಿತಾಳ, ದೇವದುರ್ಗ, ಗಬ್ಬೂರ, ಅರಕೇರಾ, ಸಿರವಾರ ಸೇರಿದಂತೆ ಫೆ.5ರವರೆಗೆ ಜಿಲ್ಲೆಯಾದ್ಯಂತ ಬೇರೆ ಕಡೆಗಳಲ್ಲಿ ಸಂಚರಿಸಲಿದೆ. ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಸಂತೋಷ ರಾಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಜಯಪ್ರಕಾಶ್ ಚವ್ಹಾಣ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧು ಆರ್. ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ರಾಯಚೂರು ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

# ಪ್ರಾಮಾಣಿಕ ಕಾರ್ಯಕರ್ತ ಪಕ್ಷದ ಜೀವಾಳ

• **ಮಲ್ಲಮ್ಮ ನುಡಿ ವಾರ್ತೆ ಸೈದಾಪೂರ:**

ಪಕ್ಷಕ್ಕಾಗಿ ದುಡಿಯುತ್ತಿರುವ ಪ್ರಾಮಾಣಿಕ ಕಾರ್ಯಕರ್ತರೇ ಪಕ್ಷದ ಜೀವಾಳವಾಗಿದ್ದು ಅವರ ಸಮಸ್ಯೆಗಳಿಗೆ ಸ್ಪಂದಿಸಿ ಪ್ರತಿಯೊಬ್ಬರ ಹಿತ ಕಾಯುವುದು ನಮ್ಮ ಕರ್ತವ್ಯ ಎಂದು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಕೆಪಿಸಿಸಿ ಸದಸ್ಯ ಹಾಗೂ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಸದಸ್ಯ ಶರಣಪ್ಪ ಡಿ ಮಾನೇಗಾರ ಅವರು ಅಭಿಪ್ರಾಯ ಪಟ್ಟರು.



ಗುರುಮಠಕಲ್ ಮತಕ್ಷೇತ್ರದ ಸೈದಾಪೂರ ಬ್ಲಾಕ್ ವ್ಯಾಪ್ತಿಯಲ್ಲಿ ಬರುವ ವಿವಿಧ ಹಳ್ಳಿಗಳ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಮನೆಗಳಿಗೆ ಭೇಟಿ ನೀಡಿ ಕುಶಲೋಪರಿ ವಿಚಾರಿಸಿ ಅವರು ಮಾತನಾಡಿದರು.

ನಿಷ್ಠಾವಂತ ಕಾರ್ಯಕರ್ತರ ದುಃಖದಲ್ಲಿ ಭಾಗಿಯಾಗಿ, ಅವರಿಗೆ ಮಾನಸಿಕ ಬೆಂಬಲ ನೀಡಿ ಆಪ್ತವಾಗಿ ಮಾತನಾಡಿ ಧೈರ್ಯ ತುಂಬುವುದು ನಮ್ಮ ಆದ್ಯ ಕರ್ತವ್ಯ ಆಗಿದೆ ಎಂದರು.

ನೀಲಹಳ್ಳಿ ಗ್ರಾಮದ ಸಿದ್ರಾಮಪ್ಪ ಬಾಗ್ಲಿ, ಮಲ್ಲೇಶ ಪಾಪಣ್ಣೋರ್, ಬೆಳಗುಂದಿ ಗ್ರಾಮದ ಮಾಜಿ ತಾಲೂಕು ಪಂಚಾಯತಿ ಸ್ಥಾಯಿ ಸಮಿತಿ ಅಧ್ಯಕ್ಷ ಹಂಪಣ್ಣಗೌಡ ಪೊಲೀಸ್ ಪಾಟೀಲ, ತೋರಣತಿಪ್ಪ ಗ್ರಾಮದ ಶ್ರೀನಿವಾಸ ಗೂಡೆಬಳ್ಳೂರು, ಬದ್ದೆಪಲ್ಲಿ ಗ್ರಾಮದ ಸೌರಪ್ಪ, ಅಜಲಾಪುರ ಗ್ರಾಮದ ಹುಸೇನಪ್ಪ ಕಾರ್ಯಕರ್ತರ ಮನೆಗಳಿಗೆ ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದರು.

ನೀಲಹಳ್ಳಿ ಗ್ರಾಮದ ಮಲ್ಲಯ್ಯನ ದೇವಸ್ಥಾನ, ನರಸಪ್ಪನ ಗುಡಿ, ದೊಡ್ಡಸಂಭ್ರ ಗ್ರಾಮದ ರೇಣುಕಾ ಯಲ್ಲಮ್ಮ ದೇವಸ್ಥಾನ, ಅಜಲಾಪೂರ ಗ್ರಾಮದ ಭೀಮರಾಯ ದೇವಸ್ಥಾನ, ಬದ್ದೆಪಲ್ಲಿ ಗ್ರಾಮದ ಮಹಿಬೂಬ್ ಸುಭಾನಿ ದರ್ಗಾಕ್ಕೆ ಭೇಟಿ ನೀಡಿ ದರ್ಶನ ಪಡೆದರು.

ಈ ಸಂದರ್ಭದಲ್ಲಿ ಯಾದಗಿರಿ ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಚಮರೆಡ್ಡಿ ಬೆನಕನಹಳ್ಳಿ, ಮಾಜಿ ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಸುದರ್ಶನ ಪಾಟೀಲ್ ಜೈಗ್ರಾಮ, ಹಣಮಂತ ದೊಡ್ಡಮನಿ, ಜಗದೀಶ್ ಸಜ್ಜನ್, ದೇವಪ್ಪ ಗೌಡ ರಾಚನಳ್ಳಿ, ಬನ್ನಪ್ಪ ಹುಲಿಬೆಟ್ಟ ಸೌರಾಷ್ಟಹಳ್ಳಿ, ಸಾಹೇಬ್ ಹುಸೇನಿ ನೀಲಹಳ್ಳಿ, ಡಾ. ಮೈಮುದ್ ಬಡಿಗೇರ್ ಬದ್ದೇಪಲ್ಲಿ, ರಘುಪತಿ ಗೌಡಗೇರಿ, ಮಲ್ಲು ಮಾಳಿಕೇರಿ, ಮಲ್ಲಯ್ಯ ಮೈಲಾಪುರ, ಬಸಲಿಂಗಪ್ಪ ನಾಯಕ ನೀಲಹಳ್ಳಿ, ಬಸವಂತ ಬೆಳಗುಂದಿ, ಶಿವಶಂಕರ ಬಾಗ್ಲಿ ನೀಲಹಳ್ಳಿ, ಸೈದಾಪುರ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಆಂಜನೇಯ ಕಟ್ಟಿಮನಿ, , ಬ್ಲಾಕ್ ಪ್ರಚಾರ ಸಮಿತಿ ಅಧ್ಯಕ್ಷ ವಿಜಯ ಕಂದಳ್ಳಿ, ವೀರೇಶ್ ಸಜ್ಜನ ಕಡೇಚೂರ, ಮಣಿ ಕ್ಯಾತನಾಳ, ಸಚಿನ್ ಸೈದಾಪುರ , ವೆಂಕಟೇಶ ನಾಯಕ ಕೂಡ್ಲೂರ, ಪುಂಡಲಿಕಗೊಂದೆಡಗಿ, ತಿಮ್ಮಣ್ಣರೆಡ್ಡಿ ಬೆಳಗುಂದಿ, ಭೀಮರಾಯ ಉಜ್ಜೆಲಿ , ಮಂಜುನಾಥ ಮೇತ್ರಿ ಮಲ್ಹಾರ, ಸಾಬು ಪೂಜಾರಿ ರಾಂಪುರ, ಸಿದ್ದು ನಾಯಕ, ಸತೀಶ್ ಕಣೇಕಲ್, ಇನ್ನೂ ಮುಂತಾದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಶರಣಪ್ಪ ಮಾನೇಗಾರ ಅಭಿಮಾನಿಗಳು ಉಪಸ್ಥಿತರಿದ್ದರು.

# ಸಿ.ಎಂ: ಸಿದ್ಧತೆ ಪರಿಶೀಲಿಸಿದ ಜಿಲ್ಲಾಧಿಕಾರಿಗಳು

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಬ್ರಹ್ಮಲೀನರಾದ ಪರಮಪೂಜ್ಯ ಶ್ರೀಸಿದ್ದರಾಮನಂದಪುರಿ ಸ್ವಾಮಿಜಿಯವರ ಪುಣ್ಯಾರಾಧನೆ ಕಾರ್ಯಕ್ರಮ ಹಾಗೂ ನುಡಿನಮನ ಕಾರ್ಯಕ್ರಮದಲ್ಲಿ ಭಾಗಿಯಾಗಲು ಫೆ.1ರಂದು ಮುಖ್ಯಮಂತ್ರಿಗಳು ರಾಯಚೂರು ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ ಅವರೊಂದಿಗೆ ಜನವರಿ 31ರಂದು ಸಂಜೆ ದೇವದುರ್ಗ ತಾಲ್ಲೂಕಿನ ತಿಂಥಣಿ ಬ್ರಿಜ್‌ನ ಶ್ರೀಕಾಗಿನೆಲೆ ಮಹಾಸಂಸ್ಥಾನದ ಕನಕ ಗುರುಪೀಠದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಮುಖ್ಯಮಂತ್ರಿಗಳು ಆಗಮಿಸಲು ಗುರುತಿಸಿದ ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ಬಂಡೊಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಹೆಲಿಪ್ಯಾಡ್ ಸ್ಥಳಕ್ಕೆ ಸಹ ಭೇಟಿ ನೀಡಿ, ಸುರಕ್ಷತಾ ಕ್ರಮಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಭದ್ರತಾ ಕಾರ್ಯಕ್ಕೆ ನಿಯೋಜಿಸಿ ಸುರಕ್ಷತೆ, ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಇದೆ ವೇಳೆ ಜಿಲ್ಲಾಧಿಕಾರಿಗಳು, ಬ್ರಹ್ಮಲೀನರಾದ ಪರಮಪೂಜ್ಯ ಶ್ರೀಸಿದ್ದರಾಮನಂದಪುರಿಸ್ವಾಮೀಜಿಯವರ ದರ್ಶನ ಪಡೆದುಕೊಂಡರು.



ಕಲ್ಬುರ್ಗಿಯಲ್ಲಿ ನಡೆದ ಮಲ್ಲಮ್ಮ ನುಡಿಯ ಹೈದರಾಬಾದ್ ಕರ್ನಾಟಕದ ಬ್ಯೂರೊ ಸಭೆಯಲ್ಲಿ ಪಾಲ್ಗೊಂಡ ಪತ್ರಿಕಾ ಬಳಗ...

## ಜಿಬಿಎ ಪ್ರಬಲ ಅಕಾಂಕ್ಷಿ ರೇಣುಕಾ



**ಪೀಣ್ಯದಾಸರಹಳ್ಳಿ:** ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ರಾಜಗೋಪಾಲನಗರ ವಾರ್ಡ್ ಮಹಿಳಾ ಮಾಜಿ ಅಧ್ಯಕ್ಷರಾಗಿ ಹಾಗೂ ನಿಷ್ಠಾವಂತ ಕಾಂಗ್ರೆಸ್ ಕಾರ್ಯಕರ್ತರಾಗಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, ರಾಜೇಶ್ವರಿವಾರ್ಡ್ ನ ಕಾಂಗ್ರೆಸ್ ಪಕ್ಷದಿಂದ ಮುಂಬರುವ ಜಿಬಿಎ ಚುನಾವಣಾ ಆಕಾಂಕ್ಷಿಯಾಗಿ ರೇಣುಕಾ ಸ್ಪರ್ಧೆಗೆ ಇಳಿಯುವುದು ಬಹುತೇಕ ಖಚಿತವಾಗಲಿದೆ.

ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠಾವಂತ ಕಾರ್ಯಕರ್ತರಾಗಿ ಪಕ್ಷಕ್ಕಾಗಿ ದುಡಿಯುತ್ತಿದ್ದು ಜೊತೆಗೆ ಕಿರುತೆರೆ ಹಾಗೂ ಸಿನಿಮಾನಟಿ ಆಗಿದ್ದು ರಾಜೇಶ್ವರಿನಗರ ವಾರ್ಡ್ ನಲ್ಲಿ ಚಿರಪರಿಚಿತರಾಗಿದ್ದು ರಾಜಕೀಯದಲ್ಲಿ ತಮ್ಮ ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ.

ಮುಂಬರುವ ಜಿಬಿಎ ಚುನಾವಣೆಯಲ್ಲಿ ರಾಜೇಶ್ವರಿನಗರ ವಾರ್ಡ್‌ನಿಂದ ಸ್ಪರ್ಧಿಸಿ ಜನಸೇವೆಗೆ ಮುಂದಾಗಿದ್ದು ಪಕ್ಷ ಇವರ ನಿಷ್ಠಾವಂತ ಸೇವೆಯನ್ನು ಗುರುತಿಸಿ ಸ್ಪರ್ಧಿಸಲು ಅವಕಾಶ ನೀಡಿವುದು ಬಹುತೇಕ ಖಚಿತವಾಗಿದ್ದು ಕಾಂಗ್ರೆಸ್ ಪಕ್ಷಕ್ಕೆ ಗೆಲುವು ತಂದುಕೊಡುವುದರಲ್ಲಿ ಸಂಶಯವಿಲ್ಲ ಹಾಗೂ ಧಾರ್ಮಿಕ ಹಾಗೂ ಸಾಮಾಜಿಕವಾಗಿ ಕಳಕಳಿಯನ್ನು ಹೊಂದಿರುವ ಇವರಿಗೆ ಹಲವು ಶ್ರೀ ಶಕ್ತಿ ಸಂಘ, ಸಂಸ್ಥೆಗಳು ಕೂಡ ಬೆಂಬಲ ವ್ಯಕ್ತಪಡಿಸಿವೆ.

ರಾಜೇಶ್ವರಿನಗರ ವಾರ್ಡ್ ಜನತೆ ಆಶೀರ್ವಾದದಿಂದ ಮುಂದಿನ ದಿನಗಳಲ್ಲಿ ಸಾರ್ವಜನಿಕರ ಸೇವೆ ಮಾಡಲು ಅವಕಾಶ ಮಾಡಿಕೊಡಲಿ ಎಂದು ಹೇಳಿದರು. ಈ ಸಂದರ್ಭದಲ್ಲಿ ಸ್ಥಳೀಯ ವಾರ್ಡ್ ನ ಹಿರಿಯ ಕಾಂಗ್ರೆಸ್ ಮಹಿಳಾ ಮುಖಂಡರಾದ ಉಷಾ ರಾಜ್, ಶಿವಶಂಕರ್, ಜಯಲಕ್ಷ್ಮಿ, ಜಗದೀಶ್, ನಾಗರಾಜ್, ಹರ್ಷಿತ್ ಗೌಡ, ಪ್ರಭಾಕರ್ ಹಾಗೂ ಮುಂತಾದವರು ಕೆಪಿಸಿಸಿ ಕಚೇರಿಗೆ ಆಗಮಿಸಿ ಡಿಡಿ ಮುಖಾಂತರ ಅರ್ಜಿ ಸಲ್ಲಿಸಿದರು.

## ಇಜೇರಿ ರಸ್ತೆಗೆ ಬೇಕಿದೆ ಕಾಯಕಲ್ಪ

• ಮಲ್ಲಮ್ಮ ನುಡಿ ವಾರ್ತೆ ಯಡ್ರಾಮಿ

ತಾಲೂಕಿನ ಇಜೇರಿ ಗ್ರಾಮದ ವಾರ್ಡ್ ನಂಬರ್ 1 ಮತ್ತು 4ರಲ್ಲಿ ಹಳೆ ಗ್ರಾಮ ಪಂಚಾಯಿತಿಯಿಂದ ಕುಡಿಯುವ ನೀರಿನ ಟ್ಯಾಂಕ್ ಗೆ ಹೋಗುವ ರಸ್ತೆ ಸಂಪೂರ್ಣವಾಗಿ ಹದಗೆಟ್ಟಿದ್ದು ಸಾರ್ವಜನಿಕರು ಪರಿದಾಡುವಂಥಾಗಿದೆ.

ಸಿಸಿ ರಸ್ತೆ ಸರಿಪಡಿಸುವಂತೆ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳಿಗೆ ಹಲವಾರು ಬಾರಿ ಮೌಖಿಕವಾಗಿ ಹಾಗೂ ಪತ್ರದ ಮೂಲಕ ಮನವಿ ಮಾಡಿಕೊಂಡರು ಇಲ್ಲಿಯವರೆಗೂ ರಸ್ತೆ ಸರಿಪಡಿಸುವ ಕೆಲಸ ಮಾಡಿಲ್ಲ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವೃದ್ಧರು ಮಕ್ಕಳು ಮತ್ತು ಅಂಗವಿಕಲರು ಇದೇ ರಸ್ತೆಯಲ್ಲಿ ಸಂಚಾರ ಮಾಡುತ್ತಿದ್ದು ಅನೇಕ



ಬಾರಿ ಬಿದ್ದ ಉದಾಹರಣೆಗಳು ಇವೆ. ರಸ್ತೆಯ ಮೇಲೆ ಚರಂಡಿ ನೀರು ಹರಿದ ನೀರಿನ ಮೇಲೆ ಮಕ್ಕಳು ಆಟ ಆಡುತ್ತಿರುವುದರಿಂದ ಮಲೇರಿಯಾ, ಡೆಂಗು ಕಾಯಿಲೆ ಬರುವ ಸಾಧ್ಯತೆ ಇದೆ ಅಂತಾರೆ ಗ್ರಾಮಸ್ಥರು. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಎಚ್ಚೆತ್ತುಕೊಂಡು ಚರಂಡಿ ರಸ್ತೆ ಮಾಡಿಸಬೇಕು. ಯಡ್ರಾಮಿ ತಾಲ್ಲೂಕಿನಲ್ಲಿ ಬರುವ ಜಿಲ್ಲಾ ಪಂಚಾಯತ ಮತಕ್ಷೇತ್ರದ ಕೇಂದ್ರ ಬಿಂದು ಈ ಗ್ರಾಮವಾಗಿದ್ದು ಅಭಿವೃದ್ಧಿ ಮರೀಚಿಕೆಯಾಗಿದೆ. ಸಿಸಿ ರಸ್ತೆಯ ಮೇಲೆ ನೀರು ನಿರಂತರವಾಗಿ ಹರಿಯುತ್ತಿರುವುದರಿಂದ ಹಲವು ರೋಗಗಳು ಉಲ್ಬಣವಾಗುತ್ತಿವೆ.

ನಾವು ಪ್ರತಿ ವರ್ಷವೂ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಮನವಿ ಮಾಡಿಕೊಳ್ಳುತ್ತೇವೆ. ಆದರೆ ಇಲ್ಲಿಯವರೆಗೂ ಹದಗೆಟ್ಟ ರಸ್ತೆ ಸರಿಪಡಿಸುವ ಮನಸ್ಸು ಅಧಿಕಾರಿಗಳು ಮಾಡಿಲ್ಲ ಇನ್ನು ಮುಂದೆ ರಸ್ತೆ ಸರಿಪಡಿಸದೆ ಹೋದಲ್ಲಿ ಒಂದು ಮತ್ತು ನಾಲ್ಕನೇ ವಾರ್ಡಿನ ಜನರು ಪಂಚಾಯಿತಿ ಎದುರು ಹೋರಾಟ ಮಾಡಬೇಕಾಗುತ್ತದೆ ಎಂದು ಶಿವಕುಮಾರ್ ನಾಟೇಕರ್ ಎಚ್ಚರಿಸಿದ್ದಾರೆ.

## ಹಬ್ಬಗಳ ಆಚರಣೆಯ ಮೂಲಕ ಮಹಿಳಾ ಗೌರವ, ಸಂಸ್ಕೃತಿ ಸಂರಕ್ಷಣೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಸಂಕ್ರಾಂತಿ ಉತ್ಸವದಂತಹ ಸಾಂಪ್ರದಾಯಿಕ ಹಬ್ಬಗಳ ಮೂಲಕ ಮಹಿಳೆಯರ ಗೌರವ, ಪರಿಸರ ಸಂರಕ್ಷಣೆ ಹಾಗೂ ನಮ್ಮ ಶ್ರೇಷ್ಠ ಸಂಸ್ಕೃತಿಯ ಮೌಲ್ಯಗಳನ್ನು ಕಾಪಾಡುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ರಾಷ್ಟ್ರೀಯ ಸೇವಿಕಾ ಸಮಿತಿಯ ಜಿಲ್ಲಾ ಕಾರ್ಯವಾಹಿಕರಾದ ಮೀರಾ ಮಂತಾಳ್ಕರ ಅವರು ಹೇಳಿದರು.

ಪಟ್ಟಣದ ಖಡಕೇಶ್ವರ ವಿದ್ಯಾಮಂದಿರದಲ್ಲಿ ರಾಷ್ಟ್ರೀಯ ಸೇವಿಕಾ ಸಮಿತಿ, ಭಾಲ್ಕಿ ಘಟಕದ ವತಿಯಿಂದ ಸಂಕ್ರಾಂತಿ ಉತ್ಸವದ ಅಂಗವಾಗಿ ಮಾತೆಯರಿಗೆ ಉಡಿ ತುಂಬುವ ಸಾಂಪ್ರದಾಯಿಕ ಕಾರ್ಯಕ್ರಮವನ್ನು ಭಕ್ತಿಭಾವ ಹಾಗೂ ಸಂಸ್ಕೃತಿಯ ಸೊಗಡಿನೊಂದಿಗೆ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಮೀರಾ ಮಂತಾಳ್ಕರ ಅವರು, ಸಂಕ್ರಾಂತಿ ಹಬ್ಬವು ಕೃಷಿ ಸಂಸ್ಕೃತಿ, ಋತುಚಕ್ರ ಮತ್ತು ಸಾಮಾಜಿಕ ಏಕತೆಯ ಪ್ರತೀಕವಾಗಿದ್ದು, ಕುಟುಂಬ ಹಾಗೂ ಸಮಾಜವನ್ನು ಒಗ್ಗೂಡಿಸುವ ಮಹತ್ವದ ಹಬ್ಬವಾಗಿದೆ ಎಂದು ತಿಳಿಸಿದರು.



ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಶಿವಲಿಂಗ ಕುಂಬಾರ ಅವರು, ನಮ್ಮ ಸಂಸ್ಕೃತಿಯಲ್ಲಿ ಮಹಿಳೆಯರು ಕೇವಲ ಕುಟುಂಬದ ಆಧಾರವಷ್ಟೇ ಅಲ್ಲ, ಸಂಸ್ಕೃತಿ, ಸಂಸ್ಕಾರ ಮತ್ತು ಪರಂಪರೆಯನ್ನು ತಲೆಮಾರಿಗೆ ಸಾಗಿಸುವ ಮಹತ್ವದ ಪಾತ್ರವಹಿಸುತ್ತಿದ್ದಾರೆ ಎಂದು ಅಭಿಪ್ರಾಯಪಟ್ಟರು.

ರಾಷ್ಟ್ರೀಯ ಸೇವಿಕಾ ಸಮಿತಿ ಸ್ಥಾಪನೆಯಾಗಿ 90 ವರ್ಷಗಳು ಪೂರೈಸಿರುವ ಸ್ಮರಣಾರ್ಥವಾಗಿ ಪರಿಸರ ಸಂರಕ್ಷಣೆ ಮತ್ತು ಹಸಿರು ಬದುಕಿನ ಸಂದೇಶದೊಂದಿಗೆ 90 ಮಹಿಳೆಯರಿಗೆ ಸಸಿಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ 180 ಕ್ಕೂ ಹೆಚ್ಚು ಮಹಿಳೆಯರು ಉತ್ಸಾಹದಿಂದ ಭಾಗವಹಿಸಿ ಸಂಕ್ರಾಂತಿ ಹಬ್ಬದ ಸಂಭ್ರಮವನ್ನು ಹಂಚಿಕೊಂಡರು. ಎಲ್ಲ ಮಾತೆಯರಿಗೆ ಎಳ್ಳು-ಬೆಲ್ಲ, ಅರಸಿಣ-ಕುಂಕುಮ ನೀಡಿ ಉಡಿ ತುಂಬಿ ಗೌರವಪೂರ್ವಕವಾಗಿ ಕಳುಹಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ.ಸ್ನೇಹಾ ಭಾಲ್ಕೆ ಮಾತನಾಡಿದರು. ಮೇಘಾ ಅಮರ್ ಹಲಮಂಡಗೆ, ಸರೋಜನಿ ಕುಂಬಾರ, ದೀಪಿಕಾ ಪವಾರ, ರೇಖಾ ತಾಟೆ, ಪ್ರಿಯಾ ದೇಶಮುಖೆ, ರಾಜೇಶ್ವರಿ ಅಷ್ಟೂರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಶಿವಲೀಲಾ ಮುದ್ದಾಳೆ ನಿರೂಪಿಸಿದರು. ಬಸವಾಂಜಲಿ ಸುತಾರ ಅವರು ವಂದಿಸಿದರು.

## ಪ್ರತೀ ಐಡಿಯಾಗೂ ಒಂದು ಕೊನೆ ಇದೆ 'ಟೇಕ್ ಆಫ್' ನಿರ್ದೇಶಕ



**ಬೆಂಗಳೂರು:** 'ಎಲ್ಲರೂ ಅವರವರ ದೃಷ್ಟಿಕೋನದಲ್ಲಿಯೇ ಒಂದು ವಿಚಾರವನ್ನು ನೋಡುತ್ತಿರುತ್ತಾರೆ ಮತ್ತು ಪ್ರತಿಕ್ರಿಯಿಸುತ್ತಿರುತ್ತಾರೆ. ಸಿನಿಮಾ ಕೂಡ ನಿರ್ದೇಶಕ ಯಾವುದೋ ಒಂದು ವಿಚಾರಕ್ಕೆ ತೋರುವ ಪ್ರತಿರೋಧವೇ. ನನ್ನ ಬಹುತೇಕ ಸಿನಿಮಾಗಳಿಗೆ ಸೆನ್ಸಾರ್ ಸಮಸ್ಯೆ ಆಗಿದೆ. ವಿದೇಶಗಳಲ್ಲಿಯೂ ಸೆನ್ಸಾರ್ ಸಮಸ್ಯೆ ಆಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ನಿರ್ದೇಶಕರಿಗೂ ಸ್ವಾತಂತ್ರ್ಯ ಕೊಡಬೇಕು ಎಂದು ನಾನು ಭಾವಿಸುತ್ತೇನೆ ಎಂದು 'ಟೇಕ್ ಆಫ್, 'ಸೀ ಯೂ ಸೂನ್ ಮುಂತಾದ ಜನಪ್ರಿಯ ಮಲಯಾಳಂ ಸಿನಿಮಾಗಳ ನಿರ್ದೇಶಕ ಮಹೇಶ್ ನಾರಾಯಣನ್ ಹೇಳಿದರು.

17ನೇ ಬೆಂಗಳೂರು ಅಂತಾರಾಷ್ಟ್ರೀಯ ಚಿತ್ರೋತ್ಸವದ ರೀಥಿಂಕ್ ನರೇಟಿವ್ ಎಂಬ ಸಂವಾದದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಾನು ಇರಾನ್ ಚಿತ್ರೋತ್ಸವಕ್ಕೆ ಹೋದಾಗ ಖ್ಯಾತ ನಿರ್ದೇಶಕ ಜಾಫರ್ ಫನಾಹಿ ಕುರಿತು ಅವರಿಗೆ ಸಮಸ್ಯೆಯಾಗುತ್ತಿದೆ ಎಂದು ಮಾತನಾಡಿದೆ. ಆದರೆ, ಅಲ್ಲಿನವರು ಅಲ್ಲಗಳೆದರು. ನೀವು ಪಾಶ್ಚಿಮಾತ್ಯ ಮಾಧ್ಯಮಗಳ ಕಣ್ಣಿಂದ ಇಲ್ಲಿನ ಕತೆ ತಿಳಿದುಕೊಳ್ಳುತ್ತೀರಿ. ಆದರೆ ವಾಸ್ತವವೇ ಬೇರೆ ಇರುತ್ತದೆ. ಎಲ್ಲರೂ ಅವರವರ ಲೆನ್ಸ್ ಗಳಿಂದ ಪರಿಸ್ಥಿತಿ ನೋಡುತ್ತಾರೆ, ಬೇರೆ ಲೆನ್ಸ್‌ಗಳಿಂದ ನೋಡುವುದು ಸಾಧ್ಯವಾಗಬೇಕು ಎಂದು ಹೇಳಿದರು.

## ಜಿಲ್ಲೆಯಲ್ಲಿ ಕರವಸೂಲಿ ಅಭಿಯಾನ ಹಮ್ಮಿಕೊಳ್ಳಿ: ಸಿಇಒ ವರ್ಣಿತ್ ನೇಗಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ಜಿಲ್ಲಾ ಪಂಚಾಯತ್ ವತಿಯಿಂದ ಕರವಸೂಲಿ ಅಭಿಯಾನವನ್ನು ಫೆಬ್ರವರಿ 8ರವರೆಗೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಹಮ್ಮಿಕೊಳ್ಳಬೇಕೆಂದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ತಿಳಿಸಿದ್ದಾರೆ.

ಜನವರಿ 30 ರಿಂದ ಫೆ. 8ರ ವರೆಗೆ ಬೆಳಿಗ್ಗೆ 8 ರಿಂದ ಸಾಯಂಕಾಲ 6 ಗಂಟೆಯವರೆಗೆ ಕರವಸೂಲಿ ಅಭಿಯಾನವನ್ನು ಹಮ್ಮಿಕೊಂಡು ತೆರಿಗೆ ವಸೂಲಾತಿಯಲ್ಲಿ ಶೇ. 100ರಷ್ಟು ಪ್ರಗತಿಯನ್ನು ಸಾಧಿಸಬೇಕಾಗಿರುವ ಕಾರಣ ಕೆಲ ಅಂಶಗಳ ಕುರಿತು ಶ್ರಮವಹಿಸಬೇಕಾಗಿದ್ದು, ಜಿಲ್ಲೆಯ ಎಲ್ಲಾ ಗ್ರಾಮ



ಪಂಚಾಯತ್‌ಗಳಲ್ಲಿ ಫೆ. 8ರ ವರೆಗೆ ಬೆಳಿಗ್ಗೆ 8 ರಿಂದ ಸಾಯಂಕಾಲ 6 ಗಂಟೆಯವರೆಗೆ ಕಡ್ಡಾಯವಾಗಿ ಕರವಸೂಲಿ ಅಭಿಯಾನವನ್ನು ಕೈಗೊಳ್ಳಬೇಕು. ಪ್ರತಿ ಗ್ರಾಮ ಪಂಚಾಯಿತಿಯು ಈ ಅಭಿಯಾನದ ಸಮಯದಲ್ಲಿ ಗರಿಷ್ಠ ಪ್ರಮಾಣದ ಕರವಸೂಲಾತಿಯ ಕುರಿತು ಅಗತ್ಯಕ್ರಮ ಕೈಗೊಳ್ಳಬೇಕು. ಕರವಸೂಲಾತಿ ಆಂದೋಲನದ ಬಗ್ಗೆ ಪ್ರತಿ ಗ್ರಾಮದಲ್ಲಿ ಬ್ಯಾನರ್ ಅಳಡಿಸಿ ಪ್ರಚಾರ ಮಾಡಿ. ಗ್ರಾಮ ಪಂಚಾಯತಿಯಲ್ಲಿ ಬಾಕಿದಾರರ ಪಟ್ಟಿಯನ್ನು ತಯಾರಿಸಿ ಮನೆ ಮನೆಗೆ ಭೇಟಿ ನೀಡಿ ಕರ ವಸೂಲಾತಿಗೆ ಕ್ರಮ ಕೈಗೊಂಡು ಶೇ.100 ರಷ್ಟು ಪ್ರಗತಿಯನ್ನು ಸಾಧಿಸಬೇಕು. ಪತ್ರಿಕೆಗಳ ಮೂಲಕವು ಸಹ ಹೆಚ್ಚಿನ ಪ್ರಚಾರ ನೀಡಿ ಕರವಸೂಲಾತಿ ಆಂದೋಲನದ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಿ. ತೆರಿಗೆ ಸಂಗ್ರಹಣೆ ಮಾಡುವ ಪೂರ್ವದಲ್ಲಿ ಸ್ವಚ್ಛವಾಹಿನಿ ವಾಹನಗಳಲ್ಲಿ ಜಿಂಗಲ್ಸ್ ಮುಖಾಂತರ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಪ್ರತಿ 2 ಗಂಟೆಗೊಮ್ಮೆ ಗ್ರಾಮ ಪಂಚಾಯತಿಯಿಂದ ಕರವಸೂಲಾತಿ ಮಾಹಿತಿಯನ್ನು ತಾಲೂಕು ಪಂಚಾಯತಿ ವಿಷಯ ನಿರ್ವಾಹಕರು ಸಂಗ್ರಹಿಸಿಕೊಂಡು ಈ ಮಾಹಿತಿಯನ್ನು ಸಾಯಂಕಾಲ 6 ಗಂಟೆಯೊಳಗಾಗಿ ಜಿಲ್ಲಾ ಪಂಚಾಯತಿಯ ಸ್ವಚ್ ಭಾರತ ಮಿಷನ್ ಸಮಾಲೋಚಕರಿಗೆ ಸಲ್ಲಿಸಬೇಕು. ಈ ಎಲ್ಲಾ ಸಮಾಲೋಚಕರು ಮಾಹಿತಿಯನ್ನು ಕ್ರೋಢಿಕರಿಸಿ ಉಪ ಕಾರ್ಯದರ್ಶಿಗಳು ಜಿ.ಪಂ ಕೊಪ್ಪಳ ರವರಿಗೆ ಸಲ್ಲಿಸಬೇಕು.

ಈ ಕರವಸೂಲಾತಿ ಅಭಿಯಾನದಲ್ಲಿ ಕರವಸೂಲಿ ಮಾಡಲು ವಿಫಲರಾದಲ್ಲಿ ಅಂತಹ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಫೆಬ್ರವರಿ 11 ರಂದು ಖುದ್ದಾಗಿ ಸೂಕ್ತ ವಿವರಣೆಯೊಂದಿಗೆ ಜಿ.ಪಂ ಕಾರ್ಯಾಲಯಕ್ಕೆ ಕಡ್ಡಾಯವಾಗಿ ಹಾಜರಾಗಬೇಕು ಎಂದು ಕೊಪ್ಪಳ ಜಿಲ್ಲಾ ಪಂಚಾಯತ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.




ಬೆಂಗಳೂರು, ಭಾರತಿಯ ದಲಿತ ಪ್ಯಾಂಥರ ಕರ್ನಾಟಕ ರಾಜ್ಯ ಸಮಿತಿ ವತಿಯಿಂದ ಭೀಮಾ ಕೂರೆಗಾಂವ್ ವಿಜಯೋತ್ಸವ ಕಾರ್ಯಕ್ರಮ ಇದೆ.,3 ರಂದು ಬೆಂಗಳೂರು ನಿಗಾಂಧಿ ಭವನದಲ್ಲಿ ಬೆಳಗ್ಗೆ 11 ಗಂಟೆಗೆ ನಡೆಯಲಿದೆ.



ಹುಣಸೂರು ತಾಲೂಕಿನ ಜೆಡಿಎಸ್ ಪಕ್ಷದ ಶಾಸಕ ಜಿಟಿ ಹರೀಶ್ ಗೌಡ 39ನೆಯ ವರ್ಷದ ಹುಟ್ಟುಹಬ್ಬವನ್ನು ನಗರದ ಮಂಜುನಾಥ್ ನ ಬಡಾವಣೆಯಲ್ಲಿರುವ ತಮ್ಮ ನಿವಾಸದಲ್ಲಿ ಪಕ್ಷದ ಕಾರ್ಯಕರ್ತರು ಅಭಿಮಾನಿಗಳು ಚುನಾಯಿತಿ ಪ್ರತಿನಿಧಿಗಳ ಪಕ್ಷ ಮುಖಂಡರು ಅವರ ನೇತೃತ್ವದಲ್ಲಿ ಅದ್ದೂರಿಯಾಗಿ ಆಚರಿಸಿಕೊಂಡರು.

## ಕಲಾವಿದ ದೇವನಾಗೇಶ್ ನಿಧನ

**ಬೆಂಗಳೂರು:** ನಾಟಕ&ಚಿತ್ರ ಕಲಾವಿದ ದೇವನಾಗೇಶ್ (62) ಅವರು ಬೆಂಗಳೂರಿನಲ್ಲಿ ನಿಧನರಾದರು. ಅವರು ಕಲಾವಿದೆಯಾಗಿದ್ದ ಪತ್ನಿ ರತ್ನನಾಗೇಶ್, ಒಬ್ಬ ಪುತ್ರನನ್ನು ಮತ್ತು ಬಂಧು ಬಳಗವನ್ನು ಅಗಲಿದ್ದಾರೆ.



ದೇವನಾಗೇಶ್ ಅಂತ್ಯಕ್ರಿಯೆ ಅವರ ಹುಟ್ಟೂರಾದ ಚನ್ನರಾಯಪಟ್ಟಣ ತಾಲೂಕು ನುಗ್ಗೇಹಳ್ಳಿ ಹೋಬಳಿ ಕಲ್ಕೆರೆ ಬಳಿ ದೇವಿಹಳ್ಳಿಯಲ್ಲಿ ಇಂದು ಸಂಜೆ ನಡೆಯಲಿದೆ.

**ಸಂತಾಪ:** ದೇವನಾಗೇಶ್ ನಿಧನಕ್ಕೆ ಚಿತ್ರರಂಗ ಮತ್ತು ಹಾಸನದ ರಂಗಸಿರಿ ಬಳಗ ತೀವ್ರ ಸಂತಾಪ ವ್ಯಕ್ತಪಡಿಸಿದೆ.

ನಾಗೇಶ್ ಪ್ರತಿಭಾವಂತ ಕಲಾವಿದರಾಗಿದ್ದರು. ಬೆಂಗಳೂರಿನಿಂದ ತಮ್ಮ ನಾಟಕ ತಂಡವನ್ನು ಕರೆತಂದು ತಗಡೂರಿನಲ್ಲಿ ನಾಟಕ ಮಾಡಿಸಿದ್ದನ್ನು ಮರೆಯುವಂತಿಲ್ಲ ಎಂದು ಹಳೆ ನೆನಪು ಮೆಲುಕು ಹಾಕಿ, ಶೋಕಿಸಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು, ನಾಗೇಶ್ ಆತ್ಮಕ್ಕೆ ಶಾಂತಿ ಸಿಗಲಿ. ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿಯನ್ನು ದೇವರು ಕರುಣಿಸಲೆಂದು ಪ್ರಾರ್ಥಿಸಿದ್ದಾರೆ.

## ಕಡೆಚೂರ-ಬಾಡಿಯಾಳ ಕೈಗಾರಿಕಾ ಪ್ರದೇಶದಲ್ಲಿ ಎರಡನೇ ಹಂತದ ಕೆಲಸ ಕೈಬಿಡಿ

• ಡಿ.ಕೆ. ದೇವಿಂದ್ರ, ಯಾದಗಿರಿ

ಗುರುಮಠಕಲ್ ಮತಕ್ಷೇತ್ರದ ಕೈಗಾರಿಕಾ ಪ್ರದೇಶದವಾದ ಕಡೆಚೂರು, ಬಾಡಿಹಾಳ್ ಏರಿಯಾದಲ್ಲಿ ಎರಡನೇ ಹಂತದ ಕೈಗಾರಿಕೆಯನ್ನು ಕೂಡಲೇ ಕೈಬೀಟ್ಟು, ರೈತರ ತೊಂದರೆಗಳನ್ನು ನೀಗಿಸಬೇಕೆಂದು ಶಾಸಕ ಶರಣಗೌಡ ಕಂದಕೂರ ಅವರು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಅಧಿವೇಶನದಲ್ಲಿ ಮಾತನಾಡಿದ ಅವರು, ಕೈಗಾರಿಕೆಗಳನ್ನು ಸ್ಥಾಪಿಸಲು ರೈತರಿಂದ 3200 ಎಕರೆ ಭೂಮಿಯನ್ನು ಖರೀಸಿದಿ ವಿಷಪೂರಿತ ಕಾರ್ಖಾನೆಗಳನ್ನು ಸ್ಥಾಪಿಸುವ ಮೂಲಕ ಜನರ ಜೀವ ಬಲಿ ಪಡೆಯುತ್ತಿವೆ. ಇದಕ್ಕೆ ಈ ಹಿಂದೆಯೇ ನಮ್ಮ ತಂದೆ ಲಿಂ.ನಾಗನಗೌಡ ಕಂದಕೂರ ಅವರು ಶಾಸಕರಾಗಿದ್ದ ಈ ಬಗ್ಗೆ ಸರ್ಕಾರದ ಗಮನಕ್ಕೆ ತಂದು ಎರಡನೇ ಹಂತದ ಕೆಲಸ ಕೈಬಿಟ್ಟು, ರೈತರಿಗೆ ಎಲ್ಲ ರೀತಿಯಲ್ಲಿ ಅನುಕೂಲ ಮಾಡಿಕೊಡಬೇಕೆಂದಿದ್ದರೆಂದು ಶಾಸಕರು ವಿವರಿಸಿದರು. ನಂತರ ಈ ಸರ್ಕಾರ ಒಂದು ಕಮಿಟಿ



ರಚಿಸಿ,ಆ ಸ್ಥಳಕ್ಕೆ ಕಳುಹಿಸಿ ರೈತರಿಂದ ಈ ಬಗ್ಗೆ ಕೇಳಿದಾಗ ಅದಕ್ಕೆ ಶೇ.90 ರಷ್ಟು ವಿರೋಧ ವ್ಯಕ್ತವಾಯಿತು. ಆಗ ಅದನ್ನು ಕೈಬಿಡುವುದಾಗಿ ಹೇಳಿದರೂ ಅದನ್ನೂ ಇನ್ನೂ ಜಾರಿ ಮಾಡಿಲ್ಲ ಎಂದು ಆರೋಪಿಸಿದರು. ಆ ಪ್ರದೇಶದಲ್ಲಿ ಜನರ ಅನುಕೂಲಕ್ಕಾಗಿ ಆಸ್ಪತ್ರೆಯೊಂದು ಸ್ಥಾಪಿಸಬೇಕು.ಈ ಎಲ್ಲ ವಿಷಯಗಳು ಕೈಗಾರಿಕಾ ಸಚಿವರ ಗಮನಕ್ಕೆ ತರಬೇಕೆಂದು ಶಾಸಕ ಶರಣಗೌಡ ಅವರು ಸಚಿವ ಬೈರತಿ ಅವರಿಗೆ ಹೇಳಿದರು. ಇದಕ್ಕೆ ಉತ್ತರಿಸಿದ ಸಚಿವ ಸುರೇಶ ಬೈರತಿ, ಶಾಸಕರ ಬೇಡಿಕೆಗೆ ಸರ್ಕಾರ ಸಕರಾತ್ಮಕವಾಗಿ ಸ್ಪಂಧಿಸಲಿದೆ ಎಂದರು.

## ಮಂಡಲ ಅಧ್ಯಕ್ಷ ವೀರಣ್ಣ ಕಾರಬಾರಿಯನ್ನು ಅಧಿಕಾರದಿಂದ ಕೆಳಗಿಳಿಸಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲೂಕಿನಲ್ಲಿ ಬಿಜೆಪಿ ನಿಷ್ಠಾವಂತ ಕಾರ್ಯಕರ್ತರನ್ನು ಹಾಗೂ ಹಿರಿಯ ನಾಯಕರನ್ನು



ಕಡೆಗಣಿಸುತ್ತಿರುವುದು ಹಾಗೂ ಜವಾಬ್ದಾರಿ ಹುದ್ದೆಯಲ್ಲಿ ಇರುವವರನ್ನು ಪಕ್ಷದ ಶಿಸ್ತನ್ನು ಪಾಲಿಸದೆ ತಮ್ಮ ಮನ ಬಂದಂತೆ ಪದೇ ಪದೇ ಬದಲಾಯಿಸಿ ಪಕ್ಷಕ್ಕೆ ಮುಜುಗರ ಉಂಟು ಮಾಡುವ ಮಂಡಲ ಅಧ್ಯಕ್ಷರಾದ ವೀರಣ್ಣ ಕಾರಬಾರಿಯನ್ನು ಕೂಡಲೆ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಸಬೇಕೆಂದು ಬಿಜೆಪಿ ಹಿರಿಯ ಮುಖಂಡ ಶಿವಾಜಿ ಮೇತ್ರೆ ಆಗ್ರಹಿಸಿದ್ದಾರೆ. ಪತ್ರಿಕೆಯೊಂದಿಗೆ ಪ್ರತಿಕ್ರಿಯೆ ನೀಡಿ ಈ ಹಿಂದೆ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿಯಾದ ಎನ್ ರವಿಕುಮಾರ್, ರಾಜ್ಯ ಕಾರ್ಯದರ್ಶಿ ಹಾಗೂ ಬೀದರ್ ಶಾಸಕರಾದ ಶೈಲೇಂದ್ರ ಬೆಲ್ದಾಳೆ, ರಾಜ್ಯ ಕಾರ್ಯದರ್ಶಿ ತಮ್ಮೆಶ ಗೌಡ ಅವರಲ್ಲಿ ಕಳಕಳಿಯಿಂದ ಈ ಹಿಂದೆಯೂ ತಮ್ಮ ಗಮನಕ್ಕೆ ತಂದಿರುತ್ತೇನೆ ಆದರೂ ತಾವು ಯಾವುದೆ ಕ್ರಮ ಕೈಗೊಂಡಿರುವುದಿಲ್ಲ. ಆದರೆ ಮುಂದೆ ಭಾಲ್ಕಿಯಲ್ಲಿ ಯಾವುದೆ ನಿಷ್ಠಾವಂತ ಕಾರ್ಯಕರರಿಗೆ ಅನ್ಯಾಯವಾಗದಂತೆ ತಾವುಗಳು ಮಂಡಲ ಅಧ್ಯಕ್ಷರ ವಿರುದ್ಧ ಕ್ರಮ ಕೈಗೊಳ್ಳಬೇಕು. ಪಕ್ಷದ ನಿಷ್ಠಾವಂತ ಕಾರ್ಯಕರ್ತರನ್ನು ಉಳಿಸಬೇಕು ಮತ್ತು ಬೆಳೆಸಬೇಕು ಎಂದು ತಿಳಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)